ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 146
20–11–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 146

## ವಿಧಾನ ಸೌಧದ ಎದುರೇ ದರೋಡೆ, ಹೊಡೆದಾಟ: ಕೇಸ್ ದಾಖಲು

**ಬೆಂಗಳೂರು :** ಅತಿ ಹೆಚ್ಚು ಭದ್ರತೆ ಇರುವ ವಿಧಾನಸೌಧ, ಹೈಕೋರ್ಟ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ದರೋಡೆ ಮತ್ತು ಹಲ್ಲೆ ಪ್ರಕರಣಗಳು ನಡೆದಿವೆ. ವಿಧಾನಸೌಧದ ಮೆಟ್ರೋ ನಿಲ್ದಾಣದ ಮುಂಭಾಗದಲ್ಲಿ ಯುವಕರ ಗುಂಪೊಂದು ಒಬ್ಬ ವಿದ್ಯಾರ್ಥಿ ಮತ್ತು ಅವರ ಸಹೋದರನ ಮೇಲೆ ಹಲ್ಲೆ ನಡೆಸಿ ದರೋಡೆ ಮಾಡಿದೆ. ಆರೋಪಿಗಳು ವಿದ್ಯಾರ್ಥಿಯಿಂದ ಸುಮಾರು 9,182 ನಗದು ಹಣ ಮತ್ತು ಮೊಬೈಲ್ ಫೋನ್ ಸೇರಿದಂತೆ ಬೆಲೆಬಾಳುವ ವಸ್ತುಗಳನ್ನು ಕಿತ್ತುಕೊಂಡಿದ್ದಾರೆ. ಇದೇ ಸ್ಥಳದಲ್ಲಿ ನಡೆದ ಮತ್ತೊಂದು ಘಟನೆಯಲ್ಲಿ, ನೇಪಾಳ ಮೂಲದ ಸುಮಾರು 40 ರಿಂದ 50 ಯುವಕರ ಗುಂಪೊಂದು ಪರಸ್ಪರ ಹೊಡೆದಾಡಿಕೊಂಡಿದೆ. ಮಾಹಿತಿ ತಿಳಿದ ಕೂಡಲೇ ಪೊಲೀಸರು ಸ್ಥಳಕ್ಕೆ ಧಾವಿಸಿ, ಲಾಠಿ ಬೀಸಿ ಗುಂಪನ್ನು ಚದುರಿಸಿದ್ದಾರೆ.

## ಆಂಧ್ರಪ್ರದೇಶದಲ್ಲಿ ಮುಂದುವರೆದ ಕಾರ್ಯಾಚರಣೆ : 7 ನಕ್ಸಲರ ಹತ್ಯೆ


**ಅಮರಾವತಿ :** ಆಂಧ್ರಪ್ರದೇಶದ ಮಾರೆಡುಮಿಲ್ಲಿಯಲ್ಲಿ ನಕ್ಸಲ್ ಹತ್ಯಾ ಕಾರ್ಯಚರಣೆ ಮುಂದುವರೆದಿದೆ. ನಿನ್ನೆಯಿಂದ ನಿರಂತರವಾಗಿ ನಡೆಸಲಾಗುತ್ತಿರುವ ಈ ಕಾರ್ಯಚರಣೆಯಲ್ಲಿ ಇದುವರೆಗೂ 7 ನಕ್ಸಲರನ್ನು ಹತ್ಯೆ ಮಾಡಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ನಿನ್ನೆಯ ಕಾರ್ಯಾಚರಣೆಯ ಮುಂದುವರಿದಿದ್ದು, ಇಲ್ಲಿಯವರೆಗೆ ಏಳು ಮಾವೋವಾದಿಗಳು ಸಾವನ್ನಪ್ಪಿದ್ದಾರೆ ಎಂದು ಎಪಿ ಗುಪ್ತಚರ ಎಡಿಜಿ ಮಹೇಶ್ ಚಂದ್ರ ಲಡ್ಡಾ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಗುರುತಿನ ಪ್ರಕ್ರಿಯೆ ನಡೆಯುತ್ತಿರುವಾಗಲೂ ಸತ್ತವರಲ್ಲಿ ಮೂವರು ಮಹಿಳಾ ಮಾವೋವಾದಿಗಳು ಸೇರಿದ್ದಾರೆ ಎಂದು ಅವರು ಹೇಳಿದ್ದಾರೆ.ಒಬ್ಬ ವ್ಯಕ್ತಿಯನ್ನು ಮೇತುರಿ ಜೋಖಾ ರಾವ್ ಅಲಿಯಾಸ್ ಶಂಕರ್ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು.

ಶ್ರೀಕಾಕುಲಂ ಮೂಲದ ಶಂಕರ್ ಆಂಧ್ರ ಒಡಿಶಾ ಗಡಿ (ಎಒಬಿ) ಯ ಉಸ್ತುವಾರಿ (ಎಸಿಎಂ) ಆಗಿದ್ದರು ಮತ್ತು ತಾಂತ್ರಿಕ ವಿಷಯಗಳು, ಶಸ್ತ್ರಾಸ್ತ್ರ ತಯಾರಿಕೆ, ಸಂವಹನದಲ್ಲಿ ಪರಿಣತಿ ಹೊಂದಿದ್ದರು ಎಂದು ಪ್ರಾಥಮಿಕ ಮಾಹಿತಿಯ ಆಧಾರದ ಮೇಲೆ ಅಧಿಕಾರಿ ತಿಳಿಸಿದ್ದಾರೆ.

## ಜೈಲಿನಲ್ಲಿ ಕೈದಿಗಳ ಪಾರ್ಟಿ ವಿಡಿಯೋ ವೈರಲ್ ಪ್ರಕರಣ; ವಿಚಾರಣೆ ವೇಳೆ ವಿಜಯಲಕ್ಷ್ಮಿ ಹೆಸರು ಹೇಳಿದ ಧನ್ವೀರ್!



**ಬೆಂಗಳೂರು:** ಜೈಲಿನಲ್ಲಿ ಕೈದಿಗಳ ಗುಂಡು ಪಾರ್ಟಿಯ ವಿಡಿಯೋ ವೈರಲ್ ಪ್ರಕರಣದಲ್ಲಿ ನಟ ದರ್ಶನ್ ಪತ್ನಿ ವಿಜಯಲಕ್ಷ್ಮೀಗೆ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಇತ್ತೀಚೆಗೆ ಸಿಸಿಬಿ ಪೊಲೀಸರು ನಟ ಧನ್ವೀರ್ ಗೌಡರನ್ನು ಕರೆಸಿ ವಿಚಾರಣೆ ನಡೆಸಿದ್ದರು. ಅವರ ಫೋನ್‌ನಲ್ಲಿ ಯಾವುದೇ ದಾಖಲೆ ಸಿಕ್ಕಿರಲಿಲ್ಲ ಎನ್ನಲಾಗಿತ್ತು. ಆದರೆ, ಮತ್ತೊಮ್ಮೆ ವಿಚಾರಣೆಗೆ ಕರೆದಾಗ ವಿಜಯಲಕ್ಷ್ಮೀ ಹೆಸರನ್ನು ಧನ್ವೀರ್ ಹೇಳಿದ್ದಾರೆ ಎಂದು ತಿಳಿದುಬಂದಿದೆ.

ಎರಡನೇ ನೋಟೀಸ್ ವೇಳೆ ವಿಜಯಲಕ್ಷ್ಮೀ ಹೆಸರನ್ನು ಧನ್ವೀರ್ ಬಾಯಿ ಬಿಟ್ಟಿದ್ದಾರೆ. ಲಾಯರ್‌ನಿಂದ ನನಗೆ ವಿಡಿಯೋ ಬಂತು, ನಾನು ವಿಜಯಲಕ್ಷ್ಮೀಗೆ ಕಳುಹಿಸಿದ್ದೆ. ನಾನು ವಿಡಿಯೋ ವೈರಲ್ ಮಾಡಿಲ್ಲ, ಅದು ಹೇಗೆ ವೈರಲ್ ಆಯ್ತೋ ಗೊತ್ತಿಲ್ಲ ಎಂದಿದ್ದಾರೆ. ಈ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತನಿಖಾಧಿಕಾರಿ ತಂದಿದ್ದಾರೆ.

ವಿಜಯಲಕ್ಷ್ಮೀ ವಿಚಾರಣೆಗೆ ಸಿದ್ಧತೆ: ಇನ್ನು ವಿಜಯಲಕ್ಷ್ಮೀಯನ್ನು ವಿಚಾರಣೆಗೆ ಕರೆಯೋ ಬಗ್ಗೆ ಚರ್ಚೆ ನಡೆದಿದ್ದು, ಧನ್ವೀರ್ ಸಂಪೂರ್ಣ ಸತ್ಯ ಬಾಯಿಬಿಟ್ಟಿಲ್ಲ ಎಂದರೆ ಕರೆಸಿ ಎಂದು ಹಿರಿಯ ಅಧಿಕಾರಿಗಳು ಸೂಚಿಸಿದ್ದಾರೆ. ಹೀಗಾಗಿ ಕೇಸ್‌ನಲ್ಲಿ ವಿಜಯಲಕ್ಷ್ಮೀಗೆ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ.

ವಿಡಿಯೋ ಅಪ್‌ಲೋಡ್ ಮಾಡಿದ ಅಕೌಂಟ್‌ಗಳ ಪತ್ತೆಗೆ ಖಾಕಿ ಮುಂದಾಗಿದ್ದು, ಮೆಟಾಗೆ ಈಗಾಗಲೇ ಪರಪ್ಪನ ಅಗ್ರಹಾರ ಪೊಲೀಸರು ಪತ್ರ ಬರೆದಿದ್ದಾರೆ ಎನ್ನಲಾಗಿದೆ. ರಾಜಾತಿಥ್ಯದ ವಿಡಿಯೋ ಅಟ್ಯಾಚ್ ಮಾಡಿ ಪೊಲೀಸರು (ಇ-ಮೇಲ್ ಮೂಲಕ) ಪತ್ರ ಬರೆದಿದ್ದು, ಈ ವಿಡಿಯೋ ಎಷ್ಟು ಅಕೌಂಟ್‌ಗಳಲ್ಲಿ ಪೋಸ್ಟ್ ಆಗಿದೆ ಎಂದು ಮಾಹಿತಿ ಕೇಳಿದ್ದಾರೆ.

ಕೈದಿ ಮೊಬೈಲ್‌ನಿಂದ ವಿಡಿಯೋ ಚಿತ್ರೀಕರಣ

ಈಗಾಗಲೇ ವಿಡಿಯೋ ಮಾಡಿರುವ ಕೈದಿಯ ವಿಚಾರಣೆ ನಡೆದಿದ್ದು, ವಿಚಾರಣೆ ವೇಳೆ ವಿಡಿಯೋ ಚಿತ್ರೀಕರಿಸಿದ್ದ ಮೊಬೈಲ್ ಇಲ್ಲ ಅಂತ ಕೈದಿ ಹೇಳಿದ್ದಾನೆ. 2023ರಲ್ಲಿ ಜೈಲಿನ ಮೇಲೆ ನಿಮ್ಮ ಪೊಲೀಸರೇ ದಾಳಿ ಮಾಡಿದ್ದರು. ಆಗ ಫೋನ್ ಸೀಜ್ ಮಾಡಿದ್ದಾರೆ. ಆದರೆ ವಿಡಿಯೋ ಹೇಗೆ ವೈರಲ್ ಆಯ್ತೋ ಗೊತ್ತಿಲ್ಲ ಎಂದು ಕೈದಿ ಹೇಳಿದ್ದಾನೆ. ಸದ್ಯ ಈ ಬಗ್ಗೆ ಪರಪ್ಪನ ಅಗ್ರಹಾರ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಇಂದು ನಿತೀಶ್ ಪಟ್ಟಾಭಿಷೇಕ:ಬಿಜೆಪಿಯ ಇಬ್ಬರಿಗೆ ಡಿಸಿಎಂ ಸ್ಥಾನ



**ಪಾಟ್ನಾ:** ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ದಿಗ್ವಿಜಯ ಸಾಧಿಸಿರುವ ಎನ್‌ಡಿಎ ಮೈತ್ರಿಕೂಟದ ನೂತನ ಸರ್ಕಾರ ನಾಳೆ ಅಸ್ತಿತ್ವಕ್ಕೆ ಬರಲಿದ್ದು ಬಿಹಾರದ ಮುಖ್ಯಮಂತ್ರಿಯಾಗಿ ನಿತೀಶ್ ಕುಮಾರ್ 10ನೇ ಬಾರಿ ಅಧಿಕಾರ ಗದ್ದುಗೆ ಏರಲಿದ್ದಾರೆ.

ನಾಳೆ ಪಾಟ್ನಾದ ಗಾಂಧಿ ಮೈದಾನದಲ್ಲಿ ನೂತನ ಮುಖ್ಯಮಂತ್ರಿಯ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದ್ದು, ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಜೊತೆ ಎನ್‌ಡಿಎ ಮೈತ್ರಿಕೂಟದ ಪಕ್ಷಗಳ ಶಾಸಕರಿಗೂ ಸಚಿವ ಸ್ಥಾನ ಭಾಗ್ಯ ಒಲಿಯಲಿದ್ದು ಜೆಡಿಯುನ 10 ಶಾಸಕರು, ಬಿಜೆಪಿಯ 9, ಎಲ್‌ಜೆಪಿ, ಎಚ್‌ಎಎಂ, ಆರ್‌ಎಲ್‌ಎಂನ ತಲಾ ಒಬ್ಬರು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸುವರು.

ಮುಖ್ಯಮಂತ್ರಿ ನಿತೀಶ್ ಕುಮಾರ್ ಜೊತೆ ಬಿಜೆಪಿಯ ಇಬ್ಬರು, ಶಾಸಕರು, ಉಪಮುಖ್ಯಮಂತ್ರಿಗಳಾಗಿ ಅಧಿಕಾರ ಸ್ವೀಕರಿಸುವರು.

ಬಿಹಾರದ ರಾಜ್ಯಪಾಲ ಆರೀಫ್ ಮೊಹ್ಮದ್ ಖಾನ್ ಅವರು ನೂತನ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಸಚಿವರುಗಳಿಗೆ ಅಧಿಕಾರ ಗೌಪ್ಯತೆಯ ಪ್ರಮಾಣ ವಚನ ಬೋಧಿಸುವರು.

ನಾಳೆ ನಡೆಯಲಿರುವ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ಕೇಂದ್ರ ಸಚಿವರುಗಳಾದ ಅಮಿತ್ ಶಾ, ರಾಜನಾಥ್ ಸಿಂಗ್ ಸೇರಿದಂತೆ ಹಲವು ಕೇಂದ್ರ ಸಚಿವರುಗಳು, ಎನ್‌ಡಿಎ ಆಡಳಿತವಿರುವ ರಾಜ್ಯಗಳ, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಪಾಲ್ಗೊಳ್ಳಲಿದ್ದು ನಾಳಿನ ಪ್ರಮಾಣ ವಚನ ಸ್ವೀಕಾರ ಸಮಾರಂಭ ಎನ್‌ಡಿಎನ ಶಕ್ತಿ ಪ್ರದರ್ಶನ ಒಗ್ಗಟ್ಟಿಗೂ ಸಾಕ್ಷಿಗಳಾಗಲಿದೆ.

ಎನ್‌ಡಿಯು ಮೈತ್ರಿಪಕ್ಷಗಳ ನಾಯಕರುಗಳ ಸಭೆ ಇಂದು ಪಾಟ್ನಾದಲ್ಲಿ ನಡೆಯಲಿದ್ದು ಯಾವ ಪಕ್ಷಗಳಿಂದ ಯಾರನ್ನು ಸಚಿವರನ್ನಾಗಿಸಬೇಕು ಎಂಬ ಪಟ್ಟಿಯನ್ನು ಅಂತಿಮಗೊಳಿಸಿ ಸಂಜೆ ರಾಜ್ಯಪಾಲರಿಗೆ ಹಂಗಾಮಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಸಚಿವರ ಪಟ್ಟಿಯನ್ನು ಸಲ್ಲಿಸಿ ಸರ್ಕಾರ ರಚನೆಗೆ ಹಕ್ಕು ಮಂಡಿಸುವರು.

ಬಿಹಾರದ ನೂತನ ಸರ್ಕಾರದಲ್ಲಿ ಹೊಸ ಮುಖಗಳಿಗೆ ಅವಕಾಶ ನೀಡಲು ನಿರ್ಧರಿಸಲಾಗಿದ್ದು, ಈ ಹಿಂದೆ ಸಚಿವರಾಗಿದ್ದ ಹಲವರಿಗೆ ಮತ್ತೇ ಸಚಿವ ಸ್ಥಾನ ಸಿಗುವ ಸಾಧ್ಯತೆಗಳು ಕಡಿಮೆ ಇದ್ದು ಹೊಸಬರಿಗೆ ಹೆಚ್ಚಿನ ಅವಕಾಶ ನೀಡಲು ಜೆಡಿಯು, ಬಿಜೆಪಿ ನಿರ್ಧರಿಸಿದೆ. ಬಿಜೆಪಿಯಿಂದ ಇಬ್ಬರು ಉಪಮುಖ್ಯಮಂತ್ರಿಗಳಾಗಿದ್ದು, ಹಾಲಿ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಮತ್ತೆ ಉಪಮುಖ್ಯಮಂತ್ರಿಯಾಗುವುದು ನಿಶ್ಚಿತ. ಇವರ ಜೊತೆ ವಿಜಯಕುಮಾರ್ ಸಿನ್ಹಾ ವತ್ತು ನಿತೀಶ್ ಮಿಶ್ರಾ, ಮಂಗಳ್ ಪಾಂಡೆ, ಪೈಪೋಟಿ ಇದ್ದು, ಇವರಲ್ಲಿ ಒಬ್ಬರು ಉಪಮುಖ್ಯಮಂತ್ರಿಗಳಾಗುವರು.

ಬಿಜೆಪಿಯಿಂದ ವಿಜಯ್ ಕುಮಾರ್ ಸಿನ್ಹಾ, ಮಂಗಲ್ ಪಾಂಡೆ, ನಿತೀಶ್ ಮಿಶ್ರಾ, ನಿತಿನ್ ನವೀನ್, ರೇಣು ದೇವಿ, ನೀರಜ್ ಕುಮಾರ್ ಬಬ್ಲು, ಸಂಜಯ ಸರವಾಗಿ ಹಾಗು ರಜನೀಶ್ ಕುಮಾರ್ ಸಚಿವರಾಗಿ ಪ್ರಮಾಣ ವಚನ ಸ್ವೀಕಾರ ಮಾಡುವ ಸಾಧ್ಯತೆ ಇದೆ

ಜೆಡಿಯು ಸಂಭಾವ್ಯ ಸಚಿವರು ವಿಜಯ್ ಕುಮಾರ್ ಚೌಧರಿ, ವಿಜೇಂದ್ರಯಾದವ್, ಶ್ರವಣ್ ಕುಮಾರ್, ಅಶೋಕ್ ಚೌಧರಿ, ರತ್ನೇಶ್ ಸದಾ, ಸುನಿಲ್ ಕುಮಾರ್, ಶ್ಯಾಮ್ ರಜಾಕ್, ಜಮಾ ಖಾನ್, ಲೆಸಿ ಸಿಂಗ್ ಹಾಗು ದಾಮೋದರ್ ರಾವತ್ ಸಚಿವರಾಗಿ ಪ್ರಮಾಣ ವಚನ ಸ್ವೀಕಾರ ಮಾಡು ನಿರೀಕ್ಷೆ ಇದೆ

### ಚಳಿ ಅಂತ ರೂಮ್‌ನಲ್ಲಿ ಬೆಂಕಿ ಹಾಕಿಕೊಂಡು ನಿದ್ರೆಗೆ ಜಾರಿದ ಯುವಕರು:

# ಉಸಿರುಗಟ್ಟಿ ಮೂವರು ಸಾವು



**ಬೆಳಗಾವಿ:** ರಾತ್ರಿ ರೂಮ್‌ನಲ್ಲಿ ಮಲಗಿದ್ದ ನಾಲ್ವರ ಪೈಕಿ ಮೂವರು ಯುವಕರು ಹೊಗೆಯಿಂದ ಉಸಿರುಗಟ್ಟಿ ಸಾವನ್ನಪ್ಪಿದ್ದು ಮತ್ತೊಬ್ಬ ಯುವಕ ಅಸ್ವಸ್ಥನಾಗಿರುವಂತಹ ಘಟನೆ ಅಮನ್ ನಗರದಲ್ಲಿ ನಡೆದಿದೆ. ರಿಹಾನ್ ಮತ್ತಿ(22), ಸರ್ಫರಾಜ್(22), ಮೊಯಿನ್ ನಲಬಂದ್(22) ಮೃತರು. ಗಂಭೀರವಾಗಿ ಅಸ್ವಸ್ಥಗೊಂಡಿರುವ ಮತ್ತೊಬ್ಬನಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಮಾಳಮಾರುತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

**ನಡೆದದ್ದೇನು?:** ನಿನ್ನೆ ರಾತ್ರಿ ನಾಮಕರಣ ಕಾರ್ಯಕ್ರಮ ಮುಗಿಸಿಕೊಂಡು ನಾಲ್ವರು ಯುವಕರು ಬಂದಿದ್ದಾರೆ. ಚಳಿ ಹಿನ್ನೆಲೆ ರೂಮ್‌ನಲ್ಲಿ ಬೆಂಕಿ ಹಾಕಿಕೊಂಡು ಮಲಗಿದ್ದಾರೆ. ಸೊಳ್ಳೆ ಕಾಟ ಹಿನ್ನೆಲೆ ನಾಲ್ಕೈದು ಮಸ್ಕಿಟೋ ಕಾಯಿಲ್ ಹಾಕಿ ಮಲಗಿದ್ದಾರೆ. ಹೊಗೆ ಹೊರಹೋಗಲು ಕಿಟಕಿ ಓಪನ್ ಮಾಡದ ಹಿನ್ನೆಲೆ ಇಡೀ ಕೊಠಡಿ ತುಂಬಾ ಹೊಗೆ ಆವರಿಸಿದ್ದು, ಉಸಿರುಗಟ್ಟಿ ಮೂವರು ಸಾವನ್ನಪ್ಪಿದ್ದಾರೆ. ಸದ್ಯ ಸ್ಥಳದಲ್ಲಿ ಮೃತರ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

ಇನ್ನು ಸ್ಥಳಕ್ಕೆ ಮಾಳಮಾರುತಿ ಠಾಣೆ ಪೊಲೀಸ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದು, ಸ್ಥಳ ಪಂಚನಾಮೆ ಬಳಿಕ ಮೃತದೇಹಗಳನ್ನ ಬೆಳಗಾವಿಯ ಬಿಮ್ಸ್ ಆಸ್ಪತ್ರೆ ಶವಾಗಾರಕ್ಕೆ ಸ್ಥಳಾಂತರಿಸಿದ್ದಾರೆ. ಜೊತೆಗೆ ಬೂದಿಯ ಸ್ಯಾಂಪಲ್ಸ್ ಅನ್ನು ಪೊಲೀಸರು ತೆಗೆದುಕೊಂಡು ಹೋಗಿದ್ದಾರೆ. ಇಂದು ರಾತ್ರಿಯೇ ಮರಣೋತ್ತರ ಪರೀಕ್ಷೆ ನಡೆಸಿ ಶವಸಂಸ್ಕಾರ ಸಾಧ್ಯತೆ ಇದೆ.

## ಇಂದು ರಾಜ್ಯಮಟ್ಟದ ಜಿಎಂಯು ಸೈನ್ಸ್ ಪ್ರಾಜೆಕ್ಟ್ ಎಕ್ಸ್‌ಪೋ

**ದಾವಣಗೆರೆ.ನ.19:** ಜಿಎಂ ವಿಶ್ವವಿದ್ಯಾಲಯದ ಫ್ಯಾಕಲ್ಟಿ ಆಫ್ ಬೇಸಿಕ್ ಅಂಡ್ ಅಪ್ಲೈಡ್ ಸೈನ್ಸ್ ವತಿಯಿಂದ ನವೆಂಬರ್ 20ರ ಇಂದು ಜಿಎಂಯು ಕ್ಯಾಂಪಸ್ ಆವರಣದಲ್ಲಿರುವ ಜಿಎಂಎಸ್ ಬ್ಲಾಕ್‌ನಲ್ಲಿ ರಾಜ್ಯಮಟ್ಟದ ಜಿಎಂಯು ಸೈನ್ಸ್ ಪ್ರಾಜೆಕ್ಟ್ ಎಕ್ಸ್‌ಪೋ ಹಮ್ಮಿಕೊಳ್ಳಲಾಗಿದೆ. ಸುದ್ದಿಗೋಷ್ಠಿಯಲ್ಲಿ ಜಿಎಂಯು ಮುಖ್ಯಸ್ಥ ಡಾ.ವೀರಗಂಗಾಧರ ಸ್ವಾಮಿ ಮಾಥನಾಡಿ, ಇಂದು ಬೆಳಗ್ಗೆ 10.30ಕ್ಕೆ ಪ್ರಾಜೆಕ್ಟ್ ಎಕ್ಸ್‌ಪೋವನ್ನು ಜಿಎಂಯು ಕುಲಪತಿ ಡಾ.ಎಸ್.ಆರ್. ಶಂಕಪಾಲ್, ಉಪ ಕುಲಪತಿ ಡಾ.ಹೆಚ್.ಡಿ.ಮಹೇಶಪ್ಪ ಉದ್ಘಾಟಿಸುವರು. ಕುಲಸಚಿವ ಡಾ. ಸುನೀಲ್ ಕುಮಾರ್ ಬಿ.ಎಸ್, ಫ್ಯಾಕಲ್ಟಿ ಆಫ್ ಬೇಸಿಕ್ ಅಂಡ್ ಅಪ್ಲೈಡ್ ಸೈನ್ಸ್‌ನ ಡೀನ್ ಡಾ. ಸಂತೋಷ್ ಬಿ.ಎಂ. ಸ್ಕೂಲ್ ಆಫ್ ಅಪ್ಲೈಡ್ ಸೈನ್ಸ್‌ನ ನಿರ್ದೇಶಕ ಡಾ. ಗುರುಮೂರ್ತಿ ಹೆಚ್. ಹಲವು ಗಣ್ಯರು ಉಪಸ್ಥಿತರಿರುವರು ಎಂದರು.

ಸಂಜೆ 3 ಗಂಟೆಗೆ ಎಕ್ಸ್ ಪೋ ಸಮಾರೋಪ ಸಮಾರಂಭವಿದ್ದು, ದಾವಣಗೆರೆಯ ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ಮಲ್ಲಿಕಾರ್ಜುನ್ ಬಿ.ಓ ಮುಖ್ಯ ಅತಿಥಿಗಳಾಗಿ ಆಗಮಿಸುವರು. ವಿದ್ಯಾರ್ಥಿಗಳಲ್ಲಿನ ಸಂಶೋಧನೆ, ಆವಿಷ್ಕಾರದ ಕೌಶಲ್ಯ ಪ್ರದರ್ಶನದ ಜೊತೆಗೆ ಮತ್ತಷ್ಟು ನಾವಿನ್ಯತೆಗೆ ಸ್ಫೂರ್ತಿ ನೀಡಲು ಈ ಪ್ರಾಜೆಕ್ಟ್ ಎಕ್ಸಿಬಿಷನ್ ವೇದಿಕೆಯಾಗಿದೆ. ದಾವಣಗೆರೆ, ಬೆಳಗಾಂ, ಶಿವಮೊಗ್ಗ, ಹಾವೇರಿ, ಹುಬ್ಬಳಿ, ಧಾರವಾಡ, ಹೊಸಪೇಟೆ, ಹರಪನಹಳ್ಳಿ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಈ ಪ್ರದರ್ಶನದಲ್ಲಿ ಭಾಗವಹಿಸಲು 50 ತಂಡಗಳು ನೊಂದಣಿಯಾಗಿವೆ ಎಂದು ಮಾಹಿತಿ ನೀಡಿದರು.

ಬಿ.ಎಸ್ಸಿ. (ಯಾವುದೇ ವಿಭಾಗ) ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಭಾಗವಹಿಸಲು ಅರ್ಹರಿದ್ದು, ಪ್ರತಿ ತಂಡವು ಕನಿಷ್ಠ 3 ಮತ್ತು ಗರಿಷ್ಠ 5 ಸದಸ್ಯರನ್ನು ಹೊಂದಿರಬೇಕು. ಸೃಜನಶೀಲತೆ, ವೈಜ್ಞಾನಿಕ ತತ್ವ, ಪ್ರಾಯೋಗಿಕ ಅನ್ವಯಿಕ, ತಂಡದ ಕೆಲಸ, ಪ್ರಸ್ತುತಿ ಕೌಶಲ್ಯಗಳ ಆಧಾರದ ಮೇಲೆ ಮಾದರಿಗಳನ್ನು ಮೌಲ್ಯಮಾಪನ ಮಾಡಲಾಗುತ್ತದೆ ಎಂದರು.

ಪ್ರತಿ ತಂಡಕ್ಕೆ ಪ್ರಸ್ತುತಿ ಮತ್ತು ಪ್ರದರ್ಶನ ಸಮಯ 10–15 ನಿಮಿಷಗಳು ನೀಡಲಾಗುತ್ತದೆ.

## ಪತ್ರಕರ್ತರು ಸಮಾಜದಲ್ಲಿ ಎಲ್ಲರನ್ನು ಸಮಾನವಾಗಿ ಕಾಣುತ್ತಾರೆ: ಮಂಜುನಾಥ್



**ದಾವಣಗೆರೆ:** ಸಂವಿಧಾನದ ನಾಲ್ಕನೆಯ ಅಂಗ ಈ ಪತ್ರಿಕಾ ರಂಗ ಹಾಗಾಗಿ ಪತ್ರಕರ್ತರಾದ ನಾವು ಸಮಾಜದ ಎಲ್ಲರಿಗೂ ಬೇಕಾದವರೇ ಪ್ರತಿಯೊಬ್ಬರು ಪ್ರೀತಿಯಿಂದ ಮಾತನಾಡಿಸುತ್ತಾರೆ, ಸಮಾಜದಲ್ಲಿ ಸರಿ ತಪ್ಪುಗಳನ್ನು ಪಕ್ಷ ಭೇದವಿಲ್ಲದೆ ಪ್ರಚಾರ ನೀಡಬೇಕಾಗುತ್ತದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಜಿಲ್ಲಾ ಅಧ್ಯಕ್ಷರಾದ ಇ. ಎಂ. ಮಂಜುನಾಥ್ ಹೇಳಿದರು.

ದಾವಣಗೆರೆ ಜಿಲ್ಲಾ ಶಿವಸಿಂಪಿ ಸಂಘ ಮತ್ತು ದಾವಣಗೆರೆ ಜಿಲ್ಲಾ ಸಾರ್ವಜನಿಕ ಹಿತರಕ್ಷಣ ಒಕ್ಕೂಟದ ಸಹಯೋಗದಲ್ಲಿ ಶಿವಸಿಂಪಿ ಕಚೇರಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಜಿಲ್ಲಾ ಸಂಘದ ನೂತನ ಪದಾಧಿಕಾರಿಗಳಿಗೆ ಏರ್ಪಡಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಸನ್ಮಾನವನ್ನು ಸ್ವೀಕರಿಸಿದ ಅವರು ಶಿವಸಿಂಪಿ ಸಮಾಜ ಹಿಂದುಳಿದ ಸಮಾಜವಾಗಿದೆ ನಿಮ್ಮ ಸಮಾಜವನ್ನು ಸರ್ಕಾರ ಗುರುತಿಸುವಂಥ ಕೆಲಸ ಆಗಬೇಕಾಗಿದೆ ಎಂದು ತಿಳಿಸಿದರು.

40 ವರ್ಷಗಳಿಂದ ಈ ಪತ್ರಿಕಾ ರಂಗದಲ್ಲಿ ಸೇವೆಯನ್ನು ಸಲ್ಲಿಸಿದ್ದೇನೆ. ಎಲ್ಲಾ ರಾಜಕೀಯ ಮುಖಂಡರು, ಮತ್ತು ಸಮಾಜ ಬಾಂಧವರು ಸ್ಪಂದಿಸುತ್ತಾರೆ. ಶಿವಸಿಂಪಿ ಸಮಾಜದ ಎಲ್ಲಾ ಪದಾಧಿಕಾರಿಗಳು ನನ್ನ ಸ್ನೇಹಿತರಂತಿದ್ದಾರೆ, ಎಲ್ಲಾ ಸಮಾಜದಂತೆ ನಿಮ್ಮ ಸಮಾಜವು ಬೆಳೆಯಲಿ ಮತ್ತು ಪತ್ರಕರ್ತರಿಗೆ ಅನುಕೂಲ ವಾಗುವಂತೆ ಸಮುದಾಯ ಭವನ ನಿರ್ಮಾಣವಾಗಬೇಕು ಎಂಬುದೇ ನನ್ನ ಆಶಯವಾಗಿದೆ ಎಂದು ರಾಜ್ಯ ಸಂಘದ ಪ್ರತಿನಿಧಿಯಾಗಿ ಆಯ್ಕೆಯಾಗಿದ್ದ ಕೆ. ಚಂದ್ರಣ್ಣನವರು ಮಾತನಾಡಿದರು.

ನೂತನ ಪ್ರಧಾನ ಕಾರ್ಯದರ್ಶಿ ಎನ್. ವಿ. ಬದ್ರಿನಾಥ್ ಮಾತನಾಡಿ ಕಳೆದ ಸಾರಿ ನಾನು ಸಂಘದಲ್ಲಿ ಖಜಾಂಚಿಯಾಗಿ ಕಾರ್ಯ ನಿರ್ವಹಿಸಿದ್ದೇನೆ ಈಗ ಪ್ರಧಾನ ಕಾರ್ಯದರ್ಶಿಯಾಗಿ ನನ್ನ ಪತ್ರಿಕ ಮಿತ್ರರೆಲ್ಲ ಆಯ್ಕೆ ಮಾಡಿದ್ದಾರೆ. ಶಿವಸಿಂಪಿ ಸಮಾಜವು ಅಭಿನಂದಿಸಿ ನನ್ನ ಜವಾಬ್ದಾರಿಯನ್ನು ಹೆಚ್ಚು ಮಾಡಿದೆ ನಮ್ಮ ಸಂಘದ ಕಾರ್ಯಕ್ರಮನ್ನು ಮಾಡುವುದರ ಮೂಲಕ ನಿಭಾಯಿಸುತ್ತೇನೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಖಜಾಂಚಿಯಾಗಿ ಆಯ್ಕೆಯಾಗಿರುವ ಜಿ.ಎಸ್ ವೀರೇಶ್ ಪತ್ರಕರ್ತರ ಸಂಘದಲ್ಲಿ ಹಿರಿಯರು ಏನು ಮಾರ್ಗ ಸೂಚಿ ಹಾಕಿ ಕೊಟ್ಟಿದ್ದಾರೆ ಅವರ ಮಾರ್ಗದರ್ಶನದಲ್ಲಿ ಜವಾಬ್ದಾರಿಯುತವಾಗಿ ನನ್ನ ಕರ್ತವ್ಯ ನಿರ್ವಹಿಸುತ್ತೇನೆ ಎಂದು ಸನ್ಮಾನವನ್ನು ಸ್ವೀಕರಿಸಿದ ಅವರು ಮಾತನಾಡಿದರು.

# ಬೆಂಬಲ ಬೆಲೆಗೆ ಆಗ್ರಹಿಸಿ ಹೊನ್ನಾಳಿಯಲ್ಲಿ ಬೃಹತ್ ಪ್ರತಿಭಟನೆ



ಹೊನ್ನಾಳಿ : ಮೆಕ್ಕೆಜೋಳ, ಭತ್ತ, ರಾಗಿ ಹಾಗೂ ಅಡಿಕೆ ಬೆಳೆಗಳಿಗೆ ಬೆಂಬಲ ಬೆಲೆಗೆ ಆಗ್ರಹಿಸಿ ನ. 28 ರಂದು ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಹಸಿರು ಸೇನೆಯ ಅಧ್ಯಕ್ಷ ಕರಿಬಸಪ್ಪ ಗೌಡ ಹೇಳಿದರು.

ಬುಧವಾರ ಪಟ್ಟಣದಲ್ಲಿ ಪ್ರತಿಭಟನೆಯ ಪೂರ್ವಭಾವಿಯನ್ನುದ್ದೇಶಿಸಿ ಅವರು ಮಾತನಾಡಿದರು. ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರ ಹಾಗೂ ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಎರಡೂ ರೈತ ವಿರೋಧಿಗಳೇ, ಈ ಇಬ್ಬರೂ ರೈತರ ಪರವಾಗಿ ಹೋರಾಟ ಮಾಡುತ್ತಾರೆ. ಆದರೆ ಫಲಿತಾಂಶ ಶೂನ್ಯ. ಯಾವ ಸಮಸ್ಯೆಗಳಿಗೂ ಇವರಿಂದ ಇದೂವರೆಗೂ ಪರಿಹಾರವನ್ನು ಕೊಡಲಾಗಿಲ್ಲ. ಆದರೂ ಇವರು ರೈತರ ಹೆಸರು ಹೇಳಿಕೊಂಡು ಹೋರಾಟ ಮಾಡುತ್ತಾರೆ. ಇವರಿಗೆ ಸಮಸ್ಯೆ ಬಗೆಹರಿಸುವ ಇಚ್ಛಾಶಕ್ತಿ ಇಲ್ಲ ಎಂದು ಹೇಳಿದರು.

ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರುಗಳು ತಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗ ರೈತಪರ ಕಾನೂನುಗಳನ್ನು ಜಾರಿ ಮಾಡಲು ನಿಮಗೆ ಏನಾಗಿದೆ ಎಂದು ಪ್ರಶ್ನಿಸಿದರು. ಒಂದು ರಾಜಕೀಯ ಪಕ್ಷ ಇನ್ನೊಂದು ಪಕ್ಷದ ಮೇಲೆ ಆರೋಪ, ಪ್ರತ್ಯಾರೋಪ ಮಾಡಿಕೊಂಡು ರೈತರಿಗೆ ಮೋಸ ಮಾಡುತ್ತಿದ್ದೀರಿ ಎಂದರು.

ಕೇಂದ್ರ ಸರ್ಕಾರ ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ಘೋಷಣೆ ಮಾಡಿದೆ. ಆದರೆ ಖರೀದಿ ಕೇಂದ್ರ ತೆರೆಯಲು ಅನುದಾನ ಬಿಡುಗಡೆ ಮಾಡಿಲ್ಲ, ಇದು ಕೇಂದ್ರ ಸರ್ಕಾರದ ಜವಬ್ದಾರಿ. ಆದ್ದರಿಂದ ಕೇಂದ್ರ ಸರ್ಕಾರ ಕೂಡಲೇ ಖರೀದಿ ಕೇಂದ್ರಕ್ಕೆ ಅನುದಾನ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಭಾರತ ಸರ್ಕಾರ ಮೆಕ್ಕೆಜೋಳ ಆಹಾರ ಪದಾರ್ಥವಲ್ಲ ಎಂದು ಕೈ ತೊಳೆದುಕೊಂಡಿದೆ. ನಮ್ಮ ರಾಜ್ಯದ 19 ಜನ ಸಂಸದರು ಸೇರಿದಂತೆ ಇತರ ಎಲ್ಲಾ ಸಂಸದರು ಮೆಕ್ಕೆಜೋಳ ಆಹಾರ ಪದಾರ್ಥ ಹೌದೋ, ಅಲ್ಲವೋ ಎಂದು ಹೇಳಬೇಕು ಎಂದು ಆಗ್ರಹಿಸಿದರು. ಮೆಕ್ಕೆಜೋಳದ ಬೆಳೆಯಿಂದ 30 ಉಪ ಉತ್ಪನ್ನಗಳನ್ನು ತಯಾರಿಸಲಾಗುತ್ತದೆ. ಆದರೂ ಇದು ಆಹಾರ ಪದಾರ್ಥವಲ್ಲ ಎಂದು ಕೇಂದ್ರ ಸರ್ಕಾರ ಹೇಳುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದರು. ಅಡಿಕೆ ಬೆಲೆ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಅಡಿಕೆ ಮಂಡಳಿ ರಚನೆ ಮಾಡಬೇಕು, ಬೆಲೆ ಕುಸಿತದ ಬಗ್ಗೆ ತನಿಖೆಯಾಗಬೇಕು, ಅಡಿಕೆ ಬೆಳೆಗಾರರ ಹಿತ ಕಾಪಾಡಬೇಕು ಎಂದರು.

ಹಸಿರು ಟವಲ್ ಗೆ ಅವಮಾನ : ಇತ್ತೀಚೆಗೆ ಕೆಲವು ರಾಜಕಾರಣಿಗಳು ಹಸಿರು ಟವಲ್ ಹಾಕಿಕೊಂಡು ಹೈಡ್ರಾಮ ಮಾಡುತ್ತಿದ್ದಾರೆ. ಇದರಿಂದ ಹಸಿರು ಟವಲ್ ಗೆ ಅವಮಾನ ಮಾಡಿದಂತಾಗುತ್ತಿದೆ. ಆದ್ದರಿಂದ ಇನ್ನುಮುಂದೆ ಹಸಿರು ಟವಲ್ ಗಳನ್ನು ಹಾಕಬಾರದು ಎಂದು ಮನವಿ ಮಾಡಿದರು.

ತಾಲ್ಲೂಕು ರೈತಸಂಘದ ಅಧ್ಯಕ್ಷ ಬಸಪ್ಪ ಅರಬಗಟ್ಟೆ ಮಾತನಾಡಿ, ಮೆಕ್ಕೆಜೋಳಕ್ಕೆ $ 2500 ದಿಂದ 3500, ರಾಗಿ ಬೆಳೆಗೆ $ 5500 ಹಾಗೂ ಭತ್ತಕ್ಕೆ $ 3500 ಬೆಂಬಲ ಬೆಲೆ ಘೋಷಿಸಬೇಕು ಎಂದು ಒತ್ತಾಯಿಸಿದರು. ನ. 28 ರಂದು 2 ಸಾವಿರ ರೈತರನ್ನು ಸೇರಿಸಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಿವಮೊಗ್ಗ ಹಸಿರುಸೇನೆಯ ಜಿಲ್ಲಾಧ್ಯಕ್ಷ ಬಸವರಾಜ್ ಹಂಪೋಳ್, ರಘು ಜೋಗ, ನ್ಯಾಮತಿಯ ಮಲ್ಲಿಕಾರ್ಜುನ್, ಸುಂಕದಕಟ್ಟೆ ಕರಿಬಸಪ್ಪ, ಬಸವರಾಜಪ್ಪ ಸೇರಿದಂತೆ 50 ಕ್ಕೂ ಹೆಚ್ಚು ರೈತರು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

# ಹೊನ್ನಾಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಕ್ತದಾನ ಶಿಬಿರ

## ರಕ್ತದಾನ ಮಾಡಿದ 65 ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು : ಡಾ. ಧನಂಜಯ



**ಹೊನ್ನಾಳಿ :** ರಕ್ತವನ್ನು ಕೃತಕವಾಗಿ ಉತ್ಪಾದಿಸಲು ಸಾಧ್ಯವಿಲ್ಲ, ಆದ್ದರಿಂದ ಇನ್ನೊಬ್ಬರ ಜೀವ ಉಳಿಸುವುದಕ್ಕೆ ಎಲ್ಲರೂ ರಕ್ತ ದಾನ ಮಾಡಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಬಿ.ಜಿ.ಧನಂಜಯ ಹೇಳಿದರು.

ಬುಧವಾರ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಯುವ ರೆಡ್‌ಕ್ರಾಸ್ ಘಟಕ, ರಾಷ್ಟ್ರೀಯ ಸೇವಾ ಯೋಜನೆ, ರೋವರ್ಸ್ ಹಾಗೂ ರೇಂಜರ್ಸ್ ಘಟಕ ಮತ್ತು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಶಿವಮೊಗ್ಗ ಇವರ ಸಹಯೋಗದಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯವಂತ ವ್ಯಕ್ತಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತ ದಾನ ಮಾಡಬೇಕು, ಇದರಿಂದ ರಕ್ತ ದಾನ ಮಾಡಿದವರ ಆರೋಗ್ಯವೂ ಸುಧಾರಣೆಯಾಗುತ್ತದೆ. ಇತ್ತೀಚೆಗೆ ಯುವಕರು ರಕ್ತದಾನ ಮಾಡಲು ಮುಂದೆ ಬರುತ್ತಿಲ್ಲ, ಕಾರಣ ರಕ್ತದಾನ ಮಾಡಿದರೆ ಅನಾರೋಗ್ಯ ಉಂಟಾಗುತ್ತದೆ ಎಂಬ ತಪ್ಪು ಕಲ್ಪನೆ ಇದೆ. ಯುವಕರಲ್ಲಿ ಇರುವ ಈ ತಪ್ಪು ಕಲ್ಪನೆಯನ್ನು ಹೋಗಲಾಡಿಸಬೇಕು ಎಂದರು.

ಯುವ ರೆಡ್‌ಕ್ರಾಸ್ ಘಟಕದ ಸಂಚಾಲಕ ನಾಗರಾಜ್ ನಾಯ್ಕ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಸೇರಿ ಒಟ್ಟು 65 ಜನ ರಕ್ತದಾನ ಮಾಡಿದರು.

ಶಿವಮೊಗ್ಗದ ರೆಡ್‌ಕ್ರಾಸ್ ಸಂಸ್ಥೆಯ ಸಿಬ್ಬಂದಿ ರಕ್ತದಾನಿ ಧರಣೇಂದ್ರ ಅವರು 1986 ರಿಂದ ಇಲ್ಲಿಯವರೆವಿಗೂ ಒಟ್ಟು 120 ಬಾರಿ ರಕ್ತದಾನ ಮಾಡಿದ್ದಾಗಿ ಸಮಾರಂಭದಲ್ಲಿ ಹೇಳಿದರು. ನಾವು ಕೊಡುವ ಸ್ವಲ್ಪ ರಕ್ತ ಮತ್ತೊಬ್ಬರ ಪ್ರಾಣ ಉಳಿಯುತ್ತದೆ, ಅದಕ್ಕಿಂತ ಪುಣ್ಯದ ಕಾರ್ಯ ಮತ್ತೊಂದಿಲ್ಲ ಎನ್ನುತ್ತಾರೆ. ಯುವಕರು ಪ್ರತಿವರ್ಷ ಎರಡು ಬಾರಿ ರಕ್ತದಾನ ಮಾಡಿದರೆ ದೇಹದಲ್ಲಿರುವ ರಕ್ತ ಶುದ್ಧೀಕರಣವಾಗುತ್ತದೆ. ಇನ್ನೊಬ್ಬರ ಪ್ರಾಣ ಉಳಿಸುವ ಶಕ್ತಿಯನ್ನು ದೇವರು ನಮಗೆ ಕೊಟ್ಟಿದ್ದಾನೆ. ಇಂತಹ ಅವಕಾಶವನ್ನು ವಿದ್ಯಾರ್ಥಿಗಳು ಕಳೆದುಕೊಳ್ಳಬಾರದು ಎಂದರು.

ಡಾ. ದಿನಕರ್, ಲಯನ್ಸ್‌ಕ್ಲಬ್ ಅಧ್ಯಕ್ಷ ಅಶೋಕ್ ತರಗನಹಳ್ಳಿ, ಪ್ರಾಧ್ಯಾಪಕರಾದ ಹರಾಳು ಮಹಾಬಲೇಶ್ವರ್, ರಾಘವೇಂದ್ರ,ಜಿ.ಎಸ್. ಸುಧಿನ ಟಿ.ಎ.ಶ್ರೀನಿವಾಸ್, ಕೆ.ಎಂ.ಪ್ರಸನ್ನ, ಸುರೇಖಾ ಬಿಜಾಪುರ, ಪ್ರಶಾಂತಕುಮಾರ್ ಶರ್ಮಾ ಉಪಸ್ಥಿತರಿದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ.

### ವೃಷಭ ರಾಶಿ

ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

### ಮಿಥುನ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

### ಕರ್ಕ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು.
ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

### ಸಿಂಹ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ.
ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ನೀವು ಕುರುಡುಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ. ಯಾರಾದರೂ ಇಂದು ಕೆಲಸದಲ್ಲಿ ನಿಮಗೆ ಸಂತೋಷವಾಗುವ ಏನನ್ನಾದರೂ ಮಾಡಬಹುದು. ಇಂದು ನೀವು ಮನೆಯ ಕಿರಿಯ ಸದಸ್ಯರೊಂದಿಗೆ ಉದ್ಯಾನವನ ಅಥವಾ ಶಾಪಿಂಗ್ ಮಾಲ್‌ಗೆ ಹೋಗಬಹುದು.

### ಕನ್ಯಾ ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ ಮತ್ತು ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು.

### ತುಲಾ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು.

### ವೃಶ್ಚಿಕ ರಾಶಿ

ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಧನು ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

### ಮಕರ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ.
ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಸ್ನೇಹಿರೊಂದಿಗಿನ ಸಂಜೆ ಹೆಚ್ಚು ಮನರಂಜನೀಯವಾಗಿರುತ್ತದೆ ಮತ್ತು ಸಂತೋಷದಿಂದ ತುಂಬಿರುತ್ತದೆ. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು,ನೀವು ಅದೃಷ್ಟವಂತರು.

### ಕುಂಭ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು. ನಿಮ್ಮ ಕನಸು ನನಸಾಗಿಸಲು ನೀವು ಅವರನ್ನು ಪ್ರೋತ್ಸಾಹಿಸಬೇಕು. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ.

### ಮೀನ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.
ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ. ನಿಮ್ಮ ಕಣ್ಣೀರನ್ನು ಒಬ್ಬ ವಿಶೇಷ ಸ್ನೇಹಿತ ಒರೆಸಬಹುದು. ಕೆಲವರಿಗೆ ವ್ಯಾಪಾರ ಮತ್ತು ಶಿಕ್ಷಣ ಪ್ರಯೋಜನ ತರುತ್ತದೆ. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ

# ಟೈಲ್ಸ್ ಕಾರ್ಮಿಕರಿಂದ 70ನೇ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ



**ದಾವಣಗೆರೆ ;** ಇತ್ತೀಚಿಗೆ ಎ,ಪಿ,ಎಂ,ಸಿ, ಈರುಳ್ಳಿ ಮಾರ್ಕೆಟ್ ನಲ್ಲಿರುವ ದಾವಣಗೆರೆ ಜಿಲ್ಲಾ ಟೈಲ್ಸ್, ಗ್ರಾನೆಟ್ ಮತ್ತು ಮಾರ್ಬಲ್ ಕೂಲಿಕಾರರ ಕ್ಷೇಮಾಭಿವೃದ್ಧಿ ಸಂಘದಿಂದ ಎರಡನೇ ವರ್ಷದ ಅದ್ದೂರಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು, ಇದೇ ಸಂದರ್ಭದಲ್ಲಿ ಅಖಿಲ ಕರ್ನಾಟಕ ರಾಜ್ಯ ಕನ್ನಡ ಚಳವಳಿಯ ರಾಜ್ಯ ಉಪ ಅಧ್ಯಕ್ಷರಾದ ಟಿ. ಶಿವಕುಮಾರ್, ದಾವಣಗೆರೆ ಜಿಲ್ಲಾ ಕನ್ನಡ ಚಳವಳಿಯ ಜಿಲ್ಲಾಧ್ಯಕ್ಷರಾದ ಶಿವರತನ್ ಇವರುಗಳಿಗೆ ದಾವಣಗೆರೆ ಜಿಲ್ಲಾ ಟೈಲ್ಸ್ ಗ್ರಾನೈಟ್ ಮತ್ತು ಮಾರ್ಬಲ್ ಕೂಲಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಮುರುಗನ್.ಆರ್. ಉಪಾಧ್ಯಕ್ಷರಾದ ಹಕ್ಕೀಂಸಾಬ್. ಕೆ. ನಾಗರಾಜ್ ಕ್ಯಾಪ್ಟನ್, ಶಂಕರಗಣೇಶ್, ವಾಜಿದ್. ಶಾಮಾನೂರುಬಸವರಾಜ್. ಮಹಮ್ಮದ್ ಯಾಕೊಬ್,

ಪ್ರಧಾನಕಾರ್ಯದರ್ಶಿಗಳಾದ ಸಮಿವುಲ್ಲಾ, ಸಹಕಾರ್ಯದರ್ಶಿಯಾದ ಹೆಚ್. ಸುರೇಶ್ ಹಾಗೂ ಕೃಷ್ಣ.ಎನ್. ಸಂಘದ ಎಲ್ಲಾ ಪದಾಧಿಕಾರಿಗಳು ಸೇರಿ ಇವರುಗಳಿಗೆ ಮೈಸೂರು ಪೇಟ ತೊಡಿಸಿ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು, ಈ ಕಾರ್ಯಕ್ರಮದಲ್ಲಿ ಕ್ಷೇಮ ಅಭಿವೃದ್ಧಿ ಎಲ್ಲಾ ಕಾರ್ಮಿಕರು ಟೈಲ್ಸ್ ಅಂಗಡಿಯ ವಿವಿಧ ಮಾಲೀಕರು ಎಲ್ಲರೂ ಭಾಗವಹಿಸಿದ್ದರು.

# ಜಾತಿ ಜಾತಿಗಳ ನಡುವೆ ಸಂಘರ್ಷ ತಂದಿರುವುದೇ ಕಾಂಗ್ರೆಸ್‌ನ ಮೂರು ವರ್ಷದ ದೊಡ್ಡ ಸಾಧನೆ

**ದಾವಣಗೆರೆ:** ರಾಜ್ಯದಲ್ಲಿ ಮೂರು ವರ್ಷಗಳಿಂದ ಅಭಿವೃದ್ಧಿ ಕೆಲಸ ಮಾಡದೇ, ಬರೀ ಜಾತಿ ಜಾತಿಗಳ ಮಧ್ಯೆ ಸಂಘರ್ಷ ತಂದಿರುವುದೇ ಕಾಂಗ್ರೆಸ್ ಸರ್ಕಾರದ ದೊಡ್ಡ ಸಾಧನೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ವೈ.ಎ.ನಾರಾಯಣಸ್ವಾಮಿ ದೂರಿದರು.

ಮಂಗಳವಾರ ದಾವಣಗೆರೆ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಆಗ್ನೇಯ ಪದವೀಧರ ಕ್ಷೇತ್ರದ ಸಮಾಲೋಚನೆ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 3 ವರ್ಷವಾದರೂ ಅಭಿವೃದ್ಧಿ ಮಾತ್ರ ಶೂನ್ಯ. ಶಿಕ್ಷಣ ಕ್ಷೇತ್ರಕ್ಕೆ ಹಾಗೂ ಪದವೀಧರ ಕ್ಷೇತ್ರಕ್ಕೆ ಏನು ಮಾಡಿಲ್ಲ. ವಿದ್ಯಾವಂತರು ಹಾಗೂ ಪದವೀಧರರನ್ನು ಅವಕಾಶಗಳಿಂದ ವಂಚಿತರನ್ನಾಗಿ ಮಾಡಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 3 ವರ್ಷವಾದರೂ ಅಭಿವೃದ್ಧಿ ಮಾತ್ರ ಶೂನ್ಯ. ಶಿಕ್ಷಣ ಕ್ಷೇತ್ರಕ್ಕೆ ಹಾಗೂ ಪದವೀಧರ ಕ್ಷೇತ್ರಕ್ಕೆ ಏನು ಮಾಡಿಲ್ಲ.

ವಿದ್ಯಾವಂತರು ಹಾಗೂ ಪದವೀಧರರನ್ನು ಅವಕಾಶಗಳಿಂದ ವಂಚಿತರನ್ನಾಗಿ ಮಾಡಿದೆ. ರಾಜ್ಯದಲ್ಲಿ ಐದು ಗ್ಯಾರಂಟಿಗಳ ಮುಖಾಂತರ ಐದನೇ ಗ್ಯಾರೆಂಟಿಯಾಗಿ ನಿರುದ್ಯೋಗಿ ಪದವೀಧರರಿಗೆ ಭತ್ಯೆ ನೀಡುವುದಾಗಿ ಹೇಳಿ, ಅವರನ್ನು ಮೂರ್ಖರನ್ನಾಗಿ ಮಾಡಿದೆ. ಮಧು ಬಂಗಾರಪ್ಪನವರಿಗೆ ಸರಿಯಾಗಿ ಕನ್ನಡ ಓದಲು ಬರೆಯಲು ಬರುವುದಿಲ್ಲ ಅಂತವರಿಗೆ ಶಿಕ್ಷಣ ಇಲಾಖೆ ನೀಡಿದರೆ ಅಭಿವೃದ್ಧಿಯಾಗಲು ಹೇಗೆ ಸಾಧ್ಯ ಎಂದು ಅವರು ಪ್ರಶ್ನಿಸಿದರು.

ರಾಜ್ಯದಲ್ಲಿ ವಿದ್ಯಾವಂತರು, ಪದವೀಧರರು ಕಾಂಗ್ರೆಸ್ ಸರ್ಕಾರದ ವಿರುದ್ಧ ಇದ್ದಾರೆ. ಆದ್ದರಿಂದ ಮುಂಬರುವ ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಭಾಜಪ ಅಭ್ಯರ್ಥಿಯು ಗೆಲ್ಲಲಿದ್ದಾರೆ ಎಂಬ ವಿಶ್ವಾಸವಿದೆ.

ಆಗ್ನೇಯ ಪದವೀಧರ ಕ್ಷೇತ್ರ ಆದಾಗಿನಿಂದಲೂ 50 ವರ್ಷಗಳಿಂದ ಈ ಕ್ಷೇತ್ರಕ್ಕೆ ಭಾಜಪ ಅಭ್ಯರ್ಥಿಯೇ ಹೆಚ್ಚು ಬಾರಿ ಗೆದ್ದಿದ್ದಾರೆ.

ಕಳೆದ ಬಾರಿ ಆಗ್ನೇಯ ಪದವೀಧರ ಕ್ಷೇತ್ರದಲ್ಲಿ 1,50,000 ಮತದಾರರು ಇದ್ದರು, ಈ ಬಾರಿ ಎರಡೂವರೆ ಲಕ್ಷದಿಂದ 3ಲಕ್ಷ ಮತದಾರರು ನೋಂದಣಿಯಾಗುವ ನಿರೀಕ್ಷೆ ಇದೆ. ಈ ಕ್ಷೇತ್ರ ಮತ್ತೊಮ್ಮೆ ಭಾಜಪ ಗೆಲ್ಲುವುದಕ್ಕೆ ವೇದಿಕೆ ಸೃಷ್ಟಿ ಮಾಡಲು ನಾವೆಲ್ಲರೂ ಮುಂದಾಗಬೇಕೆಂದು ಕರೆ ನೀಡಿದರು.

ಬಿಹಾರದ ಚುನಾವಣೆ ಫಲಿತಾಂಶ ಕೂಡ ಈ ಕ್ಷೇತ್ರದ ಚುನಾವಣೆ ಮೇಲೆ ಪ್ರಭಾವ ಬೀರಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಅಮಿತ್ ಷಾ ಅವರ ನಾಯಕತ್ವದಿಂದ ಬಿಹಾರ ರಾಜ್ಯ ಭಾಜಪ ಭದ್ರಕೋಟೆಯಾಗಿದೆ.

2028ರ ವಿಧಾನಸಭೆ ಚುನಾವಣೆಯಲ್ಲಿ ನಮ್ಮ ರಾಜ್ಯದಲ್ಲಿಯೂ ಕಾಂಗ್ರೆಸ್ ಪಕ್ಷ ಧೋಳಿಪಟವಾಗಿ ಬಾಜಪ ಸರ್ಕಾರ ಅಸ್ತಿತ್ವಕ್ಕೆ ಬರಲಿದೆ ಎಂದು ಹೇಳಿದರು.

ಜಿಲ್ಲಾಧ್ಯಕ್ಷರಾದ ರಾಜಶೇಖರ್ ನಾಗಪ್ಪ, ಕಡ್ಲೆಬಾಳ್ ಧನಂಜಯ್. ಅನಿಲ್ ಕುಮಾರ್, ಅಣ್ಣಪ್ಪ, ಎಸ್ ಟಿ ವೀರೇಶ್, ಸೇರಿದಂತೆ ಕಾರ್ಯಕರ್ತರು ಸಮಾಲೋಚನಾ ಸಭೆಯಲ್ಲಿ ಪಾಲ್ಗೊಂಡಿದ್ದರು.

ಗದುಗಿನಲ್ಲಿ ಐತಿಹಾಸಿಕ ಅತಿರುದ್ರ ಮಹಾಯಾಗ ಕಿರಿಯ ಕುಂಭಮೇಳ ಯಶಸ್ವಿ

# ಮಹಾ ಯಾಗದಿಂದ ಲೋಕಕಲ್ಯಾಣವಾಗಲಿದೆ ನಾಗಾಸಾಧು ಸಹದೇವಾನಂದ ಗಿರಿಜಿ ಮಹಾರಾಜರು

**ಗದಗ :** ಅತಿರುದ್ರ ಯಾಗ ಎಂದರೆ ಕೊನೆ ಇಲ್ಲದ ಯಾಗ ಎಂದರ್ಥ ಗದುಗಿನ ಜನತೆಯ ಸಂಕಲ್ಪದಿಂದ ಮಾಡಿದ ಈ ಮಹಾಯಾಗ ಮುಂದಿನ ದಿನಗಳಲ್ಲಿ ಸ್ಮರಣೀಯ ದಿನವಾಗಲಿದೆ. ಇಲ್ಲಿನ ಜನತೆಗೆ ಶಿವನು ಸದಾ ರಕ್ಷಣೆ ಮಾಡುವನು ಎಂದು ನಾಗಾಸಾಧು ಮಹಾಂತ ಸಹದೇವಾನಂದ ಗಿರಿಜಿ ಮಹಾರಾಜರು ಹೇಳಿದರು.



ನಗರದ ವಿದ್ಯಾದಾನ ಸಮಿತಿಯ ಮೈದಾನದಲ್ಲಿ ನ. 11 ರಿಂದ 18 ರ ವರೆಗೆ ಜರುಗಿದ ಅತಿರುದ್ರ ಮಹಾಯಾಗ ಮತ್ತು ಕಿರಿಯ ಕುಂಭಮೇಳದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿ, ಈ ಮಹಾಯಾಗ ವಯಕ್ತಿಕವಾಗದೆ ಲೋಕಕಲ್ಯಾಣಕ್ಕಾಗಿ ಮಾಡಲಾಗಿದೆ. ಈ ಮಹಾಯಾಗದಲ್ಲಿ ಸೇವೆ ಸಲ್ಲಿಸಿದ ಪ್ರತಿಯೊಬ್ಬರಿಗೆ ವರ್ಷದೊಳಗೆ ಶಿವನು ಒಳ್ಳೆಯದನ್ನೆ ಮಾಡುತ್ತಾನೆ. ಎಲ್ಲರೂ ಶಕ್ತಿಮೀರಿ ಸೇವೆ ಮಾಡಿದ್ದಾರೆ. ಇದು ನಮ್ಮ ಪೂರ್ವಜನ್ಮದ ಪುಣ್ಯದ ಫಲವಾಗಿ ಶಿವನು ನಾವೇಲ್ಲರೂ ಈ ಮಹಾಯಾಗದಲ್ಲಿ ಪಾಲ್ಗೊಳ್ಳುವಂತೆ ಮಾಡಿದ್ದಾನೆ. ಇಲ್ಲಿ ನಡೆದ ಮಹಾಯಾಗ ಬರಿ ಗದುಗಿನ ಜನತೆಯ ಕಲ್ಯಾಣಕ್ಕಾಗಿ ಅಲ್ಲ, ಇದು ಜಿಲ್ಲೆ, ರಾಜ್ಯ, ರಾಷ್ಟ್ರಕ್ಕೆ ಅಲ್ಲದೆ, ಇಡಿ ಜಗತ್ತಿನ ಕಲ್ಯಾಣಕ್ಕಾಗಿ ನಡೆದಿದೆ ಎಂದು ಹೇಳಿದರು.

ಮಣಕವಾಡದ ಪೂಜ್ಯಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಮಾತನಾಡಿ, ಸಂತರ ಆಗಮನ ವಸಂತದ ಆಗಮನವಾದಂತೆ. ವಸಂತದ ಗಾಳಿ ಬಾಡಿದ ಗಿಡದಲ್ಲಿ ಚಿಗುರು ಮೂಡಿಸುವಂತೆ ಸಾಧು-ಸಂತರುಗಳು ಸತ್ತಂತ್ತಿರುವ ಜನರ ಬದುಕನ್ನು ಹಸನಗೊಳಿಸುತ್ತಾರೆ. ಹೋಮ ಮಾಡಿದರೆ ನಾನು ಮತ್ತು ನನ್ನ ಕುಟುಂಬಕ್ಕೆ ಉತ್ತಮ ಫಲ ನೀಡಲಿ ಎಂಬುದಾಗಿರುತ್ತದೆ. ಆದರೆ, ಯಾಗವು ಸಮಸ್ತ ಲೋಕ ಕಲ್ಯಾಣಕ್ಕಾಗಿ ಜನರಿಗೆ ಸುಖ, ಶಾಂತಿ ನೀಡಲಿ ಎಂಬುದಾಗಿರುತ್ತದೆ. ಕೆಟ್ಟ ಪದಗಳು ಪರಸ್ಪರ ದ್ವೇಷ ಸಾಧಿಸುವಂತೆ ಮಾಡುತ್ತದೆ ಎಂದಾದರೆ ಶಿವನ ನಾಮಸ್ಮರಣೆಯು ಎಷ್ಟೊಂದು ಶಕ್ತಿ ತುಂಬುತ್ತದೆ ಎಂದು ನೀವು ಉಹಿಸಬಹುದು. ಸಾಲುಮರದ ತಿಮ್ಮಕ್ಕ ತನಗೆ ಶಿಶು ಹುಟ್ಟಲಿಲ್ಲ ಎಂಬ ಕೊರಗನ್ನು ದೂರು ಮಾಡಲು ನಾಲ್ಕೂವರೆ ಕೀಲೋಮೀಟರ ವರೆಗೆ 385 ಆಲದ ಮರಗಳ ಸಸಿಗಳನ್ನು ನೆಟ್ಟು ಪರಿಸರವನ್ನು ಪರಿಶುದ್ದಗೊಳಿಸಿದ್ದಾರೆ. ಅದೇರಂತೆ ಎಲ್ಲರು ಪರಿಸರ ರಕ್ಷಣೆ ಮಾಡಬೇಕು. ಇಡಿ ಏಷ್ಯಾ ಖಂಡದಲ್ಲಿ ಕಪ್ಪತಗುಡ್ಡದ ಶುದ್ದ ಗಾಳಿ ಹೆಸರು ಮಾಡಿದೆ. ಯಜ್ಞದಿಂದ ಹೊರಹೊಮ್ಮಿದ ಹೊಗೆಯು ಪರಿಸರವನ್ನು ಉತ್ತಮಗೊಳಿಸುತ್ತದೆ ಎಂದು ಹೇಳಿದರು.

ಯಜ್ಞದಿಂದ ಹೊರಹೊಮ್ಮಿದ ಹೊಗೆಯು ಪರಿಸರವನ್ನು ಉತ್ತಮಗೊಳಿಸುತ್ತದೆ ಎಂದು ಹೇಳಿದರು.

ಅತಿರುದ್ರ ಮಹಾಯಾಗ ಕಿರಿಯ ಕುಂಭಮೇಳ ಸೇವಾ ಸಮಿತಿಯ ಅಧ್ಯಕ್ಷ ಕಿರಣ ಭೂಮಾ ಅವರು ಮಾತನಾಡಿ, ಗದುಗಿನಲ್ಲಿ ಎಂಟು ದಿನಗಳ ವರೆಗೆ ನಡೆದ ಕುಂಭಮೇಳ ಇತಿಹಾಸ ನಿರ್ಮಾಣ ಮಾಡಿದೆ. ಜಾತ್ಯಾತೀತವಾಗಿ, ಪಕ್ಷಾತೀತವಾಗಿ ತಿಂಗಳಿಂದ ಎಲ್ಲರೂ ಕೆಲಸ ಮಾಡಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ್ದಾರೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮಹಾಂತ ಪೂಜ್ಯಶ್ರೀ ಸಹದೇವಾನಂದ ಗಿರಿ ಮಹಾರಾಜರು ನೇತೃತ್ವವಹಿಸಿದ್ದರು. ಶಿರೋಳ ಮಠದ ಪೂಜ್ಯಶ್ರೀ ಯಚ್ಚರೇಶ್ವರ ಮಹಾಸ್ವಾಮಿಗಳು ಸಮ್ಮುಖವಹಿಸಿದ್ದರು.

**ಮಣಕವಾಡದ ಪೂಜ್ಯಶ್ರೀ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಮಾತನಾಡಿ, ಸಂತರ ಆಗಮನ ವಸಂತದ ಆಗಮನವಾದಂತೆ. ವಸಂತದ ಗಾಳಿ ಬಾಡಿದ ಗಿಡದಲ್ಲಿ ಚಿಗುರು ಮೂಡಿಸುವಂತೆ ಸಾಧು-ಸಂತರುಗಳು ಸತ್ತಂತ್ತಿರುವ ಜನರ ಬದುಕನ್ನು ಹಸನಗೊಳಿಸುತ್ತಾರೆ.**

ಇದೇ ಸಂದರ್ಭದಲ್ಲಿ ಅತಿರುದ್ರ ಮಹಾಯಾಗ ಕಿರಿಯ ಕುಂಭಮೇಳ ಸೇವಾ ಸಮಿತಿಯ ಪದಾಧಿಕಾರಿಗಳಾದ ಸದಾಶಿವಯ್ಯ ಮದರಿಮಠ, ಎಸ್.ಎಚ್. ಶಿವನಗೌಡರ, ರವಿ ದಂಡಿನ, ಫಕ್ಕೀರಸಾ ಭಾಂಡಗೆ, ಬಿ.ಬಿ. ಅಸೂಟಿ, ರಾಜು ಕುರಡಗಿ, ಬಸವರಾಜ ಬಿಂಗಿ, ವಿ.ಕೆ. ಗುರುಮಠ, ಪ್ರಕಾಶ ಬೊಮ್ಮನಹಳ್ಳಿ, ಗೋಪಾಲ ಅಗರವಾಲ, ಅವಿನಾಶ ಜೈನ, ವೆಂಕಟೇಶ ಕುಲಕರ್ಣಿ, ಲಿಂಗರಾಜ ಗುಡಿಮನಿ, ರಾಘವೇಂದ್ರ ಬರಾಡ, ಸಂತೋಷ ಚನ್ನಪ್ಪನವರ, ನಾರಾಯಣ ಕುಡತರಕರ, ರವಿ ಗುಂಜೀಕರ, ರಮೇಶ ಸಜ್ಜಗಾರ, ವಿಜಯಲಕ್ಷ್ಮೀ ಮಾನ್ವಿ, ಪ್ರೀತಿ ಹೊನಗುಡಿ, ಅನುರಾಧಾ ಬಸವಾ, ಮೇಘಾ ಮುದಗಲ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ನಂದನವನ ಉದ್ಯಾನವನ ಸಾರ್ವಜನಿಕರದ್ದು



**ಬಳ್ಳಾರಿ:** ಮಹಾನಗರ ಪಾಲಿಕೆ 35ನೇ ವಾರ್ಡ್ ನಲ್ಲಿರುವ 'ನಂದನವನ ಉದ್ಯಾನವನ' ಸಾರ್ವಜನಿಕರ ಸ್ವತ್ತಾಗಿದ್ದು ಓರ್ವ ಪ್ರಭಾವಿ ವ್ಯಕ್ತಿಯಿಂದ ಅದನ್ನು ಕಬಳಿಸುವ ಹುನ್ನಾರ ನಡೆದಿದೆ. ಈ ಉದ್ಯಾನವನ ಉಳಿವಿಕೆಗಾಗಿ ನ್ಯಾಯಾಂಗ ಹೋರಾಟ ಮಾಡುವುದಾಗಿ ವೀರನಗೌಡ ಕಾಲೋನಿ ಮತ್ತು ಗಣೇಶನಗರ ನಾಗರೀಕ ಸೇವಾ ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

ಇಂದು ಉದ್ಯಾನವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಸಂಘದ ಅಧ್ಯಕ್ಷ ಕೆ.ಬಸವನಗೌಡ, ಉಪಾಧ್ಯಕ್ಷ ವಿ.ವೀರೇಶ ಮತ್ತಿತರರು ವೀರನಗೌಡ ಕಾಲೋನಿ ಟಿ.ಎಸ್.ಸಂಖ್ಯೆ;350/133 ರಲ್ಲಿರುವ ಪಾರ್ಕ್ ಸಂಪೂರ್ಣ ಅಭಿವೃದ್ಧಿ ಹೊಂದಿದೆ. ಕಳೆದ ದಶಕದಿಂದ ಜನರು ಈ ಪಾರ್ಕ್ನ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಎಂ.ರಾಜೇಶ್ವರಿ ನಗರ, ದೇವಿನಗರ, ಸಂಜಯಗಾಂಧಿನಗರ, ವೀರನಗೌಡ ಕಾಲೋನಿ, ಗಣೇಶ ಕಾಲೋನಿ, ಅವಂಬಾವಿ ಸೇರಿದಂತೆ ಸುತ್ತ ಮುತ್ತಲಿನ ಬಡಾವಣೆಗಳ ಸಾರ್ವಜನಿಕರು ವಾಯು ವಿಹಾರಕ್ಕಾಗಿ ಈ ಉದ್ಯಾನವನವನ್ನು ಬಳಸುತ್ತಿದ್ದಾರೆ.

ವಕೀಲರು ಆಗಿರುವ ಪ್ರಭಾವಿ ರಾಜಕಾರಣಿಯೊಬ್ಬರು ಮಹಾನಗರ ಪಾಲಿಕೆ ವಿರುದ್ಧ ಪ್ರಕರಣ ದಾಖಲಿಸಿ, ತಮ್ಮ ಪರವಾಗಿ ನ್ಯಾಯ ದೊರಕುವಂತೆ, ಸರ್ಕಾರಿ ಅಧಿಕಾರಿಗಳು ಪ್ರತಿರೋಧಿಸದಂತೆ ಮತ್ತು ಡೆವಲಪರ್ ಪರವಾಗಿ ಮಾಡಿದ್ದಾರೆ. ನಿವಾಸಿಗಳು ಈ ಪ್ರಕರಣದಲ್ಲಿ ಭಾಗಿಯಾಗದಂತೆ ಮತ್ತು ತಮ್ಮಲ್ಲಿ ದಾಖಲೆಗಳನ್ನು ಸೃಷ್ಟಿಸಿ ತಮ್ಮ ಪರವಾಗಿ ನ್ಯಾಯ ದೊರೆಯುವಂತೆ ತಂತ್ರ ರೂಪಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಉದ್ಯಾನವನದ ಸುತ್ತಲಿನ ನಿವಾಸಿಗಳಾದ ನಾವುಗಳು ನ್ಯಾಯಾಂಗ ಹೋರಾಟಕ್ಕೆ ಅಣಿಯಾಗಿದ್ದೇವೆ. ಈ ಮಧ್ಯೆ ಪ್ರಭಾವಿ ವ್ಯಕ್ತಿ ಧಾರವಾಡ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದ್ದಾರೆ. ಇದರ ವಿರುದ್ಧ ನಿವಾಸಿಗಳಾದ ನಾವೂ ಕೂಡ ಹೋರಾಟ ಮಾಡಲು ಅಣಿಯಾಗಿದ್ದೇವೆ. ರಾಜ್ಯ ಸರ್ಕಾರ ಸಾರ್ವಜನಿಕರ ಈ ಉದ್ಯಾನವನವನ್ನು ನಾಗರಿಕರಿಗೆ ಉಳಿಸಿಕೊಡಬೇಕು. ಅಲ್ಲಿಯವರೆಗೂ ನಮ್ಮ ಹೋರಾಟವನ್ನು ಮುಂದುವರಿಸುತ್ತೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ವೀರನಗೌಡ ಕಾಲೋನಿ ಮತ್ತು ಗಣೇಶ ನಗರ ನಾಗರೀಕ ಸೇವಾ ಸಂಘದ ಕಾರ್ಯದರ್ಶಿ ಬಸವನಗೌಡ ಪಿ., ಜಂಟಿ ಕಾರ್ಯದರ್ಶಿ ಕೆ.ವಿಜಯಸಿಂಹ, ಖಜಾಂಚಿ ಶರಣಗೌಡ, ಕಾರ್ಯಕಾರಿ ಸಮಿತಿ ಸದಸ್ಯರಾದ ಎಂ.ಬಸವನಗೌಡ, ಡಾ.ಟಿ.ಸುರೇಶ, ಮುರಳಿ ಶ್ಯಾಮ ಗೊತ್ತಿಪತಿ, ಮಂದಪಾಟಿ ಸತ್ಯನಾರಾಯಣರಾಜು, ಹೇಮಂತ್ ಕುಮಾರ್, ವೀರನಗೌಡ, ಬಿ., ಹೆಚ್.ಜಯಪ್ರಕಾಶಗೌಡ, ಬಿ.ಸಿದ್ಧರಾಮನಗೌಡ, ಬಸವರಾಜ ಬಿ.ಎಂ., ಹೆಚ್.ಎನ್.ಉಮೇಶ್, ಎಸ್.ವೀರನಗೌಡ, ಎಂ.ಶರಣಬಸವನಗೌಡ ಸೇರಿದಂತೆ ಸ್ಥಳೀಯ ನಿವಾಸಿಗಳು ಇದ್ದರು.

# ಕಲಾಕುಂಚದಿಂದ "ಕರ್ನಾಟಕ ಸಿರಿಗನ್ನಡ ಸಿರಿ" ರಾಜ್ಯ ಪ್ರಶಸ್ತಿ ಸಮಾರಂಭ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಆಶ್ರಯದಲ್ಲಿ ಪ್ರತಿ ವರ್ಷದಂತೆ ಕಳೆದ 35 ವರ್ಷಗಳಿಂದ ನಡೆಯುತ್ತಿರುವ ಕಲೆ, ಸಾಹಿತ್ಯ, ಸಂಗೀತ, ಶಿಕ್ಷಣಗಳ ಸಾಂಸ್ಕೃತಿಕ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತಿದ್ದು 70ನೇ ವರ್ಷದ ಕನ್ನಡ ರಾಜ್ಯೋತ್ಸವ ಪ್ರಯುಕ್ತ ವಿವಿಧ ಜಿಲ್ಲೆಗಳ ಪ್ರತಿಭಾವಂತ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವ ಸಾಧಕರಿಗೆ ನವಂಬರ್ 23 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ನಗರದ ಚನ್ನಗಿರಿ ವಿರೂಪಾಕ್ಷಪ್ಪ ಕಲ್ಯಾಣ ಮಂಟಪದಲ್ಲಿ "ಕರ್ನಾಟಕ ಸಿರಿಗನ್ನಡ ಸಿರಿ" ರಾಜ್ಯ ಪ್ರಶಸ್ತಿಯನ್ನು ಭವ್ಯ, ದಿವ್ಯ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಸಮಾರಂಭದ ಉದ್ಘಾಟನೆಯನ್ನು ಶಿವಮೊಗ್ಗದ ಖ್ಯಾತ ಯಕ್ಷಗಾನ ಕಲಾವಿದೆ, ಸುಮುಖ ಯಕ್ಷಗಾನ ಕಲಾಕೇಂದ್ರದ ಅಧ್ಯಕ್ಷರಾದ ಶ್ರೀಮತಿ ಕಿರಣ್ ರವಿ.ಪೈ ನೆರವೇರಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಕಲಾಕುಂಚದ ಅಧ್ಯಕ್ಷರಾದ ಕೆ.ಹೆಚ್.ಮಂಜುನಾಥ್ ವಹಿಸಿಕೊಳ್ಳಲಿದ್ದಾರೆ.

ಮುಖ್ಯ ಅತಿಥಿಗಳಾಗಿ ದಾವಣಗೆರೆಯ ಖ್ಯಾತ ಬರಹಗಾರರು ವೈದ್ಯಕೀಯ ಕ್ಷೇತ್ರದ ಸಾಧಕರಾದ ಡಾ॥ ಶಶಿಕಲಾ ಕೃಷ್ಣಮೂರ್ತಿ, ಉತ್ತರ ಕನ್ನಡ ಜಿಲ್ಲೆಯ ಗೋಕರ್ಣದ ಶೈಕ್ಷಣಿಕ ಸಾಧಕಿ ಖ್ಯಾತ ಚಿತ್ರಕಾವಿದರಾದ ಕುಮಾರಿ ನವ್ಯ ಮನೋಹರ್ ಪೈ, ಬೆಂಗಳೂರಿನ ಖ್ಯಾತ ಸಂಗೀತ ಸಾಧಕಿ, ಸಾಹಿತಿ, ಕವಯತ್ರಿ ಶ್ರೀಮತಿ ನವೀನ ರಾಯ್ಕರ್ ಆಗಮಿಸಲಿದ್ದಾರೆ.

ಸಮಾರಂಭದ ವೇದಿಕೆಯಲ್ಲಿ ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ಗೌರವ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ ಗೌರವ ಉಪಸ್ಥಿತರಿರುತ್ತಾರೆ. ಈ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡ ಮನಸ್ಸುಗಳು ಆಗಮಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಸಾಮಾಜಿಕ ನ್ಯಾಯ ಮತ್ತು ಸಮಾನತೆಗಾಗಿ ಸಿಪಿಐ ಪ್ರತಿಭಟನೆ

**ದಾವಣಗೆರೆ:** ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಘಟಕವು ದಲಿತ, ಆದಿವಾಸಿ ಮಹಿಳೆಯರ ಮತ್ತು ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯಗಳನ್ನು ಖಂಡಿಸಿ ನಗರದಲ್ಲಿ ಪ್ರತಿಭಟನೆ ನಡೆಸಿತು.

ಪಕ್ಷದ ಕರೆಯ ಮೇರೆಗೆ ಅಖಿಲ ಭಾರತ ಪ್ರತಿಭಟನಾ ದಿನವಾಗಿ ಆಚರಿಸಲು ಮಂಗಳವಾರ ನಗರದ ಜಯದೇವ ಸರ್ಕಲ್‌ನಲ್ಲಿ ಸಿಪಿಐ ಪಕ್ಷದ ಪದಾಧಿಕಾರಿಗಳು ಸಾಮಾಜಿಕ ನ್ಯಾಯ ಮತ್ತು ಸಮಾನತೆಗಾಗಿ ದಲಿತರ, ಆದಿವಾಸಿ ಮಹಿಳೆಯರ ಮತ್ತು ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯಗಳನ್ನು ಖಂಡಿಸಿ ಪ್ರತಿಭಟನೆ ನಡೆಸಿದರು.

ಈ ವೇಳೆ ಸಿಪಿಐ ಜಿಲ್ಲಾ ಕಾರ್ಯದರ್ಶಿ ಆವರಗೆರೆ ಚಂದ್ರು ಮಾತನಾಡಿ, ಶತ ಶತಮಾನಗಳಿಂದಲೂ ದಬ್ಬಾಳಿಕೆ, ಅಸ್ಪೃಶ್ಯತೆ ಮತ್ತು ಶೋಷಣೆಗಳಿಗೆ ಬಲಿಯಾದ ದಲಿತ, ಆದಿವಾಸಿ ಮತ್ತು ಮಹಿಳಾ ಸಮುದಾಯಗಳು ಇಂದಿಗೂ ಈ ದೌರ್ಜನ್ಯಗಳಿಂದ ಬಿಡುಗಡೆಯಾಗಿಲ್ಲ. ಇನ್ನೂ ಅವುಗಳು ಹವ್ಯಾಹತವಾಗಿ ಮುಂದುವರೆದಿವೆ ಎಂದು ಹೇಳಿದರು.

ಸನಾತನ ಸಾಮಾಜಿಕ ವ್ಯವಸ್ಥೆಯು ಮನುಸ್ಮೃತಿಯ ಆಧಾರದಲ್ಲಿ ಅಂದರೆ, ವರ್ಣಾಶ್ರಮ ಪದ್ಧತಿಯನ್ನು ಸ್ಥಿರಗೊಳಿಸಿ ಮನುಷ್ಯರನ್ನು ಶ್ರೇಷ್ಠ ಮತ್ತು ಕನಿಷ್ಠ ಎಂದು ವಿಭಜಿಸಿದೆ. ಆಳುವ ಸರ್ಕಾರಗಳು ಪರೋಕ್ಷವಾಗಿ ಇಂತಹ ಘಟನೆಗಳಿಗೆ ಬೆಂಬಲ ನೀಡುತ್ತಿರುವುದು ವಿಪರ್ಯಾಸ. ಆಳುವ ಸರ್ಕಾರಗಳು ಇಂತಹುಗಳನ್ನು ಕೈ ಬಿಟ್ಟು ಸಂವಿಧಾನಬದ್ಧವಾಗಿ ಎಲ್ಲರಿಗೂ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮುಖಂಡರುಗಳಾದ ಕಾಂ ಪಿ.ಷಣ್ಮುಖ ಸ್ವಾಮಿ, ಕಾಂ ಐರಣಿ ಚಂದ್ರು, ಕಾಂ ಕೆ.ಬಾನಪ್ಪ, ಕಾಂ ಸಿದ್ದಲಿಂಗೇಶ್, ಕಾಂ ಶೇಖರ ನಾಯಕ, ಕಾಂ ನರೇಗಾ ರಂಗನಾಥ್, ಕಾಂ ಕೆರನಹಳ್ಳಿ ರಾಜು, ಕಾಂ ಬೆಳಳಗೆರೆ ರುದ್ರಮ್ಮ ಕಾಂ ಎ.ತಿಪ್ಪೇಶ್, ಕಾಂ ಜಿ.ಎಲ್ಲಪ್ಪ, ಕಾಂ ಸರೋಜಾ, ಕಾಂ ಕೆ.ಜಿ.ಶಿವಮೂರ್ತಿ, ಕಾಂ ಚಿನ್ನಪ್ಪ, ಕಾಂ ರಮೇಶ್ ಸಿ.ದಾಸರ್, ಕಾಂ ಹರ್ಷ, ಕಾಂ ಗದಿಗೇಶ ಪಾಳೇದ, ಕಾಂ ಹೆಚ್.ಚಂದ್ರು, ಕಾಂ ಜಯಪ್ಪ,ಕಾಂ ಮಹೇಶ್, ಕಾಂ ನಾಗಮ್ಮ, ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

**ರಾಮನಗರ:** 2024ನೇ ಸಾಲಿನ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಹಾಗೂ ಪ್ರೋತ್ಸಾಹಧನ ಯೋಜನೆಗೆ ಸಂಬಂಧಿಸಿದಂತೆ 2023-24ನೇ ಸಾಲಿನ ನಗದು ಪುರಸ್ಕಾರ, 2025-26ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿ ಮತ್ತು ಕ್ರೀಡಾ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಯಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ಹೊಂದಿರುವ ಜಿಲ್ಲೆಯ ಕ್ರೀಡಾಪಟುಗಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಸೇವಾಸಿಂಧು ಪೋರ್ಟಲ್ ಮೂಲಕ (https://sevasindhu.karnataka.gov.in) ಡಿಸೆಂಬರ್ 3ರೊಳಗೆ ಸಲ್ಲಿಸಬೇಕು.

# ಬಾಲ ಕಾರ್ಮಿಕರ ಪತ್ತೆಗೆ ಕ್ರಮವಹಿಸಲು ಸೂಚನೆ




**ಹಾಸನ :** ಜಿಲ್ಲೆಯಲ್ಲಿ ಬಾಲ ಕಾರ್ಮಿಕರನ್ನು ಪತ್ತೆ ಹಚ್ಚುವುದರ ಜೊತೆಗೆ ಪುನರ್ವಸತಿ ಕಲ್ಪಿಸುವ ಮೂಲಕ ಸಮಾಜದ ಮುಖ್ಯವಾಹಿನಿಗೆ ತರಲು ಶ್ರಮಿಸುವಂತೆ ಅಪರ ಜಿಲ್ಲಾಧಿಕಾರಿ ಮಂಜುನಾಥ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಕಾರ್ಯಕಾರಿ ಸಮಿತಿ ಹಾಗೂ ಸರ್ವ ಸದಸ್ಯರ ವಿಶೇಷ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಕಾರ್ಯಾಚರಣೆ ಸಂದರ್ಭದಲ್ಲಿ ಕಂಡುಬಂದ ಅಂಶಗಳನ್ನು ಗಮನಿಸಿ ಕಿಶೋರಾವಸ್ಥೆ ಕಾರ್ಮಿಕರ ಬಗ್ಗೆ ಕೂಡ ಎಚ್ಚರವಹಿಸಬೇಕು. ಅವರನ್ನು ಪತ್ತೆ ಹಚ್ಚುವುದರ ಜೊತೆಗೆ ಕೌಶಲ್ಯ ತರಬೇತಿ ನೀಡಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪತ್ತೆ ಹಚ್ಚಿದ ಬಾಲಕಾರ್ಮಿಕರಿಗೆ ಶಿಕ್ಷಣದ ಮಹತ್ವ ತಿಳಿಸಿ ವಿವಿಧ ಇಲಾಖೆಗಳಲ್ಲಿ ದೊರಕುವ ಸಂಪನ್ಮೂಲ ವ್ಯಕ್ತಿಗಳಿಂದ ಮಕ್ಕಳಮನಪರಿವರ್ತನೆಗಾಗಿಮಾಹಿತಿ ಒದಗಿಸಲು ಕ್ರಮವಹಿಸುವಂತೆ ತಿಳಿಸಿದರು.

ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಬಾಲಕಾರ್ಮಿಕರನ್ನು ಪತ್ತೆ ಹಚ್ಚುವುದರ ಜೊತೆಗೆ ಅವರ ಪುನರ್ವಸತಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ತಿಳಿಸಿದರು.ಏನೇನು ಸವಾಲುಗಳಿವೆ ಅವುಗಳ ಪರಿಹಾರಕ್ಕೆ ಏನು ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆ ಕೂಡ ಗಮನಹರಿಸಿ ಎಂದು ತಿಳಿಸಿದರು.

ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿಯನ್ನು ಕಾರ್ಮಿಕ ಇಲಾಖೆಗೆ ನೀಡುವಂತೆ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಹೊರ ರಾಜ್ಯಗಳಿಂದ ವಲಸೆ ಬರುವ ಕಾರ್ಮಿಕರ ಆಧಾರ್ ಕಾರ್ಡ್ ಪರಿಶೀಲಿಸಿದಾಗ18 ಮೇಲ್ಪಟ್ಟವರು ಎಂದು ಪರಿಗಣಿಸಬಹುದಾಗಿದೆ ಆದರೆ ಅವರನ್ನು ವೈದ್ಯಕೀಯವಾಗಿ ಪರಿಶೀಲನೆಗೆ ಒಳಪಡಿಸಿದಾಗ 14 ವರ್ಷದೊಳಗಿನರಾಗಿರುತ್ತಾರೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಯಮುನಾ ಸಭೆಗೆ ಮಾಹಿತಿ ನೀಡಿದರು.

ಬಾಲ ಕಾರ್ಮಿಕರನ್ನು ಪತ್ತೆ ಹಚ್ಚಿದ ಸಂದರ್ಭದಲ್ಲಿ ಮಾಲೀಕರಿಗೆ 20 ಸಾವಿರ ರೂಗಳ ದಂಡ ವಸೂಲಿ ಮಾಡಲಾಗುವುದು ಈ ಹಣಕ್ಕೆ ಸರ್ಕಾರದಿಂದ 15 ಸಾವಿರ ರೂಪಾಯಿಗಳನ್ನು ಸೇರಿಸಿ ಒಟ್ಟು 35 ರೂಗಳನ್ನು ಮಕ್ಕಳ ಹೆಸರಿನಲ್ಲಿ ಬ್ಯಾಂಕ್ ಖಾತೆಯಲ್ಲಿ ಠೇವಣಿ ಇಡಲಾಗುವುದು ಎಂದು ತಿಳಿಸಿದರಲ್ಲದೆ,ಎಸ್.ಎಸ್.ಎಲ್.ಸಿ ಅನುತ್ತೀರ್ಣರಾದ ಮಕ್ಕಳಿಗೆ ಖಾಸಗಿಯಾಗಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುತ್ತದೆ ಎಂದರು.

ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ॥ ನಾಗಪ್ಪ ಅವರು ಮಾತನಾಡಿ ವಲಸೆ ಕಾರ್ಮಿಕರಲ್ಲಿ ಮಲೇರಿಯಾ ಪ್ರಕರಣಗಳು ಕಂಡು ಬರುತ್ತದೆ. ಕಾರ್ಮಿಕರ ಆರೋಗ್ಯದ ಸಮಸ್ಯೆ ಕುರಿತು ಗಮನಕ್ಕೆ ತಂದಲ್ಲಿ ಆರೋಗ್ಯ ಸಮಸ್ಯೆ ಪರಿಹಾರಕ್ಕೆ ಕ್ರಮವಹಿಸಲು ಸಹಕಾರಿ ಆಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಕುಮಾರ್ ಹಾಗೂ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# 72ನೇ ಅಖಿಲ ಭಾರತ ಸಹಕಾರ ಸಪ್ತಾಹ



**ಗದಗ :** ಸಹಕಾರ ಇಲಾಖೆ ಗದಗ, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ. ಗದಗ ಕೆ.ಸಿ.ಸಿ. ಬ್ಯಾಂಕ್ ಲಿ. ಧಾರವಾಡ, ಕೆ.ಎಂ.ಎಫ್ ಧಾರವಾಡ, ಗದಗ ಉಪವಿಭಾಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ. ಗದಗ, ಕೆ. ಸಿ. ಸಿ. ಬ್ಯಾಂಕ್ ಲಿ. ಧಾರವಾಡ, ಕೆ. ಎಂ. ಎಫ್ ಧಾರವಾಡ, ಗದಗ ಉಪವಿಭಾಗ ಹಾಲು ಉತ್ಪಾದಕರ ಸಹಕಾರ ಸಂಘ ನಿ. ಬೂದಿಹಾಳ ಹಾಗೂ ಮುಂಡರಗಿ ತಾಲೂಕಿನ ಎಲ್ಲಾ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ-ಧ್ಯೇಯ ಮಂಗಳವಾರ ಮುಂಡರಗಿ ಸಭಾಭವನದಲ್ಲಿ ಮಂಗಳವಾರ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ ಗದಗ ಇದರ ನಿರ್ದೇಶಕರಾದ ತಿಪ್ಪಣ್ಣ ಎಸ್. ಭಜಮ್ಮನವರ ಸಹಕಾರಿ ಪಿತಾಮಹ ಭಾವಚಿತ್ರಕ್ಕೆ ಪುಷ್ಪಾಚಣೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಹಾಲು ಒಕ್ಕೂಟ, ಧಾರವಾಡ ನಿರ್ದೇಶಕರಾದ ಲಿಂಗರಾಜಗೌಡ ಎಚ್. ಪಾಟೀಲ ಇವರು ಉದ್ಘಾಟಿಸಿ ಮಾತನಾಡಿ ಭಾರತವು ಅಮೃತ ಕಾಲದತ್ತ ಸಾಗುತ್ತಿರುವಂತೆ ಸಹಕಾರಿ ಚಳುವಳಿಯು ಯುವಕರು ಮಹಿಳೆಯರು ಮತ್ತು ದುರ್ಬಲ ವರ್ಗಗಳನ್ನು ವಿಶೇಷವಾಗಿ ಹೈನುಗಾರಿಕೆ ಕರಕುಶಲ ವಸ್ತುಗಳು ಕೈಮಗ್ಗಗಳು ಕಾರ್ಮಿಕರು ಮತ್ತು ಮೀನುಗಾರಿಕೆಯಂತಹ ಕ್ಷೇತ್ರಗಳಲ್ಲಿ ತೊಡಗಿರುವವರನ್ನು ಸಬಲೀಕರಣಗೊಳಿಸುವಲ್ಲಿ ಪರಿವರ್ತನಾತ್ಮಕ ಪಾತ್ರವನ್ನು ವಹಿಸಲು ಸಜ್ಜಾಗಿದೆ ಗ್ರಾಮೀಣ ಮಹಿಳೆಯರು ಇವತ್ತು ನಮ್ಮ ತಾಲೂಕಿನಲ್ಲಿ ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆ. ಕೃಷಿಯೊಂದಿಗೆ ಹೈನುಗಾರಿಕೆಗೆ ಹೆಚ್ಚಿನ ಮಹತ್ವವನ್ನು ನೀಡುತ್ತಿದ್ದಾರೆ

ಭಾರತದ ಗ್ರಾಮೀಣ ಮತ್ತು ಅನೌಪಚಾರಿಕ ಆರ್ಥಿಕತೆಯ ಬೆನ್ನೆಲುಬಾಗಿವೆ ಸಹಕಾರಿ ಉದ್ಯಮಶೀಲತೆಯು ಅವರಿಗೆ ಸಾಮೂಹಿಕ ಉದ್ಯಮದ ಮೂಲಕ ಸಬಲೀಕರಣ ಆರ್ಥಿಕ ಸ್ವಾತಂತ್ರ ಮತ್ತು ಘನತೆಗೆ ಮಾರ್ಗವನ್ನು ನೀಡುತ್ತದೆ. ಇದು ಸದಸ್ಯರ ಮಾಲೀಕತ್ವ ಪ್ರಜಾಸತ್ತಾತ್ಮಕ ನಿರ್ಧಾರ ತೆಗೆದುಕೊಳ್ಳುವಿಕೆ ಸಮಾನ ಲಾಭ ವಿತರಣೆ ಮತ್ತು ಹಂಚಿಕೆಯ ಬೆಳವಣಿಗೆಗೆ ಒತ್ತು ನೀಡುತ್ತದೆ ಇದು ಇತರ ಉದ್ಯಮಶೀಲತೆಗಿಂತ ಭಿನ್ನವಾಗಿವೆ ಎಂದು ಹೇಳಿದರು.

ಮುಂಡರಗಿ ಎಂ. ಎಸ್. ಡಂಬಳ ಪ್ರೌಢಶಾಲೆ ಕುಮಾರಿ ಮೀನಾಕ್ಷಿ ಮತ್ತು ಸಂಗಡಿಗರು ಪ್ರಾಥನೆ ಹಾಗೂ ನಾಡಗೀತೆ ನೆರವೇರಿಸಿ ಕೊಟ್ಟರು, ಕೆ.ಸಿ.ಸಿ. ಬ್ಯಾಂಕಿನ ನಿವೃತ್ತ ಅಧಿಕಾರಿಗಳಾದ ಎಸ್.ಪಿ. ಪಾಟೀಲರವರು ಸ್ವಾಗತಿಸಿದರು. ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ನಿರೂಪಿಸಿ ವಂದಿಸಿದರು

ಈ ಸಂದರ್ಬದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಇದರ ನಿರ್ದೇಶಕರಾದ ಯಂಕಪ್ಪ ಎಲ್.ಹುಳಕಣ್ಣವರ ಸಹಕಾರ ಸಂಘಗಳ ಲೆಕ್ಕ ಪರಿಶೊಧನಾ ಇಲಾಖೆಯ ಹಿರಿಯ ಲೆಕ್ಕಪರಿಶೋಧಕರಾದ ಎ.ಎಂ.ಖಟವಟೆ

ಕೆ.ಸಿ.ಸಿ. ಬ್ಯಾಂಕ್ ಲಿ.ಮುಂಡರಗಿ ಮ್ಯಾನೇಜರ್ ವ್ಹಿ.ಬಿ. ಚಿಕ್ಕನಗೌಡ್ರ, ಬ್ಯಾಂಕ್ ನೀರಿಕ್ಷಕರಾದ ಕೆ.ಬಿ. ದೊಡ್ಡಮನಿ, ಸಹಾಯಕ ವ್ಯವಸ್ಥಾಪಕರು, ಮತ್ತು ಗದಗ ಜಿಲ್ಲಾ ಮುಖ್ಯಸ್ಥರು, ಧಾರವಾಡ ಹಾಲು ಒಕ್ಕೂಟದ ಗದಗ ಉಪವಿಭಾಗ ಡಾ. ಪ್ರಸನ್ನ ಎಸ್.ಪಟ್ಟೇದ,ಧಾರವಾಡ ಹಾಲು ಒಕ್ಕೂಟ, ಮುಂಡರಗಿ ತಾಲೂಕಿನ ವಿಸ್ತರಣಾಧಿಕಾರಿಗಳಾದ ಸಿ.ಎಸ್.ಕಲ್ಲನಗೌಡರ ಉಪಸ್ಥಿತರಿದ್ದರು.


## ಆರೋಪಿ ಅಂಜನಿ ಟಿ.ಎಲ್‌ಗೆಜೈಲು ಶಿಕ್ಷೆ

**ಹಾಸನ :** ಅರಸೀಕೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಿನಾಂಕ27-09-2018 ರಂದು ನೊಂದಣಿಯಾಗಿದ್ದ 202/2018 ಕಲಂ 366 & 344 ಐ.ಪಿ.ಸಿ ಹಾಗೂ ಪೋಕ್ಸೋ ಕಾಯಿದೆ ಕಲಂ 8 & 12 ರ ರೀತ್ಯಾ ಪ್ರಕರಣ ದಾಖಲಾಗಿದ್ದು ತನಿಖೆ ಮಾಡಿ ವರದಿ ಸಲ್ಲಿಸಿದ್ದು ಹಾಸನದ 1ನೇ ಅಧಿಕ ಮತ್ತು ಜಿಲ್ಲಾ ಮತ್ತು ಸತ್ರ ನ್ಯಾಯಾಲಯ (ಎಫ್.ಟಿ.ಎಸ್.ಸಿ-01 ಜಿಲ್ಲಾ ಪೋಕ್ಸೋ ) ಎಸ್.ಪಿ.ಎಲ್. 17/2019 ದಿನಾಂಕ: 13-11-2025 ರಂದು ಆರೋಪಿ ಅಂಜನಿ ಟಿ.ಎಲ್. ಬಿನ್ ಲಕ್ಷ್ಮಣಯ್ಯ, ತಳಲೂರು ಗ್ರಾಮ, ಅರಸೀಕೆರೆ, ಹಾಸನ ಇವರಿಗೆ ಘನ ನ್ಯಾಯಾಲಯವು ಒಂದು ತಿಂಗಳುಗಳ ಸಾಧಾರಣ ಜೈಲು ಶಿಕ್ಷೆ ಮತ್ತು ರೂ 10,000 ಗಳು ದಂಡ ಹಾಗೂ ದಂಡ ಕಟ್ಟಲು ತಪ್ಪಿದಲ್ಲಿ 1 ತಿಂಗಳು ಕಾಲ ಸಾಧಾರಣ ಶಿಕ್ಷೆಯನ್ನು ಗೌರವಾನ್ವಿತ ನ್ಯಾಯಾಧಿಶರಾದ ದೇವರಾಜು ಹೆಚ್.ಎಂ. ಬಿ.ಎ. ಎಲ್.ಎಲ್.ಬಿ. ರವರು ಆದೇಶಿಸಿ ತೀರ್ಪು ನೀಡಿರುತ್ತಾರೆ. ಅಭಿಯೋಜನೆ ಪರವಾಗಿ ವಿಶೇಷ ಅಭಿಯೋಜಕರಾದ ಶ್ರೀನಿವಾಸಗೌಡ ರವರು ವಾದ ಮಂಡಿಸಿದ್ದರು.

## ಜವಾಹರ ನವೋದಯ ವಿದ್ಯಾಲಯ: ಪ್ರವೇಶ ಪತ್ರ ಪ್ರಕಟ

**ಬಳ್ಳಾರಿ:** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಚಿಕ್ಕಜೋಗಿಹಳ್ಳಿಯ ಜವಾಹರ್ ನವೋದಯ ವಿದ್ಯಾಲಯದ ಆರನೇ ತರಗತಿ ಪ್ರವೇಶಾತಿಗೆ ಡಿಸೆಂಬರ್ 13 ರಂದು ಪ್ರವೇಶ ಪರೀಕ್ಷೆ ನಡೆಯಲಿದ್ದು, ನೋಂದಾಯಿಸಿಕೊಂಡ ವಿದ್ಯಾರ್ಥಿಗಳು ಆನ್ ಲೈನ್ ನಲ್ಲಿ ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗಬೇಕು ಎಂದು ವಿದ್ಯಾಲಯದ ಪ್ರಾಚಾರ್ಯ ಸುದೇಶ ಗೋಪಾಲ ಮಲಾಜುರೆ ಅವರು ತಿಳಿಸಿದ್ದಾರೆ.ಪ್ರವೇಶ ಪತ್ರ ಡೌನ್ ಲೋಡ್ ಮಾಡಿಕೊಳ್ಳಲು ಆನ್ ಲೈನ್ ವೆಬ್ ಸೈಟ್ https://cbseitms.rcil.gov.in/nvs/AdminCard/AdminCard ಗೆ ಭೇಟಿ ನೀಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಶಾಮುಕ್ತ ಭಾರತ ಅಭಿಯಾನ ಯೋಜನೆಯ 5ನೇ ವಾರ್ಷಿಕೋತ್ಸವ ಆಚರಣೆ



**ಹಾಸನ :** ಕೇಂದ್ರ ಸರ್ಕಾರದ ನಶಾಮುಕ್ತ ಭಾರತ ಅಭಿಯಾನ ಯೋಜನೆ ಪ್ರಾರಂಭವಾಗಿ 5ನೇ ವರ್ಷಗಳು ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಮಾದಕ ವಸ್ತು ಸೇವನೆ ಮಾಡದೇ ಇರುವುದಾಗಿ ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳು, ಎಲ್ಲಾ ಕಾಲೇಜುಗಳು, ವಿಶ್ವವಿದ್ಯಾನಿಲಯಗಳು, ಸ್ಥಳೀಯ ಸಂಸ್ಥೆಗಳು, ಮಹಿಳಾ ಸ್ವಸಹಾಯ ಗುಂಪುಗಳು, ವಸತಿ ನಿಲಯಗಳು ಮತ್ತು ಸಾರ್ವಜನಿಕ ಸಂಸ್ಥೆಗಳಲ್ಲಿ ಸಾಮೂಹಿಕ ಪ್ರತಿಜ್ಞೆಯನ್ನು ಕೈಗೊಂಡಿರುತ್ತಾರೆ. ಅಲ್ಲದೆ, ನಶಾಮುಕ್ತ ಭಾರತ ಅಭಿಯಾನದ ರಾಷ್ಟ ಮಟ್ಟದ ಕಾರ್ಯಕ್ರಮವನ್ನು ಪಂಜಾಬ್ ರಾಜ್ಯದ ಅಮೃತಸರದಲ್ಲಿ ನ.18ರಂದು ನಡೆಸಲಾಗಿದ್ದು, ಇಡೀ ಕಾರ್ಯಕ್ರಮವು ಭಾರತಾದ್ಯಂತ ಬೆಳಿಗ್ಗೆ 11.30 ಗಂಟೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನೇರ ಪ್ರಸಾರವಾಯಿತು. ಹಾಸನ ಜಿಲ್ಲೆಯಲ್ಲಿಯೂ ಸಹ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳ ನೇತೃತ್ವದಲ್ಲಿ ಜಿಲ್ಲಾ ಪಂಚಾಯಿತಿಯ ಎನ್.ಐ.ಸಿ. ಕೇಂದ್ರದ ಮೂಲಕ ಆನ್‌ಲೈನ್ ಲೈವ್ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಯುವಕರು ಪ್ರತಿ ರಾಷ್ಟ್ರದ ಶಕ್ತಿಯಾಗಿರುತ್ತಾರೆ ಮತ್ತು ಯುವ ಶಕ್ತಿಯು ಸಮಾಜ ಮತ್ತು ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಕೊಡುಗೆಯನ್ನು ನೀಡುವಲ್ಲಿ ಪಾತ್ರವನ್ನು ವಹಿಸುತ್ತಿದೆ, ಆದ್ದರಿಂದ,

ಅತೀ ಹೆಚ್ಚು ಯುವಕರು ನಶಾ ಮುಕ್ತ ಭಾರತ ಅಭಿಯಾನದಲ್ಲಿ ಭಾಗವಹಿಸಿ ಕೊಡುಗೆ ನೀಡುವುದು ಬಹಳ ಮುಖ್ಯ. ದೇಶದ ಈ ಸವಾಲನ್ನು ಸ್ವೀಕರಿಸಿ. ಇಂದು ನಾವು ನಶಾ ಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ಒಂದಾಗುತ್ತಿದ್ದೇವೆ ಮತ್ತು ಸಮುದಾಯ ಕುಟುಂಬ ಸ್ನೇಹಿತರು ಮಾತ್ರವಲ್ಲದೆ ನಾವೂ ಮಾದಕ ವ್ಯಸನದಿಂದ ಮುಕ್ತರಾಗುತ್ತವೆ ಎಂಬ ಪ್ರತಿಜ್ಞೆಯನ್ನು ತೆಗೆದುಕೊಳ್ಳುತ್ತೇವೆ. ಏಕೆಂದರೆ ಬದಲಾವಣೆ ನಮ್ಮಿಂದಲೇ ಪ್ರಾರಂಭವಾಗಬೇಕಿರುತ್ತದೆ.ಆದ್ದರಿಂದ ನಾವೆಲ್ಲರೂ ಒಟ್ಟಾಗಿ ನಮ್ಮ ರಾಜ್ಯ/ಜಿಲ್ಲೆಯನ್ನು ಮಾದಕ ವ್ಯಸನದಿಂದ ಮುಕ್ತಗೊಳಿಸಲು ದೃಢ ನಿರ್ಧಾರ ತೆಗೆದುಕೊಳ್ಳುತ್ತೇವೆ.

ನನ್ನ ದೇಶವನ್ನು ಮಾದಕ ವಸ್ತು ವ್ಯಸನದಿಂದ ಮುಕ್ತಗೊಳಿಸಲು ನನ್ನ ಕೈಲಾದಷ್ಟು ಸಾಧ್ಯವಿರುವ ಎಲ್ಲಾ ಪ್ರಯತ್ನವನ್ನು ಮಾಡುತ್ತೇನೆ ಎಂದುಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ: ವಿವಿಧ ಪ್ರಶಸ್ತಿ ಮತ್ತು ವಿವಿಧ ಪ್ರೋತ್ಸಾಹಧನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಬಳ್ಳಾರಿ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಅರ್ಹ ಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿ ಮತ್ತು ವಿವಿಧ ಪ್ರೋತ್ಸಾಹಧನ ನೀಡುವ ಯೋಜನೆಗಳಿಂದ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

*ಪ್ರಶಸ್ತಿ ವಿವರ:*

ಏಕಲವ್ಯ ಪ್ರಶಸ್ತಿ-2024, ಜೀವಮಾನ ಸಾಧನೆ ಪ್ರಶಸ್ತಿ-2024, ಕರ್ನಾಟಕ ಕ್ರೀಡಾ ಪೋಷಕರ ಪ್ರಶಸ್ತಿ-2024, ಗುರಿ ಒಲಂಪಿಕ್ ಪದಕ-2025/26, ನಗದು ಪುರಸ್ಕಾರ-2023 ಮತ್ತು 2024, ಶೈಕ್ಷಣಿಕ ಶುಲ್ಕ ಮರುಪಾವತಿ-2025/26, ಕ್ರೀಡಾ ವಿದ್ಯಾರ್ಥಿ ವೇತನ-2025/26.

ಅರ್ಹ ಕ್ರೀಡಾಪಟುಗಳು ಅರ್ಜಿಗಳನ್ನು ಆನ್ ಲೈನ್ ಅಧಿಕೃತ ಜಾಲತಾಣ: https://sevasindhu.karnataka.gov.in ಮೂಲಕ ಡಿಸೆಂಬರ್ 03 ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಬಲ ಬೆಲೆಯಡಿ ಹೆಸರುಕಾಳು ಖರೀದಿ ಸಮಸ್ಯೆ ಪರಿಹಾರಕ್ಕೆ ಕ್ರಮ



**ಗದಗ :** "ಸರ್ಕಾರ ಸದಾ ರೈತರ ಪರವಾಗಿದೆ. ಹೆಸರುಕಾಳು ಬೆಂಬಲ ಬೆಲೆಯಲ್ಲಿ ಖರೀದಿಸುವ ಸಂಬಂಧ ಯಾವುದೇ ಕಾರಣಕ್ಕೂ ರೈತರಿಗೆ ಹಾನಿಯಾಗಲು ಬಿಡುವುದಿಲ್ಲ" ಎಂದು ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹೇಳಿದರು.

ಬಿಂಕದಕಟ್ಟಿಯ ಗ್ರಾಮ ಪಂಚಾಯತ ಭವನದಲ್ಲಿ ಸೋಮವಾರ ಹೆಸರುಕಾಳು ಬೆಂಬಲ ಬೆಲೆ ಖರೀದಿ ಸಂಬಂಧ ನಡೆದ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಹೆಸರುಕಾಳು ಖರೀದಿ ಪ್ರಕ್ರಿಯೆಯಲ್ಲಿ ಉದ್ಭವಿಸಿರುವ ತಾಂತ್ರಿಕ ಮತ್ತು ಗುಣಮಟ್ಟದ ಅಂಶಗಳ ಸಮಸ್ಯೆಗಳ ಪರಿಹಾರಕ್ಕಾಗಿ ಸಭೆ ಏರ್ಪಡಿಸಲಾಗಿತ್ತು.

ರೈತರ ಆಕ್ಷೇಪಣೆ ಹಾಗೂ ಬೇಡಿಕೆಗಳನ್ನು ಗಮನದಿಂದ ಆಲಿಸಿದ ಸಚಿವ ಡಾ. ಎಚ್. ಕೆ. ಪಾಟೀಲ, ಸಂಬಂಧಿಸಿದ ಇಲಾಖಾ ಅಧಿಕಾರಿಗಳೊಂದಿಗೆ ಚರ್ಚಿಸಿ, ಕೃಷಿಕರಿಗೆ ನ್ಯಾಯವಾಗುವಂತೆ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ರೈತರ ಪರಿಶ್ರಮ ವ್ಯರ್ಥವಾಗಬಾರದು, ಬೆಂಬಲ ಬೆಲೆ ಸೌಲಭ್ಯ ತಲುಪುವಂತೆ ಅಗತ್ಯ ಬದಲಾವಣೆಗಳನ್ನು ಸರ್ಕಾರದ ಮಟ್ಟದಲ್ಲಿ ಚರ್ಚೆ ಮಾಡುತ್ತೇವೆ" ಎಂದು ಸಚಿವ ಎಚ್ ಕೆ ಪಾಟೀಲ ಹೇಳಿದರು.ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಯಡಿ ಈವರೆಗೆ ಗದಗ ಜಿಲ್ಲೆಯಲ್ಲಿ ಕೇವಲ 440 ಕ್ವಿಂಟಲ್ ಹೆಸರುಕಾಳುಗಳನ್ನು ಮಾತ್ರ ಖರೀದಿಸಲಾಗಿದೆ ಎಂದು ಮಾರ್ಕೆಟಿಂಗ್ ಫೆಡರೇಶನ್ ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು. ಸರ್ಕಾರದ ಮಾರ್ಗಸೂಚಿ ಪ್ರಕಾರ ಹೆಚ್ಚಿನ ಹೆಸರುಕಾಳು ಬೆಳೆ ಗುಣಮಟ್ಟದ ಆಧಾರದ ಮೇಲೆ 'ರಿಜಕ್ಟ್' ಆಗುತ್ತಿರುವುದನ್ನು ಅವರು ತಿಳಿಸಿದರು.ಹೆಸರುಕಾಳು ಬೆಳೆ ಹಾನಿಗೊಳಗಾಗಿಲ್ಲ, ಕೇವಲ ಸ್ವಲ್ಪ

ಕಪ್ಪು ಚುಕ್ಕೆಗಳು ಕಂಡುಬರುವ ಮಟ್ಟಿಗೆ ಮಾತ್ರ ವ್ಯತ್ಯಾಸವಿದ್ದು,

ಇದಕ್ಕೂ ವಾತಾವರಣದ ವೈಪರೀತ್ಯಗಳು ಕಾರಣವೆಂದು ರೈತ ಮುಖಂಡರು ವಿವರಿಸಿದರು. ಇಂತಹ ಪರಿಸ್ಥಿತಿಯನ್ನು ಪರಿಗಣಿಸಿ, ಸರ್ಕಾರವು ಮಾರ್ಗಸೂಚಿಗಳನ್ನು ಸಡಿಲಗೊಳಿಸಿ ರೈತರಿಂದ ಹೆಸರುಕಾಳು ಖರೀದಿ ಮಾಡಿ ರೈತರ ಆರ್ಥಿಕ ಹಾನಿಯನ್ನು ತಪ್ಪಿಸಬೇಕೆಂದು ಅವರು ಸಚಿವರ ಗಮನಕ್ಕೆ ತಂದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್ ಮಾತನಾಡಿ, ರೈತರ ಸಮಸ್ಯೆಗೆ ಜಿಲ್ಲಾಡಳಿತ ಖಂಡಿತ ಸ್ಪಂದನೆ ಮಾಡಲಾದೆ. ರೈತರು ಬೆಳೆದ ಹೆಸರು ಖರೀದಿಗೆ ಇರುವ ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸಲು ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು ಅವರ ಸೂಚನೆಯಂತೆ ಕ್ರಮ ವಹಿಸಿ ಪ್ರಯತ್ನಿಸಲಾಗುವುದು. ರೈತರ ಶ್ರಮಕ್ಕೆ ಹಾನಿಯಾಗದಂತೆ ಜಿಲ್ಲಾಡಳಿತ ಕಾರ್ಯನಿರ್ವಹಿಸುತ್ತದೆ ಎಂದರು.

### ಪ್ರಮುಖಾಂಶಗಳು

- ಗದಗ ಜಿಲ್ಲೆಯಲ್ಲಿ 1.23 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಹೆಸರುಕಾಳು ಬಿತ್ತನೆ.
- ಅದರಲ್ಲಿ 96,043 ಹೆಕ್ಟೇರ್ ಪ್ರದೇಶದ ಹೆಸರುಕಾಳು ಹಾನಿ.
- ಸರ್ಕಾರ ಬೆಂಬಲ ಬೆಲೆಯಾಗಿ ಪ್ರತಿ ಕ್ವಿಂಟಲ್‌ಗೆ ರೂ 8,768 ನಿಗದಿ.
- ಜಿಲ್ಲೆಯಲ್ಲಿ 57 ಕೇಂದ್ರಗಳಲ್ಲಿ ಹೆಸರುಕಾಳು ಬೆಂಬಲ ಬೆಲೆಯಲ್ಲಿ ಖರೀದಿ ನಡೆಯುತ್ತಿದೆ.

## ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ ಸಮಾರಂಭ.

# ಇತಿಹಾಸ ಓದಿ ಮರೆತರೆ, ಇತಿಹಾಸ ಮರುಕಳಿಸುತ್ತದೆ.



**ಚಿತ್ರದುರ್ಗ:** ಗ್ರಂಥಾಲಯದಲ್ಲಿರುವ ಇತಿಹಾಸ ಪುಸ್ತಕಗಳನ್ನು ಓದಿ, ಇತಿಹಾಸವನ್ನು ಸರಿಯಾಗಿ ಅರ್ಥ ಮಾಡಿಕೊಂಡರೆ ಮಾತ್ರ ಇತಿಹಾಸ ಮರುಕಳಿಸದಂತೆ ತಡೆಯಬಹುದು, ಭಾರತದ ಸಂಪತ್ತಿನ ಮೇಲೆ ವಿದೇಶಿ ಆಕ್ರಮಣಕಾರರು ಅವಿರತವಾಗಿ ಲೂಟಿ ಮಾಡಿ, ನಮ್ಮ ಸಂಪತ್ತನ್ನ ಕಬಳಿಸಿ ಹೋಗಿದ್ದಾರೆ, ನಮ್ಮಲ್ಲಿ ಇರಬೇಕಾದ ಒಗ್ಗಟ್ಟನ್ನ ಈಗಲೂ ಸಹ ನಾವು ಪ್ರದರ್ಶಿಸದಿದ್ದರೆ ಮತ್ತೊಮ್ಮೆ ಗುಲಾಮಗಿರಿಗೆ ಇಳಿಯುವ ಸಂಭವವಿದೆ ಮತ್ತೆ ಇತಿಹಾಸ ಮರುಕಳಿಸುತ್ತದೆ. ಕರ್ನಾಟಕವನ್ನು ವಿಭಜಿಸುವಂತಹ ಯೋಚನೆಗಳನ್ನು ಯುವ ಜನಾಂಗ ಮಾಡಬಾರದು, ಏಕೀಕರಣದಲ್ಲಿ ಜನ ರಕ್ತ ಚೆಲ್ಲಿ ಕರ್ನಾಟಕವನ್ನ ಒಗ್ಗೂಡಿಸಿದ್ದಾರೆ, ಹಾಗಾಗಿ ಯುವ ಜನಾಂಗ ಇತಿಹಾಸವನ್ನು ಆಳವಾಗಿ ಅಧ್ಯಾಯ ಮಾಡಿ, ಭಾರತದ ಉಳಿವಿಗಾಗಿ ಪ್ರಯತ್ನಿಸಬೇಕು ಎಂದು ಹಿರಿಯ ಹಿರಿಯ ಪತ್ರಕರ್ತರಾದ ಶ್ರೀ ಉಜ್ಜೀರಪ್ಪನವರು ಮಾತನಾಡಿದರು.

ಚಿತ್ರದುರ್ಗ ನಗರದ ಕೇಂದ್ರ ಭಾಗದಲ್ಲಿರುವ ಶ್ರೀ ಕೃಷ್ಣರಾಜೇಂದ್ರ ನಗರ ಕೇಂದ್ರ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಸಮಾರೋಪ ಸಮಾರಂಭದ ಕಾರ್ಯಕ್ರಮದಲ್ಲಿ ಉದ್ಘಾಟಿಸುತ್ತಾ ಮಾತನಾಡಿದರು.

ಎತ್ತರವಾದ ಹಿಮಾಲಯವಿದ್ದರೂ ಸಹ ಕಣಿವೆಗಳ ಮುಖಾಂತರ ಭಾರತಕ್ಕೆ ಮುಸುಳಿ ಬಂದು, ಹಲವಾರು ಬಾರಿ ಅಕ್ರಮಣ ಮಾಡಿ, ನಮ್ಮಲ್ಲಿರುವ ಸಂಪತ್ತನ್ನ ದೋಚಿಕೊಂಡು ಹೋಗಿರುವ ಇತಿಹಾಸವನ್ನು ಯುವ ಜನಾಂಗ ಅರ್ಥ ಮಾಡಿಕೊಳ್ಳಬೇಕು, ಚೀನಾದವರು ರಕ್ಷಣೆ ಗೋಸ್ಕರ ಮಹಾ ಗೋಡೆಯನ್ನೇ ನಿರ್ಮಿಸಿಕೊಂಡರು, ಭಾರತ ಒಳ ಜಗಳದಿಂದ ಆಕ್ರಮಣಕಾರರಿಗೆ ಅವಕಾಶ ಕಲ್ಪಿಸಿ ಕೊಡುತ್ತಿತ್ತು ಎಂದರು.

ನಿವೃತ್ತ ಪ್ರಾಧ್ಯಾಪಕರಾದ ಶ್ರೀಮತಿ ಸಿ ಬಿ ಶೈಲಜಾ ರವರು ಮಾತನಾಡುತ್ತಾ ಎಸ್ ಎಲ್ ಬೈರಪ್ಪನವರ ಕಾದಂಬರಿಗಳನ್ನ ವಿದ್ಯಾರ್ಥಿಗಳು ಅಧ್ಯಯನ ಮಾಡಬೇಕು, ಜೀವನದ ಅನುಭವಗಳನ್ನ ಅದರಲ್ಲಿ ಅರ್ಥೈಸಿಸಲಾಗಿದೆ, ಮೂರು ತಲೆಮಾರುಗಳಷ್ಟು ಅಧ್ಯಯನ ಮಾಡಬಹುದಾದಂತ ಕಾದಂಬರಿಗಳನ್ನ ರಚಿಸಿ ಹೋಗಿದ್ದಾರೆ, ಇಂದಿನ ರಾಜಕೀಯ ಮತದಾನದ ಅವ್ಯವಸ್ಥೆಯನ್ನು ಸಹ ಎಸ್ ಎಲ್ ಭೈರಪ್ಪನವರು ತಮ್ಮ ಕಾದಂಬರಿಗಳಲ್ಲಿ ಪ್ರಸ್ತುತಪಡಿಸಿದ್ದಾರೆ, ತತ್ವಜ್ಞಾನ ಮತ್ತು ಸಂಶೋಧನಾ ಕಾದಂಬರಿಗಳನ್ನು ಓದುಗರಿಗೆ ನೀಡಿ ಹೋಗಿದ್ದಾರೆ, ಸೇವಾ ಮನೋಭಾವನೆಯಿಂದ ಊರಿನ ಕೆರೆಗೆ ನೀರು ತುಂಬಿಸಿ ಹೋಗಿದ್ದಾರೆ, ಅವರೊಬ್ಬರು ಸರಸ್ವತಿ ಪುತ್ರರಾಗಿದ್ದರು ಎಂದರು.

ಲೇಖಕರಾದ ಶ್ರೀ ಆನಂದ್ ಕುಮಾರ್ ಅವರು ಮಾತನಾಡುತ್ತಾ ಮೊದಲೆಲ್ಲ ಎಸ್ ಎಲ್ ಭೈರಪ್ಪನವರ ಕೃತಿಗಳ ಬಗ್ಗೆ ಆಸಕ್ತಿ ಕಡಿಮೆ ಇದ್ದಾಗ, ಶಿಕ್ಷಕರೊಬ್ಬರು ಕಾದಂಬರಿಗಳನ್ನು ಓದಲು ಪ್ರೋತ್ಸಾಹಿಸಿದ್ದರು, ನಂತರ ನಾನು ಅವರ ಅಭಿಮಾನಿಯಾದೆ, ದೇಶಕ್ಕೆ ಅಣೆಕಟ್ಟು ಕಟ್ಟಡಗಳು ಆಸ್ತಿಯಲ್ಲ, ಗ್ರಂಥಾಲಯಗಳೇ ಆಸ್ತಿ ಆಗಬೇಕಾಗಿದೆ, ಡಾ. ಬಿ.ಆರ್. ಅಂಬೇಡ್ಕರ್ ಅವರು ಗ್ರಂಥಾಲಯದಲ್ಲಿ ಅಭ್ಯಾಸ ಮಾಡಿ ಸಂವಿಧಾನ ರಚಿಸಿದ್ದನ್ನ ನೆನಪಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಗ್ರಂಥಾಲಯದಲ್ಲಿ ಓದಿ ಉತ್ತಮ ಕೆಲಸ ಪಡೆದ ರಂಗಸ್ವಾಮಿ ಜಿಲ್ಲಾ ಪಂಚಾಯತ್, ತ್ಯಾಗರಾಜ್, ಶುಚಿಗಾರರು, ಗ್ರಂಥಾಲಯ ನೋಡಿಕೊಳ್ಳುವ ಶ್ರೀಮತಿ ಸರಿತಾ ಎನ್.ವಿ ಅವರನ್ನು ಸನ್ಮಾನಿಸಲಾಯಿತು. ಶ್ರೀಮತಿ ಸುಮಾ ಕೋಡಿಹಳ್ಳಿ ಮುಖ್ಯ ಗ್ರಂಥಾಲಯಾಧಿಕಾರಿಗಳು, ಪತ್ರಕರ್ತರಾದ ಶ್ರೀ ಮಲ್ಲಿಕಾರ್ಜುನ್ ಉಪಸ್ಥಿತರಿದ್ದರು.

ಶ್ರೀ ಮಹೇಶ್ ಬಾರಕೇರ ವಂದಿಸಿದರು, ರೆಹಮತ್ ಉನ್ನಿಸಾ ಉಪನ್ಯಾಸಕರು ನಿರೂಪಿಸಿದರು, ಶ್ರೀಮತಿ ಎಸ್. ಬಿ. ಪಾಟೀಲ್ ಪ್ರಾರ್ಥಿಸಿದರು,

ಗ್ರಂಥಾಲಯದಲ್ಲಿ ನಡೆದ ಚಿತ್ರಕಲೆ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಉತ್ತಮ ಓದುಗರ ಪುರಸ್ಕಾರ, ಭಾಷಣ ಸ್ಪರ್ಧೆಗೆ ಬಹುಮಾನಗಳನ್ನು ನೀಡಿ ಪ್ರೋತ್ಸಾಹಿಸಲಾಯಿತು.

# ಸರ್ಕಾರಿ ಪದವಿ ಕಾಲೇಜಿನಲ್ಲಿ ಉದ್ಯೋಗ ಮೇಳ

**ದಾವಣಗೆರೆ :** ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ 20 ರ ಗುರುವಾರ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ ದಾವಣಗೆರೆ ವಿಶ್ವವಿದ್ಯಾನಿಲಯ ವ್ಯಾಪ್ತಿಯ 28 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2023 -24 ಮತ್ತು 2024- 25 ನೇ ಸಾಲಿನಲ್ಲಿ ಪದವಿಯೊಂದಿಗೆ ಕಲಿಕೆ ಜೊತೆ ಕೌಶಲ್ಯ ತರಬೇತಿ ಪಡೆದಿರುವ ಅಭ್ಯರ್ಥಿಗಳಿಗಾಗಿ ಉದ್ಯೋಗ ಮೇಳವನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಮತ್ತು ಪ್ಲೇಸ್ಮೆಂಟ್ ಸೆಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಹಯೋಗದೊಂದಿಗೆ ಆಯೋಜಿಸಲಾಗಿದೆ ಕಾರ್ಯಕ್ರಮವನ್ನು ಕಾಲೇಜು ಶಿಕ್ಷಣ ಇಲಾಖೆ ಪ್ರಾದೇಶಿಕ ಜಂಟಿ ನಿರ್ದೇಶಕ ಕಛೇರಿಯ ಜಂಟಿ ನಿರ್ದೇಶಕರಾದ ಪ್ರೊ ಎಚ್ ಕೇಶವ ಅವರು ಉದ್ಘಾಟಿಸಲಿದ್ದಾರೆ ಕಾರ್ಯಕ್ರಮದಲ್ಲಿ ಕರ್ನಾಟಕ

ಕೌಶಲ್ಯ ಅಭಿವೃದ್ಧಿ ನಿಗಮದ ಕಾರ್ಯಕಾರಿ ನಿರ್ದೇಶಕರಾಗಿರುವ ಶ್ರೀಮತಿ ಸುಮತಿ ಬಿಎಸ್ ರವರು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಕಲಿಕೆ ಜೊತೆ ಕೌಶಲ್ಯದ ನೋಡಲು ಅಧಿಕಾರಿ ಪ್ರೋ ನಾಗೇಶ್ ರವರು ಮತ್ತು ದಾವಣಗೆರೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ. ಸಿದ್ದೇಶ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಪ್ರೊಫೆಸರ್ ಬಿ ಸಿ ತಹಸಿಲ್ದಾರ್ ಅವರು ವಹಿಸುವರು ಕಾರ್ಯಕ್ರಮದಲ್ಲಿ ಸಂಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ನಾಗರಾಜ್ ತಳವಾರ್ ಪ್ಲೇಸ್ಮೆಂಟ್ ಅಧಿಕಾರಿ ಡಾ. ವೆಂಕಟೇಶ್ ಬಾಬು ಎಸ್ ಐ ಯು ಎ ಸಿ ಸಂಚಾಲಕರಾದ ಡಾ. ಗುರುರಾಜ ಜೆ ಪಿ ಹಾಗೂ

ಕಚೇರಿ ಅಧೀಕ್ಷಕರಾದ ಶ್ರೀಮತಿ ಪ್ರತಿಬಾ ರವರು ಉಪಸ್ಥಿತರಿರುವರು ದಾವಣಗೆರೆ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲಾ ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ

# ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಚಿತ್ರಕಲೆ ಸ್ಪರ್ಧೆಗಳ ಆಯೋಜನೆ

**ಶಿವಮೊಗ್ಗ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಹಾಗೂ ವಿಜ್ಞಾನದಲ್ಲಿ ಆಸಕ್ತಿ ಮುಡಿಸಲು "ಸುಸ್ಥಿರ ಅಭಿವೃದ್ಧಿಗಾಗಿ ವಿಜ್ಞಾನ ಮತ್ತು ತಂತ್ರಜ್ಞಾನ" ಎಂಬ ವಿಷಯದ ಮೇಲೆ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಚಿತ್ರಕಲೆ ಸ್ಪರ್ಧೆಗಳನ್ನು ನ. 26 ರಂದು ಅಕಾಡೆಮಿಯಲ್ಲಿ ಕಚೇರಿಯಲ್ಲಿ ಏರ್ಪಡಿಸಲಾಗಿದೆ.

ರಾಜ್ಯದ ಎಲ್ಲಾ ಪ್ರೌಢಶಾಲೆ ಹಾಗೂ ವಿಜ್ಞಾನ ಪದವಿ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದ್ದು, ಆಸಕ್ತ ವಿದ್ಯಾರ್ಥಿಗಳು ನ. 25 ರೊಳಗಾಗಿ ಗೂಗಲ್ ಫಾರಂ https://forms.gle/js3x5Laf94ihh7956ಮೂಲಕ ನೊಂದಾಯಿಸಿಕೊಳ್ಳುವಂತೆ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರ ಡಾ. ಆನಂದ್ ಆರ್. ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಯನ್ನು ಕಾರ್ಯಕ್ರಮದ ಸಂಯೋಜಕರಾದ ಶ್ರೀನಿವಾಸು ವಿ.ಕೆ. ವೈಜ್ಞಾನಿಕಾಧಿಕಾರಿ ಮೊ. ಸಂ.: 9620767819 ಹಾಗೂ ಉಮೇಶ ಘಾಟಗೆ, ವೈಜ್ಞಾನಿಕಾಧಿಕಾರಿ ಮೊ.ಸಂ.:9743084194 ಗಳನ್ನು ಸಂಪರ್ಕಿಸುವುದು ಹಾಗೂ ವೆಬ್‌ಸೈಟ್ https://kstacademy.in ನ್ನು ವೀಕ್ಷಿಸಬಹುದಾಗಿದೆ.

## ದೀಕ್ಷಿತ್ ಶೆಟ್ಟಿ ನಟನೆಯ 'ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ' ಟ್ರೇಲರ್ ರಿಲೀಸ್; ಚಿತ್ರ ಬಿಡುಗಡೆ ದಿನಾಂಕ ಘೋಷಣೆ




ದಿ ಗರ್ಲ್‌ಫ್ರೆಂಡ್' ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ಅವಪ ಪ್ರಿಯತಮನ ಪಾತ್ರದಲ್ಲಿ ನಟಿಸಿ ಎಲ್ಲರ ಗಮನ ಸೆಳೆದ ದಿಯಾ ಖ್ಯಾತಿಯ ನಟ ದೀಕ್ಷಿತ್ ಶೆಟ್ಟಿ ಇದೀಗ ಕನ್ನಡದಲ್ಲಿ ತಮ್ಮ ಮುಂದಿನ ಚಿತ್ರ ಬಿಡುಗಡೆಗೆ ಸಜ್ಜಾಗಿದ್ದಾರೆ. 'ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ' ಚಿತ್ರದಲ್ಲಿ ದೀಕ್ಷಿತ್ ನಾಯಕನಾಗಿದ್ದು, ನವೆಂಬರ್ 21 ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಚಿತ್ರಕ್ಕೆ ಅಭಿಷೇಕ್ ಎಂ ಆಕ್ಷನ್ ಕಟ್ ಹೇಳಿದ್ದು, ಚಿತ್ರದ ಟ್ರೇಲರ್ ನವೆಂಬರ್ 15 ರಂದು ಬಿಡುಗಡೆಯಾಯಿತು.

ಚಿತ್ರತಂಡದ ಪ್ರಕಾರ, ಚಿತ್ರವು ನಿಜವಾಗಿ ಏನನ್ನು ಒಳಗೊಂಡಿದೆ ಎಂಬುದರ ಕೇವಲ ಶೇ 5 ರಷ್ಟನ್ನು ಮಾತ್ರ ಟ್ರೇಲರ್ ಬಹಿರಂಗಪಡಿಸುತ್ತದೆ. ಇದು ಟೀಸರ್‌ನಲ್ಲಿ ಅವರು ಸುಳಿವು ನೀಡಿದ್ದನ್ನು ವಿಸ್ತರಿಸುತ್ತದೆ – ಕಳ್ಳರ ಗುಂಪೊಂದು ದರೋಡೆಗೆ ಪ್ರಯತ್ನಿಸುವುದು ಮತ್ತು ಅದರ ಪರಿಣಾಮವನ್ನು ತೆರೆಮೇಲೆ ತೋರಿಸುತ್ತದೆ. ದೀಕ್ಷಿತ್ ಅವರೊಂದಿಗೆ ಅಶ್ವಿನ್ ರಾವ್ ಪಲ್ಲಕಿ, ಗೋಪಾಲಕೃಷ್ಣ ದೇಶಪಾಂಡೆ, ಬೃಂದಾ ಆಚಾರ್ಯ, ಶ್ರುತಿ ಹರಿಹರನ್, ಸಾಧು ಕೋಕಿಲ, ಭರತ್ ಜಿಬಿ, ಶ್ರೀವತ್ಸ, ವಿಜಯ್ ಚೆಂಡೂರ್ ಮುಂತಾದವರು ನಟಿಸಿದ್ದಾರೆ.

ನವೆಂಬರ್ 21 ರಂದು ಕನಿಷ್ಠ 7 ಕನ್ನಡ ಚಿತ್ರಗಳು ಬಿಡುಗಡೆಯಾಗುತ್ತಿದ್ದು, ಅದರಲ್ಲಿ ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ ಕೂಡ ಒಂದು. ಟ್ರೇಲರ್ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ದೀಕ್ಷಿತ್, 'ಪ್ರೇಕ್ಷಕರು ಚಿತ್ರಮಂದಿರಗಳನ್ನು ನಿರ್ಲಕ್ಷಿಸುತ್ತಿರುವ ಈ ಸಮಯದಲ್ಲಿ, ಇಡೀ ಕನ್ನಡ ಉದ್ಯಮಕ್ಕೆ ಚಲನಚಿತ್ರಗಳನ್ನು ಮಾಡಬೇಕೆ ಅಥವಾ ಬೇಡವೇ ಎಂಬುದು ದೊಡ್ಡ ಪ್ರಶ್ನೆಯಾಗಿದೆ.ಆದರೆ, ಮುಖ್ಯವಾಗಿ, ಕಳೆದ ಕೆಲವು ವರ್ಷಗಳಿಂದ, ಪ್ರೇಕ್ಷಕರು ಒಟಿಟಿಯಲ್ಲಿ ಮನೆಯಲ್ಲಿಯೇ ಚಿತ್ರಗಳನ್ನು ನೋಡುವ ಸೌಕರ್ಯವನ್ನು ಹೆಚ್ಚಾಗಿ ಹುಡುಕುತ್ತಿದ್ದಾರೆ. ದೊಡ್ಡ ಪರದೆಯ ಮೇಲೆ ದೊಡ್ಡ ಚಿತ್ರಗಳನ್ನು ಮಾತ್ರ ನೋಡುತ್ತಿದ್ದಾರೆ ಎಂಬುದು ಕಳವಳಕಾರಿ ಸಂಗತಿ. ಇದು ಚಿತ್ರ ನಿರ್ಮಾಪಕರು ಪ್ರಯೋಗ ಮತ್ತು ಹೊಸ ಕಥೆಗಳ ಅನ್ವೇಷಣೆಯನ್ನು ದೂರವಿಡುವ ಮತ್ತು ಬದಲಾಗಿ, ಪ್ರಯತ್ನಿಸಿದ ಮತ್ತು ಪರೀಕ್ಷಿಸಲ್ಪಟ್ಟ ಸೂತ್ರಬದ್ಧ ಸಿನಿಮಾಕ್ಕೆ ಅಂಟಿಕೊಳ್ಳುವ ಅಪಾಯಕಾರಿ ಪ್ರವೃತ್ತಿಗೆ ಕಾರಣವಾಗುತ್ತದೆ ಎಂದು ದೀಕ್ಷಿತ್ ಹೇಳಿದರು.

# ಸಂಚಿತ್ ಸಂಜೀವ್ ನಟನೆಯ 'ಮ್ಯಾಂಗೋ ಪಚ್ಚ' ಬಿಡುಗಡೆಗೆ ಸಿದ್ಧ; ಸಂಕ್ರಾಂತಿಯಂದು ತೆರೆಗೆ!

**ಕಿಚ್ಚ ಸುದೀಪ್ ಅವರ ಸೋದರಳಿಯ ಸಂಚಿತ್ ಸಂಜೀವ್ ಚೊಚ್ಚಲ ಚಿತ್ರ 'ಮ್ಯಾಂಗೋ ಪಚ್ಚ' ಬಿಡುಗಡೆಗೆ ಸಿದ್ಧವಾಗಿದ್ದು, ಜನವರಿ 15ರ ಸಂಕ್ರಾಂತಿ ಹಬ್ಬದಂದು ರಾಜ್ಯದಾದ್ಯಂತ ಅಧಿಕೃತವಾಗಿ ಬಿಡುಗಡೆಯಾಗಲಿದೆ.**

**ಚಿತ್ರದ ಟೀಸರ್ ಈಗಾಗಲೇ ವೀಕ್ಷಕರಲ್ಲಿ ಆಸಕ್ತಿಯನ್ನು ಹುಟ್ಟುಹಾಕಿದೆ. ಪ್ರಸಿದ್ಧ ನಿರ್ಮಾಪಕ ಮತ್ತು ವಿತರಕರಾದ ಸಂಜೀವ್ ಮತ್ತು ಕಿಚ್ಚ ಸುದೀಪ್ ನಂತರ, ಸಂಚಿತ್ ಸ್ಯಾಂಡಲ್‌ವುಡ್‌ನಲ್ಲಿ ನಟನಾಗಿ ತಮ್ಮ ಮೊದಲ ಹೆಜ್ಜೆಗಳನ್ನು ಇಡಲು ಸಜ್ಜಾಗಿದ್ದಾರೆ.**



ಕುತೂಹಲಕಾರಿಯಾಗಿ, ಇತ್ತೀಚಿನ ವರ್ಷಗಳಲ್ಲಿ, ಸಂಕ್ರಾಂತಿ ಹಬ್ಬದಂದು ಇತರ ಭಾಷೆಗಳ ದೊಡ್ಡ ಬಜೆಟ್ ಚಿತ್ರಗಳು ಹೆಚ್ಚಾಗಿ ಬಿಡುಗಡೆಯಾಗುತ್ತವೆ. ಇದರಿಂದಾಗಿ ಸ್ಥಳೀಯ ಸಿನಿಮಾಗಳಿಗೆ ಸೀಮಿತ ಸ್ಥಳಾವಕಾಶವಿದೆ. 'ಮ್ಯಾಂಗೋ ಪಚ್ಚ' ಇದೀಗ ಸಂಕ್ರಾಂತಿಯಂದೇ ತೆರೆಕಾಣಲಿದ್ದು, ಅದೃಷ್ಟ ಪರೀಕ್ಷೆಗೆ ಇಳಿಯಲಿದೆ. ಚಿತ್ರವು ಈಗಾಗಲೇ ತನ್ನ ಆಡಿಯೋ ಹಕ್ಕುಗಳನ್ನು ಸರೆಗಮ ಮ್ಯೂಸಿಕ್ ಲೇಬಲ್‌ಗೆ ರೂ 1.2 ಕೋಟಿಗೆ ಮಾರಾಟ ಮಾಡುವ ಮೂಲಕ ಗಮನ ಸೆಳೆದಿದೆ.

ವಿವೇಕ್ ನಿರ್ದೇಶನದ ಮಾಂಗೋ ಪಚ್ಚ ಚಿತ್ರಕ್ಕೆ ಸುಪ್ರಿಯಾನ್ವಿ ಸ್ಟುಡಿಯೋಸ್ ಮತ್ತು ಕೆಆರ್‌ಜಿ ಸ್ಟುಡಿಯೋಸ್ ಬೆಂಬಲ ನೀಡಿವೆ. ಮೈಸೂರಿನಲ್ಲಿ 2001 ರಿಂದ 2011 ರವರೆಗಿನ ಘಟನೆಗಳನ್ನು ಒಳಗೊಂಡಿರುವ ಕ್ರೈಮ್ ಥ್ರಿಲ್ಲರ್ ಇದಾಗಿದೆ. ನಗರದಲ್ಲಿಯೇ ಹೆಚ್ಚಾಗಿ ಚಿತ್ರೀಕರಿಸಲಾಗಿದ್ದು, ಮೈಸೂರಿನ ನೈಜ ಸುವಾಸನೆಯನ್ನು ಸೆರೆಹಿಡಿಯುತ್ತದೆ.

ಸಂಚಿತ್ ಅವರಿಗೆ ಜೋಡಿಯಾಗಿ ಕರಾವಳಿ ಬೆಡಗಿ ಕಾಜಲ್ ಕುಂದರ್ ನಟಿಸಿದ್ದಾರೆ.

ಇರದೊಂದಿಗೆ ಮಯೂರ್ ಪಟೇಲ್, ಭಾವನಾ, ಹಂಸಾ, ಹರಿಣಿ ಶ್ರೀಕಾಂತ್, ಜೈ ಗೋಪಿನಾಥ್ ಮತ್ತು ಪ್ರಶಾಂತ್ ಹಿರೇಮಠ್ ಸೇರಿದಂತೆ ಇತರರು ನಟಿಸಿದ್ದಾರೆ. ಚಿತ್ರಕ್ಕೆ ಶೇಖರ್ ಚಂದ್ರ ಅವರ ಛಾಯಾಗ್ರಹಣ, ಚರಣ್ ರಾಜ್ ಅವರ ಸಂಗೀತ ಸಂಯೋಜನೆ, ರವಿವರ್ಮ ಮತ್ತು ಸತೀಶ್ ಅವರು ಆಕ್ಷನ್ ದೃಶ್ಯಗಳನ್ನು ಸಂಯೋಜಿಸಿದ್ದಾರೆ. ಇ ಹರ್ಷ ಅವರ ಕೊರಿಯೋಗ್ರಫಿ ಚಿತ್ರಕ್ಕಿದೆ.

## ಭರ್ಜರಿ' ಚಿತ್ರದ 8 ವರ್ಷಗಳ ಬಳಿಕ ಬೆಳ್ಳಿತೆರೆಯಲ್ಲಿ ಮೋಡಿ ಮಾಡಲು ಧ್ರುವ ಸರ್ಜಾ, ರಚಿತಾ ರಾಮ್ ಸಜ್ಜು!




ಪ್ರೇಮ್ ನಿರ್ದೇಶನದ 'ಕೆಡಿ' ಚಿತ್ರದ ಬಿಡುಗಡೆಗೆ ಎದುರು ನೋಡುತ್ತಿರುವ ನಟ ಧ್ರುವ ಸರ್ಜಾ ಇದೀಗ ಹೊಸ ಚಿತ್ರದಲ್ಲಿ ಪ್ರೇಕ್ಷಕರ ಎದುರು ಬರಲು ಸಿದ್ಧವಾಗಿದ್ದಾರೆ. ಆಕ್ಷನ್ ಪ್ರಿನ್ಸ್ ಇದೀಗ ಕೆರೆಬೇಟೆ ಚಿತ್ರದ ಖ್ಯಾತಿಯ ನಿರ್ದೇಶಕ ರಾಜ್‌ಗುರು ಬಿ ಅವರೊಂದಿಗೆ ಕಂಟೆಂಟ್ ಆಧರಿತ ಕಮರ್ಷಿಯಲ್ ಎಂಟರ್‌ಟೈನರ್ ಚಿತ್ರಕ್ಕಾಗಿ ಕೈಜೋಡಿಸಿದ್ದಾರೆ ಎಂದು ವರದಿಯಾಗಿದೆ. ಮೂಲಗಳ ಪ್ರಕಾರ, ಕಥೆಯು ಗ್ರಾಮೀಣ ಹಿನ್ನೆಲೆಯಲ್ಲಿ ಬೇರೂರಿದ್ದು, ನಾಟಕ ಮತ್ತು ಆಕ್ಷನ್ ಮಿಶ್ರಣ ಹೊಂದಿದೆ. ಚಿತ್ರಕ್ಕೆ ಗೋಲ್ಡ್‌ಮ್ಯಾನ್ಸ್ ಟೆಲಿಫಿಲ್ಮ್ಸ್‌ನ ಮನೀಶ್ ಶಾ ಅವರು ಬಂಡವಾಳ ಹೂಡುತ್ತಿದ್ದಾರೆ.

ಈ ಚಿತ್ರದ ನಾಯಕಿ ಯಾರೆಂಬ ಬಗ್ಗೆ ಸಾಕಷ್ಟು ಊಹಾಪೋಹಗಳಿದ್ದರೂ, ರಾಜ್‌ಗುರು ನಿರ್ದೇಶನದ ಚಿತ್ರದಲ್ಲಿ ಧ್ರುವ ಸರ್ಜಾ ಅವರಿಗೆ ಜೋಡಿಯಾಗಿ ನಟಿ ರಚಿತಾ ರಾಮ್ ಮತ್ತೆ ಕಾಣಿಸಿಕೊಳ್ಳಲಿದ್ದಾರೆ ಎಂದು ತಿಳಿದುಬಂದಿದೆ. ಭರ್ಜರಿ (2017) ಬಿಡುಗಡೆಯಾದ ಎಂಟು ವರ್ಷಗಳ ನಂತರ ಧ್ರುವ ಮತ್ತು ರಚಿತಾ ಬೆಳ್ಳಿತೆರೆಯಲ್ಲಿ ಒಟ್ಟಾಗಿ ಕಾಣಿಸಿಕೊಳ್ಳಲಿದ್ದಾರೆ.

ಚೇತನ್ ಕುಮಾರ್ ನಿರ್ದೇಶನದ ಭರ್ಜರಿ ಚಿತ್ರದಲ್ಲಿ ಇಬ್ಬರ ಕೆಮಿಸ್ಟ್ರಿ ಸಖತ್ ವರ್ಕ್ ಆಗಿತ್ತು. ಇದೀಗ ಈ ಜೋಡಿ ಅದೇ ಕೆಮಿಸ್ಟ್ರಿಯನ್ನು ತೆರೆಮೇಲೆ ಮರುಸೃಷ್ಟಿಸುತ್ತದೆಯೇ ಎಂದು ಅಭಿಮಾನಿಗಳು ಕಾಯುತ್ತಿದ್ದಾರೆ. ಇನ್ನೂ ಅಧಿಕೃತವಾಗಿ ಘೋಷಿಸಲಾಗಿಲ್ಲವಾದರೂ, ಚಿತ್ರವು ಪ್ರೀ-ಪ್ರೊಡಕ್ಷನ್‌ನ ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಅದ್ದೂರಿ ಮುಹೂರ್ತ ಕಾರ್ಯಕ್ರಮ ನೆರವೇರುವ ನಿರೀಕ್ಷೆಯಿದೆ ಎಂದು ವರದಿಯಾಗಿದೆ.

## ರಾಜಮೌಳಿ-ಮಹೇಶ್ ಬಾಬು ಕಾಂಬಿನೇಷನ್ ನ ಹೊಸ ಚಿತ್ರದ 'ಟೈಟಲ್' ಅನಾವರಣ



**ಹೈದರಾಬಾದ್**: ಖ್ಯಾತ ನಿರ್ದೇಶಕ ಎಸ್. ಎಸ್. ರಾಜಮೌಳಿ ಹಾಗೂ ಮಹೇಶ್ ಬಾಬು ಕಾಂಬಿನೇಷ್ ನಲ್ಲಿ ತಯಾರಾಗುತ್ತಿರುವ ಹೊಸ ಸಿನಿಮಾದ ಟೈಟಲ್ ಅನಾವರಣವಾಗಿದೆ.

ರಾಮೋಜಿ ಫಿಲ್ಮ್ ಸಿಟಿಯಲ್ಲಿ ನಡೆಯುತ್ತಿರುವ Globetrotter ಕಾರ್ಯಕ್ರಮದಲ್ಲಿ ರಾಜಮೌಳಿ ನಿರ್ದೇಶಿಸುತ್ತಿರುವ, ಮಹೇಶ್ ಬಾಬು ನಾಯಕ ನಟನಾಗಿ ಅಭಿನಯಿಸುತ್ತಿರುವ ಹೊಸ ಸಿನಿಮಾಕ್ಕೆ 'ವಾರಾಣಸಿ' ಎಂದು ಹೆಸರಿಡಲಾಗಿದೆ.

ಬೃಹತ್ ಎಲ್ ಇಡಿ ಪರದೆಯಲ್ಲಿ ಬೃಹತ್ ಜನಸ್ತೋಮದ ನಡುವೆ ಸಿನಿಮಾದ ಟೈಟಲ್ ಹಾಗೂ ಮಹೇಶ್ ಬಾಬು ಅವರ ಫಸ್ಟ್ ಲುಕ್ ಅನಾವರಣಗೊಂಡಿದೆ.

ಅಭಿಮಾನಿಗಳು ಟೈಟಲ್ ಕೇಳಿ ಸಂಭ್ರಮಿಸಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುತ್ತಿದ್ದಾರೆ.

ರಾಜಮೌಳಿ ಅವರ ತಂದೆ ಎಸ್ ಎಸ್ ವಿಜಯೇಂದ್ರ ಪ್ರಸಾದ್ ಕಥೆ ಹೊಂದಿರುವ ಬಿಗ್ ಬಜೆಟ್ ಚಿತ್ರ ಆಫ್ರಿಕಾದ ದಟ್ಟ ಕಾಡುಗಳಲ್ಲಿ ಚಿತ್ರೀಕರಣವಾಗುತ್ತಿದ್ದು, ಪೃಥ್ವಿರಾಜ್ ಸುಕುಮಾರನ್, ಪ್ರಿಯಾಂಕ್ ಚೋಪ್ರಾ ಮತ್ತಿತರರು ಚಿತ್ರದಲ್ಲಿ ಅಭಿನಯಿಸುತ್ತಿದ್ದಾರೆ.

## ಸೃಜನ್ ಲೋಕೇಶ್ ಅಭಿನಯದ ಬಹು ನಿರೀಕ್ಷಿತ 'GST' ಟ್ರೈಲರ್ ರಿಲೀಸ್!




ಟಾಕಿಂಗ್ ಸ್ಟಾರ್ ಸೃಜನ್ ಲೋಕೇಶ್ ಚೊಚ್ಚಲ ನಿರ್ದೇಶನದ ಜೊತೆಗೆ ನಾಯಕ ನಟನಾಗಿ ಅಭಿನಯಿಸಿರುವ ಬಹುನಿರೀಕ್ಷಿತ 'GST'ಚಿತ್ರದ ಟ್ರೈಲರ್ ರಿಲೀಸ್ ಆಗಿದೆ.

ಸಂದೇಶ್ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಸಂದೇಶ್ ಎನ್. ಅವರು ನಿರ್ಮಿಸಿರುವ ಈ ಚಿತ್ರವು ಹಾರರ್-ಕಾಮಿಡಿ ಕಥಾಹಂದರವನ್ನು ಹೊಂದಿದೆ. ಚಿತ್ರಕ್ಕೆ ಚಂದನ್ ಶೆಟ್ಟಿ ಅವರ ಸಂಗೀತ ಮತ್ತು ಸುರೇಶ್ ಅವರ ಛಾಯಾಗ್ರಹಣವಿದೆ.

ಈ ಚಿತ್ರದಲ್ಲಿ ಸೃಜನ್ ಲೋಕೇಶ್ ಅವರಿಗೆ ನಾಯಕಿಯಾಗಿ ರಜನಿ ಭಾರದ್ವಾಜ್ ನಟಿಸಿದ್ದಾರೆ. ಜೊತೆಗೆ ಅವರ ಗಿರಿಜಾ ಲೋಕೇಶ್ ಮತ್ತು ಸೃಜನ್ ಅವರ ಪುತ್ರ ಸುಕೃತ್ ಕೂಡ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಉಳಿದಂತೆ ಪ್ರಮೋದ್ ಶೆಟ್ಟಿ, ಶೋಭರಾಜ್, ಶರತ್ ಲೋಹಿತಾಶ್ವ, ನಿವೇದಿತಾ ಗೌಡ, ತಬಲಾ ನಾಣಿ, ರವಿಶಂಕರ್ ಗೌಡ ಮತ್ತು ವಿನೋದ್ ಗೊಬ್ಬರಗಾಲ ಮತ್ತಿತರರ ತಾರಾಬಳಗವಿದೆ. ಈ ಚಿತ್ರವು ನವೆಂಬರ್ 28 ರಂದು ರಾಜ್ಯಾದ್ಯಂತ ತೆರೆಗೆ ಬರಲು ಸಿದ್ಧವಾಗಿದೆ.

# ಮಾರ್ಕ್' ಚಿತ್ರೀಕರಣ ಪೂರ್ಣ ಕಿಚ್ಚ ಸುದೀಪ್ ನಟನೆಯ ಚಿತ್ರ ಬಿಡುಗಡೆ

ಕಿಚ್ಚ ಸುದೀಪ್ ಅಭಿನಯದ ಮಾರ್ಕ್ ಚಿತ್ರದ ಚಿತ್ರೀಕರಣ ಮುಕ್ತಾಯಗೊಂಡಿದ್ದು, ಬೆಂಗಳೂರಿನ ಕನಕಪುರ ರಸ್ತೆಯಲ್ಲಿ ಅಂತಿಮ ದೃಶ್ಯದ ಚಿತ್ರೀಕರಣ ಪೂರ್ಣಗೊಂಡಿದೆ. ಚಿತ್ರವು ಈಗ ಪೋಸ್ಟ್-ಪ್ರೊಡಕ್ಷನ್ ಹಂತದಲ್ಲಿದ್ದು, ಡಿಸೆಂಬರ್ 25ರಂದು ಬಿಡುಗಡೆಗೆ ಸಜ್ಜಾಗುತ್ತಿದೆ. ಅದೇ ದಿನ ಅರ್ಜುನ್ ಜನ್ಯ ನಿರ್ದೇಶನದ ಚೊಚ್ಚಲ ಚಿತ್ರ 45 ಬಿಡುಗಡೆಯಾಗಲಿದೆ. ಚಿತ್ರದಲ್ಲಿ ನಟ ಶಿವರಾಜ್‌ಕುಮಾರ್, ಉಪೇಂದ್ರ ಮತ್ತು ರಾಜ್ ಬಿ ಶೆಟ್ಟಿ ನಟಿಸಿದ್ದು, ರಮೇಶ್ ರೆಡ್ಡಿ ನಿರ್ಮಿಸಿದ್ದಾರೆ.

ಮ್ಯಾಕ್ಸ್ ಯಶಸ್ಸಿನ ನಂತರ ಕಿಚ್ಚ ಸುದೀಪ್ ಮತ್ತು ನಿರ್ದೇಶಕ ವಿಜಯ್ ಕಾರ್ತಿಕೇಯ ಎರಡನೇ ಬಾರಿಗೆ ಮಾರ್ಕ್ ಮೂಲಕ ಒಂದಾಗಿದ್ದಾರೆ. ಸುದೀಪ್ ಶಿಸ್ತುಬದ್ಧ ಮತ್ತು ನಿರ್ಭೀತ ಪೊಲೀಸ್ ಅಧಿಕಾರಿ ಅಜಯ್ ಮಾರ್ಕಂಡೆ ಪಾತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರದಲ್ಲಿ ನವೀನ್ ಚಂದ್ರ, ದೀಪ್‌ಶಿಕಾ, ಗುರು ಸೋಮಸುಂದರಂ, ರೋಶನಿ ಪ್ರಕಾಶ್, ಡ್ರ್ಯಾಗನ್ ಮಂಜು, ಗೋಪಾಲಕೃಷ್ಣ ದೇಶಪಾಂಡೆ ಮತ್ತು ಮಹಾಂತೇಶ್ ಹಿರೇಮಠ್, ಯೋಗಿ ಬಾಬು, ಅಭಿಷೇಕ್ ಜೋಸೆಫ್ ಜಾರ್ಜ್, ಅರ್ಚನಾ ಕೊಟ್ಟಿಗೆ, ಪ್ರತಾಪ್ ನಾರಾಯಣ್ ಮತ್ತು ಸತ್ಯ ಎಸ್‌ಕೆ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ನಿಶ್ವಿಕಾ ನಾಯ್ಡು ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.



ಜುಲೈ 7 ರಂದು ಪ್ರಾರಂಭವಾದ ಪ್ರಯಾಣದ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಸುದೀಪ್ ಹೃದಯಸ್ಪರ್ಶಿ ಟಿಪ್ಪಣಿಯನ್ನು ಹಂಚಿಕೊಂಡಿದ್ದಾರೆ. 'ನಮ್ಮ ತಂಡವು ಒಂದೇ ಉದ್ದೇಶದಿಂದ ಹೊರಟಿತು: ಆರಂಭದಲ್ಲಿ ಅಸಾಧ್ಯವೆಂದು ತೋರಿದ್ದನ್ನು ಸಾಧಿಸುವುದು. ಅದನ್ನು ಸಾಧ್ಯವಾಗಿಸಿದ್ದು ಕೆಲವರ ಪ್ರಯತ್ನವಲ್ಲ, ಬದಲಾಗಿ ಪ್ರತಿಯೊಬ್ಬ ವ್ಯಕ್ತಿಯ ಕಠಿಣ ಪರಿಶ್ರಮ. ಪ್ರತಿಯೊಬ್ಬ ಸದಸ್ಯರು ಪ್ರತಿದಿನ ಒಂದೇ ಉದ್ದೇಶದಿಂದ ಎಚ್ಚರಗೊಂಡರು, ಒಂದೇ ಗಮನದಿಂದ ಒಟ್ಟಾಗಿ ಕೆಲಸ ಮಾಡಿದರು ಮತ್ತು ಗುರಿ ತಲುಪುವವರೆಗೆ ಪ್ರತಿಯೊಂದು ಅಡಚಣೆಯನ್ನು ಎದುರಿಸಿ ನಿಂತರು' ಎಂದಿದ್ದಾರೆ.

110 ದಿನಗಳ ಚಿತ್ರೀಕರಣದ ನಂತರ ಚಿತ್ರ ಮುಗಿದಿದೆ. ಪ್ರಮುಖ ಸಿಜಿ, ಡಬ್ಬಿಂಗ್ ಮತ್ತು ಹಿನ್ನೆಲೆ ಸಂಗೀತ ಕೆಲಸಗಳು ಈಗಾಗಲೇ ಪ್ರಗತಿಯಲ್ಲಿದ್ದು, ಮಾರ್ಕ್ ಬಿಡುಗಡೆಗೂ ಮುನ್ನವೇ ಪೂರ್ಣಗೊಳ್ಳುವ ಹಾದಿಯಲ್ಲಿದೆ.

ಸತ್ಯಜ್ಯೋತಿ ಫಿಲ್ಮ್ ಮತ್ತು ಕಿಚ್ಚ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾದ ಮಾರ್ಕ್ ಚಿತ್ರಕ್ಕೆ ಶೇಖರ್ ಚಂದ್ರ ಅವರ ಛಾಯಾಗ್ರಹಣವಿದ್ದರೆ, ಬಿ. ಅಜನೀಶ್ ಲೋಕನಾಥ್ ಸಂಗೀತ ಸಂಯೋಜಿಸಿದ್ದಾರೆ. ಇತ್ತೀಚೆಗೆ ಬಿಡುಗಡೆಯಾದ ಟೀಸರ್ ಪ್ರಶಂಸೆ ಗಳಿಸಿದೆ.

# 'ಜೈಲರ್ 2' ಚಿತ್ರದಲ್ಲಿ ನಟಿ ಮೇಘನಾ ರಾಜ್ ಸರ್ಜಾ

**ರಜನಿಕಾಂತ್ ನಟನೆಯ 'ಜೈಲರ್ 2' ಈಗಾಗಲೇ ಭಾರತೀಯ ಚಿತ್ರರಂಗದಲ್ಲಿ ಅತಿ ಹೆಚ್ಚು ಚರ್ಚೆಗೆ ಗ್ರಾಸವಾಗಿರುವ ಚಿತ್ರಗಳಲ್ಲಿ ಒಂದಾಗಿದೆ. ಇದೀಗ ಹೊಸ ಸುದ್ದಿಯೆಂದರೆ, ನಟಿ ಮೇಘನಾ ರಾಜ್ ಸರ್ಜಾ ಚಿತ್ರತಂಡವನ್ನು ಸೇರಿಕೊಂಡಿದ್ದಾರೆ ಎಂದು ವರದಿಯಾಗಿದೆ. ನೆಲ್ಸನ್ ನಿರ್ದೇಶನದ 2023ರ ಬ್ಲಾಕ್‌ಬಸ್ಟರ್ 'ಜೈಲರ್' ಚಿತ್ರದ ಸೀಕ್ವೆಲ್ 'ಜೈಲರ್ 2' ಆಗಿದೆ. ತಮಿಳು ಚಿತ್ರ 'ನಂದ ನಂದಿತ' (2012) ನಲ್ಲಿ ಕೊನೆಯ ಬಾರಿಗೆ ಕಾಣಿಸಿಕೊಂಡ ಮೇಘನಾ, ಈ ಪ್ಯಾನ್-ಇಂಡಿಯನ್ ಚಿತ್ರದ ಮೂಲಕ ಮತ್ತೆ ಕಾಲಿವುಡ್‌ಗೆ ಕಾಲಿಡುತ್ತಿದ್ದಾರೆ.**



'ತತ್ಸಮ ತದ್ಭವ' ಮತ್ತು ಇರುವುವುದೆಲ್ಲವ ಬಿಟ್ಟು (2018) ಚಿತ್ರಕ್ಕಾಗಿ ರಾಜ್ಯ ಪ್ರಶಸ್ತಿಯನ್ನು ಗಳಿಸಿದ್ದ ಮೇಘನಾ, ಸದ್ಯ 'ಬುದ್ಧಿವಂತ 2' ಚಿತ್ರದ ಬಿಡುಗಡೆಗೆ ಎದುರು ನೋಡುತ್ತಿದ್ದಾರೆ. ಕಾದಲ್ ಸೊಲ್ಲ ವಂದೇನ್ (2010) ಮತ್ತು ಉಯರ್ತಿರು 420 (2011) ತಮಿಳು ಚಿತ್ರಗಳಲ್ಲಿ ಕಾಣಿಸಿಕೊಂಡಿದ್ದ ಮೇಘನಾ, ಜೈಲರ್ 2 ಮೂಲಕ ಮತ್ತೆ ತಮಿಳು ಚಿತ್ರರಂಗಕ್ಕೆ ರೀಎಂಟ್ರಿ ನೀಡುತ್ತಿದ್ದಾರೆ.

ಮಲಯಾಳಂ ಚಿತ್ರರಂಗದಲ್ಲಿಯೂ ಉತ್ತಮ ಪ್ರದರ್ಶನ ನೀಡಿದ್ದ ಮೇಘನಾ, ಸುರೇಶ್ ಗೋಪಿ ನಟಿಸಿರುವ 'ಒಟ್ಟಕೊಂಬನ್' ಚಿತ್ರದ ಮೂಲಕ ಮತ್ತೆ ಚಿತ್ರರಂಗಕ್ಕೆ ಮರಳುತ್ತಿದ್ದಾರೆ. ಈಗ ನಿರ್ಮಾಣ ಹಂತದಲ್ಲಿರುವ ಈ ಚಿತ್ರವನ್ನು ಮ್ಯಾಥ್ಯೂಸ್ ಥಾಮಸ್ ನಿರ್ದೇಶಿಸಿದ್ದಾರೆ. ಸನ್ ಪಿಕ್ಚರ್ಸ್ ಅಡಿಯಲ್ಲಿ ಕಲಾನಿಧಿ ಮಾರನ್ ನಿರ್ಮಿಸಿರುವ ಜೈಲರ್ 2 ಚಿತ್ರದಲ್ಲಿ ರಮ್ಯಾ ಕೃಷ್ಣನ್, ಯೋಗಿ ಬಾಬು ಮತ್ತು ಮಿರ್ನಾ ನಟಿಸಿದ್ದಾರೆ. ಜೈಲರ್ ಚಿತ್ರದಲ್ಲಿ ನಟಿಸಿದ್ದ ಶಿವ ರಾಜ್‌ಕುಮಾರ್ ಕೂಡ ಈ ಸೀಕ್ವೆಲ್‌ಗೆ ಮರಳಲಿದ್ದಾರೆ ಎಂಬುದು ದೃಢಪಟ್ಟಿದೆ. ಮೊದಲ ಭಾಗದಲ್ಲಿ ನಟಿಸಿದ್ದ ಮೋಹನ್ ಲಾಲ್, ಎಸ್‌ಜೆ ಸೂರ್ಯ, ಮಿಥುನ್ ಚಕ್ರವರ್ತಿ, ವಿದ್ಯಾ ಬಾಲನ್ ಮತ್ತು ಸಂತಾನಂ ಕೂಡ ಇದ್ದಾರೆ.

ಮೂಲಗಳ ಪ್ರಕಾರ, ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ ಎಂದು ಹೇಳಲಾಗುತ್ತಿರುವ ಮೇಘನಾ ಈಗಾಗಲೇ ಸೆಟ್‌ಗಳಿಗೆ ಸೇರಿದ್ದಾರೆ ಮತ್ತು ಕಳೆದ ಕೆಲವು ದಿನಗಳಿಂದ ಚಿತ್ರೀಕರಣದಲ್ಲಿದ್ದಾರೆ. ಅಧಿಕೃತ ದೃಢೀಕರಣ ಮತ್ತು ಅವರ ಪಾತ್ರದ ವಿವರಗಳು ಇನ್ನೂ ಗೌಪ್ಯವಾಗಿವೆ.

ಈಮಧ್ಯೆ, ಮೇಘನಾ 'ಅಮರ್ತ' ಚಿತ್ರದಲ್ಲಿ ಶ್ರೀನಗರ ಕಿಟ್ಟಿಯೊಂದಿಗೆ ನಟಿಸುತ್ತಿದ್ದಾರೆ. ಜೈಲರ್ 2 ಈಗಾಗಲೇ ಭಾರಿ ನಿರೀಕ್ಷೆಯನ್ನು ಹುಟ್ಟುಹಾಕಿದ್ದು, ಮೇಘನಾ ರಾಜ್ ಸರ್ಜಾ ಅವರು ಪ್ಯಾನ್-ಇಂಡಿಯನ್ ನಟಿಯಾಗಿ ತಮ್ಮ ವೃತ್ತಿಜೀವನದ ಮುಂದಿನ ಹಂತಗಳಲ್ಲಿ ಹೇಗೆ ಕಾಣಿಸಿಕೊಳ್ಳುತ್ತಾರೆ ಎಂಬುದನ್ನು ಕಾದುನೋಡಬೇಕಾಗಿದೆ.


## ರಾಜಮೌಳಿ-ಮಹೇಶ್ ಬಾಬು ಚಿತ್ರದಲ್ಲಿ 'ಮಂದಾಕಿನಿ' ಆದ ಪ್ರಿಯಾಂಕಾ ಚೋಪ್ರಾ

ರಾಜಮೌಳಿ ನಿರ್ದೇಶನದ ಮಹೇಶ್ ಬಾಬು ನಟನೆಯ ಚಿತ್ರದಲ್ಲಿ ಬಹುಭಾಷಾ ನಟಿ ಪ್ರಿಯಾಂಕಾ ಚೋಪ್ರಾ ನಟಿಸುತ್ತಿದ್ದು, ಚಿತ್ರತಂಡ ಪೋಸ್ಟರ್ ರಿಲೀಸ್ ಮಾಡಿದೆ. ಚಿತ್ರದಲ್ಲಿ ಪ್ರಿಯಾಂಕಾ ಮಂದಾಕಿನಿಯಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಚಿತ್ರಕ್ಕೆ ತಾತ್ಕಾಲಿಕವಾಗಿ SSMB29 ಎಂದು ಹೆಸರಿಡಲಾಗಿದೆ.

ಗುಂಡಿನ ಕಾಳಗದ ನಡುವೆ ಹಳದಿ ಸೀರೆಯುಟ್ಟ ಪ್ರಿಯಾಂಕಾ ಗನ್ ಹಿಡಿದು ಶೂಟ್ ಮಾಡುತ್ತಿರುವುದು ಕಂಡುಬರುತ್ತದೆ. ಈ ಚಿತ್ರವು ಆಕ್ಷನ್ ಚಿತ್ರವಾಗುತ್ತದೆಯೇ ಅಥವಾ ಸೈನ್ಸ್ ಫಿಕ್ಷನ್ ಚಿತ್ರವೇ ಎಂಬುದಕ್ಕೆ ಇನ್ನೂ ಉತ್ತರ ಸಿಕ್ಕಿಲ್ಲ. ಇತ್ತೀಚೆಗಷ್ಟೇ ಬಿಡುಗಡೆಯಾಗಿರುವ ಪೃಥ್ವಿರಾಜ್ ಸುಕುಮಾರನ್ ಅವರ ಪಾತ್ರದ ಪೋಸ್ಟರ್‌ನಲ್ಲಿ, ನಟನನ್ನು ಸೈಬರ್ನೆಟಿಕ್ ಕೈಗಳನ್ನು ಹೊಂದಿರುವ ವ್ಹೀಲ್‌ಚೇರ್‌ನಲ್ಲಿ ಕುಳಿತಿರುವಂತೆ ತೋರಿಸಲಾಗಿದೆ. ಖಖಃ29 ನಲ್ಲಿ ಪೃಥ್ವಿರಾಜ್ ಕುಂಭನ ಪಾತ್ರವನ್ನು ನಿರ್ವಹಿಸಲಿದ್ದಾರೆ.

2019ರ 'ದಿ ಸ್ಕೈ ಈಸ್ ಪಿಂಕ್' ನಂತರ ಪ್ರಿಯಾಂಕಾ 'SSMB29' ಚಿತ್ರದ ಮೂಲಕ ಭಾರತೀಯ ಚಿತ್ರರಂಗಕ್ಕೆ ಮರಳುತ್ತಿದ್ದಾರೆ. 'ದಿ ಸ್ಕೈ ಈಸ್ ಪಿಂಕ್' ನಲ್ಲಿ, ನಟಿ ಅದಿತಿ ಚೌಧರಿ ಪಾತ್ರವನ್ನು ನಿರ್ವಹಿಸಿದ್ದಾರೆ.

ಚಿತ್ರದಲ್ಲಿ ಚೌಧರಿ ಅವರ ಮಗಳು ಆಯಿಷಾ ತೀವ್ರ ಸಂಯೋಜಿತ ಇಮ್ಯುನೊ ಡಿಫಿಷಿಯನ್ಸಿ ಮತ್ತು



ಪಲ್ಮನರಿ ಫೈಬ್ರೋಸಿಸ್‌ನಿಂದ ಬಳಲುತ್ತಿರುತ್ತಾರೆ. ಈ ಚಿತ್ರವು ಅದಿತಿ ಮತ್ತು ಅವರ ಪತಿ ನಿರೇನ್ ನಡುವಿನ ಮದುವೆಯನ್ನು ಆಯಿಷಾ ಅವರ ಕಣ್ಣುಗಳ ಮೂಲಕ ತೋರಿಸುತ್ತದೆ. ಫರಾನ್ ಅಕ್ತರ್ ಅವರು ನಿರೇನ್ ಮತ್ತು ಜೈರಾ ವಾಸಿಮ್ ಅವರು ಆಯಿಷಾ ಪಾತ್ರದಲ್ಲಿ ನಟಿಸಿದ್ದಾರೆ.

SSM:29 ನೊಂದಿಗೆ ಪ್ರಿಯಾಂಕಾ ತೆಲುಗು ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. ನವೆಂಬರ್ 15 ರಂದು ಹೈದರಾಬಾದ್‌ನ ರಾಮೋಜಿ ಫಿಲ್ಮ್ ಸಿಟಿಯಲ್ಲಿ ಅದ್ದೂರಿ ಶೀರ್ಷಿಕೆ ಅನಾವರಣ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈಮಧ್ಯೆ, ಎಂಎಂ ಕೀರವಾಣಿ ಸಂಯೋಜಿಸಿದ ಮತ್ತು ಶ್ರುತಿ ಹಾಸನ್ ಅವರು ಹಾಡಿರುವ 'ಗ್ಲೋಬ್‌ಟ್ರೋಟರ್' ಎಂಬ ಶೀರ್ಷಿಕೆಯ ಹಾಡು ಬಿಡುಗಡೆಯಾಯಿತು.

## ಕಾಳಿ ಗೌಡ ನಿರ್ದೇಶನದ 'ನಾಯಿ ಇದೆ ಎಚ್ಚರಿಕೆ' ಚಿತ್ರ ಬಿಡುಗಡೆ

ಥ್ರಿಲ್ಲರ್, ಹಾರರ್ ಮತ್ತು ಭಾವನೆಗಳ ಸಮ್ಮಿಶ್ರಣವಾಗಿರುವ 'ನಾಯಿ ಇದೆ ಎಚ್ಚರಿಕೆ!' ಚಿತ್ರವು ಬಿಡುಗಡೆಗೆ ಸಿದ್ಧವಾಗಿದೆ. ವೃತ್ತಿಯಲ್ಲಿ ವೈದ್ಯರಾಗಿರುವ ಡಾ. ಲೀಲಾ ಮೋಹನ್ ನಟನಾಗಿ ಇದೀಗ ಸ್ಯಾಂಡಲ್‌ವುಡ್‌ಗೆ ಪ್ರವೇಶಿಸುತ್ತಿದ್ದಾರೆ. ಈ ಚಿತ್ರವು ಜೀವನ ಮತ್ತು ಸಾವನ್ನು ಮೀರಿದ ನಾಯಿಯ ನಿಷ್ಠೆಯ ಕುರಿತು ಪ್ರೇಕ್ಷಕರಿಗೆ ಸಸ್ಪೆನ್ಸ್, ಭಾವನಾತ್ಮಕ ಮತ್ತು ಅರ್ಥಪೂರ್ಣ ಕಥೆಯನ್ನು ತೆರೆಮೇಲೆ ತರುತ್ತದೆ.ಡಾ. ಲೀಲಾ ಮೋಹನ್ ಅವರು ಲೀಲಾ ಎಂಬ ವೈದ್ಯನ ಪಾತ್ರವನ್ನು ನಿರ್ವಹಿಸುತ್ತಾರೆ. ಈ ಚಿತ್ರವು ನಾಯಿ ಕಡಿತದ ಮಾನಸಿಕ ಮತ್ತು ಭಾವನಾತ್ಮಕ ಪರಿಣಾಮಗಳ ಕುರಿತು ಹೇಳುತ್ತದೆ. ಮಾನವರು ಮತ್ತು ಪ್ರಾಣಿಗಳ ನಡುವಿನ ಆಳವಾದ ಬಾಂಧವ್ಯವನ್ನು ಎತ್ತಿ ತೋರಿಸುತ್ತದೆ. ಚಿತ್ರಕ್ಕೆ ಆಕ್ಷನ್ ಕಟ್ ಹೇಳಿರುವ ಕಾಳಿ ಗೌಡ ಅವರಿಗೆ ಇದು ಎರಡನೇ ಚಿತ್ರವಾಗಿದೆ.

# ಇಂಜಿನಿಯರ್‌ಗಳು ಕಾಮಗಾರಿ ಖುದ್ದು ಉಸ್ತುವಾರಿ ನಿರ್ವಹಿಸಿ: ಹೆಚ್.ಡಿ.ತಮ್ಮಯ್ಯ



**ಚಿಕ್ಕಮಗಳೂರು:** ಸಾರ್ವಜನಿಕರ ತೆರಿಗೆ ಹಣವಾದ ಸರ್ಕಾರ ಅನುದಾನದಲ್ಲಿ ಶಾಶ್ವತ ಗುಣಮಟ್ಟದ ಕಾಮಗಾರಿ ಕೈಗೊಳ್ಳಬೇಕೆಂಬ ನಿಟ್ಟಿನಲ್ಲಿ ಇಂಜಿನಿಯರ್‌ಗಳು ಸ್ಥಳದಲ್ಲಿಯೇ ನಿಂತು ಗುತ್ತಿಗೆದಾರರೊಂದಿಗೆ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ನಿರ್ವಹಿಸಬೇಕೆಂದು ಶಾಸಕ ಹೆಚ್.ಡಿ.ತಮ್ಮಯ್ಯ ಸೂಚನೆ ನೀಡಿ-ದರು.

ಅವರು ಇಂದು ನಗರದ ವಿವಿಧ ಬಡಾವಣೆಗಳಲ್ಲಿ ಸುಮಾರು 6.17 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ, 'ಸೈಕಲ್ ತುಳಿ ಸಮಸ್ಯೆ ತಿಳಿ' ಎಂಬ ಘೋಷಣೆಯೊಂದಿಗೆ ನಗರದಲ್ಲಿ ಸೈಕಲ್‌ನಲ್ಲಿ ಸಂಚರಿಸು ಮೂಲಕ ನಾಗರಿಕರ ಗಮನ ಸೆಳೆದರು.

ತಾಲ್ಲೂಕು ಕಚೇರಿ ಆವರಣದಲ್ಲಿರುವ ಸಂಕಷ್ಟಹರ ಗಣಪತಿ ದೇವಸ್ಥಾನದ ಮುಂಭಾಗ ರಸ್ತೆ ಅಭಿವೃದ್ಧಿಗೆ ಗುದ್ದಲಿ ಪೂಜೆ ನೆರವೇರಿಸಿದರಲ್ಲದೆ, ನಗರದ ಎಲ್ಲ ರಸ್ತೆಗಳು ಅಮೃತ್ ಯೋಜನೆ ಮತ್ತು ಯುಜಿಡಿ ಕಾಮಗಾರಿಯಿಂದ ಗುಂಡಿ ಬಿದ್ದಿದ್ದು, ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ರಸ್ತೆಗಳ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಂಡು 22.50 ಕೋಟಿ ರೂ. ವೆಚ್ಚದಲ್ಲಿ ಇನ್ನು ಮೂರು ತಿಂಗಳಲ್ಲಿ ಪೂರ್ಣಗೊಳಿಸುವುದಾಗಿ ಭರವಸೆ ನೀಡಿದರು.

ನಗರದಲ್ಲಿ ಹೆಚ್ಚು ಸಂಚಾರವಿರುವ ಪ್ರಮುಖ ರಸ್ತೆಗಳನ್ನು ಆದ್ಯತೆಯಾಗಿ ಪರಿಗಣಿಸಿ ಅಭಿವೃದ್ಧಿಪಡಿಸಬೇಕೆಂದು ನಗರಸಭೆ ಅಧಿಕಾರಿಗಳು ಹಾಗೂ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು. ಲೋಕೋಪಯೋಗಿ ಇಲಾಖೆಯಿಂದ ಒಂದು ಕೋಟಿ ರೂ.ವೆಚ್ಚದಲ್ಲಿ ಒಂದು ಕಿ.ಮೀ. ವರೆಗೆ ಪ್ರಮುಖ ರಸ್ತೆಯನ್ನು ಮರು ಡಾಂಬರೀಕರಣ ಮಾಡಲಾಗುತ್ತಿದೆ. ನಗರದ ಬಸವನಹಳ್ಳಿ ಮುಖ್ಯರಸ್ತೆಯಲ್ಲಿರುವ ಅರಳೀಮರ ಸಮೀಪದಿಂದ ಫುಡ್ ಪ್ಯಾಲೇಸ್‌ವರೆಗೆ ಮತ್ತು ಅಲ್ಲಿಂದ ಮುಂದುವರಿಸಿ ಒಕ್ಕಲಿಗರ ಸಮುದಾಯ ಭವನದವರೆಗೆ ರಸ್ತೆ ಡಾಂಬರೀಕರಣ ಮಾಡುವುದಾಗಿ ಹೇಳಿದರು.

50 ಲಕ್ಷ ರೂ ವೆಚ್ಚದಲ್ಲಿ ವಾರ್ಡ್ ನಂ.33 ರ ಕಾಲಭೈರವೇಶ್ವರ ದೇವಸ್ಥಾನದಿಂದ ಗಿರಿ ರಸ್ತೆವರೆಗೆ, ಶಾದಿಮಹಲ್‌ನಿಂದ ಛಾನಲ್‌ವರೆಗೆ ಡಾಂಬರೀಕರಣ ಮಾಡಲಾಗುವುದು ಎಂದ ಅವರು, ಅಭಿವೃದ್ಧಿ ವಿಷಯದಲ್ಲಿ ಕ್ಷೇತ್ರ ಮತ್ತು ನಗರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುವ ಜೊತೆಗೆ ಹೆಜ್ಜೆ ಗುರುತು ಉಳಿಸುವುದಾಗಿ ವಿಶ್ವಾಸ ವ್ಯಕ್ತಪಡಿಸಿದ ಅವರು, ಬಡವರ ಪರ ಕೆಲಸ ಮಾಡಿ ಪ್ರೀತಿ ಗಳಿಸುವುದಾಗಿ ಹೇಳಿದರು. ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ನಗರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಾಸಕ ಹೆಚ್.ಡಿ. ತಮ್ಮಯ್ಯ ಅವರೊಂದಿಗೆ ಕೈಜೋಡಿಸಿ ನಾಗರಿಕರಿಗೆ ಅನುಕೂಲ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್ ಅಹಮದ್, ನಗರಸಭೆ ಉಪಾಧ್ಯಕ್ಷೆ ಲಲಿತಾನಾಯ್ಕ್, ಸದಸ್ಯರುಗಳಾದ ಎ.ಸಿ.ಕುಮಾರಗೌಡ, ಸಿ.ಪಿ.ಲಕ್ಷ್ಮಣ, ಪರಮೇಶ್, ರಾಜು, ಅರುಣ, ಮಂಜುಳ ಲಕ್ಷ್ಮಣ್, ಲಕ್ಷ್ಮಣ, ಮುಖಂಡರಾದ ಅಧ್ಯಕ್ಷ ಹೆಚ್.ಪಿ ಮಂಜೇಗೌಡ, ಪರಮೇಶ್‌ರಾಜ್ ಅರಸ್, ದೇವ್, ರಮೇಶ್, ಪಿಡಬ್ಲ್ಯೂಡಿ ಎಇಇ ಮಲ್ಲಿಕಾರ್ಜುನ್, ಮೆಸ್ಕಾಂ ಎಇಇ ಮಂಜುನಾಥ್ ಹಾಗೂ ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು. ಮೊದಲಿಗೆ ಮಾಜಿ ನಗರಸಭಾಧ್ಯಕ್ಷ ವರಸಿದ್ದಿ ವೇಣುಗೋಪಾಲ್ ಸ್ವಾಗತಿಸಿದರು.

## ನಗರದಲ್ಲಿಂದು ವಿಧಾನಸಭೆ ಅರ್ಜಿಗಳ ಸಮಿತಿ ಕಾರ್ಯಕ್ರಮ

**ಚಿಕ್ಕಮಗಳೂರು, ನ.18:** ಮಾನ್ಯ ವಿಧಾನಸಭಾ ಉಪಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಅವರ ಅಧ್ಯಕ್ಷತೆಯ ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯು ನವೆಂಬರ್ 20 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ವೈದ್ಯಕೀಯ ಕಾಲೇಜು ಕಟ್ಟಡಕ್ಕೆ ಭೇಟಿ ನೀಡಲಿದೆ. ನೂತನವಾಗಿ ನಿರ್ಮಾಣವಾಗುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ತಾಯಿ ಮಕ್ಕಳ ಆಸ್ಪತ್ರೆ ಕಟ್ಟಡಗಳು ಕಳಪೆ ಕಾಮಗಾರಿಯಿಂದ ಕೂಡಿದ್ದು, ಕಾಮಗಾರಿ ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವ ಕುರಿತು ಪರಿವೀಕ್ಷಣೆ ನಡೆಸಲಿದೆ. ನಂತರ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಮಿತಿಯು ಸಭೆ ನಡೆಸಲಿದ್ದು, ಮಧ್ಯಾಹ್ನ 3 ಗಂಟೆಗೆ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳಲಿದೆ.

## ಆಯುಷ್ ವೈದ್ಯರ ಹುದ್ದೆ: ಅಧಿಸೂಚನೆ ರದ್ದು

**ಚಿಕ್ಕಮಗಳೂರು, ನ.19:** ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಆಯುಷ್ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕ ಮಾಡುವ ಸಂಬಂಧ 2024ರ ಜುಲೈ 25 ರಂದು ಹೊರಡಿಸಿದ್ದ ಅಧಿಸೂಚನೆಯನ್ನು ಆಯುಕ್ತರು ರದ್ದುಪಡಿಸಿದ್ದು, ಈ ವರ್ಷದ ಸೆಪ್ಟಂಬರ್ 3ರ ಆದೇಶದನ್ವಯ, ಪ್ರಸ್ತುತ ಜಾರಿಯಲ್ಲಿರುವ ಹೊಸ ಮೀಸಲಾತಿ ನಿಯಮಗಳನ್ವಯ, ಜಿಲ್ಲಾ ಆಯುಷ್ ಸಮಿತಿಯ ಅನುಮೋದನೆಯೊಂದಿಗೆ ಹೊಸ ಅಧಿಸೂಚನೆ ಹೊರಡಿಸಲು ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳು ಸಮಿತಿಯ ಅಧ್ಯಕ್ಷರ ಅನುಮೋದನೆಯಂತೆ, ಈಗಾಗಲೇ 2024ರ ಜುಲೈ 25 ರಂದು ಹೊರಡಿಸಿರುವ ಅಧಿಸೂಚನೆಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದ್ದಾರೆ ಎಂದು ಆಯುಷ್ ಇಲಾಖೆಯ ಪ್ರಕಟಣೆ ತಿಳಿಸಿದೆ.

## ನ.24 ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಎಸ್‌ಸಿ, ಎಸ್‌ಟಿ ಕುಂದುಕೊರತೆ ಸಭೆ

**ಚಿಕ್ಕಮಗಳೂರು, ನ.19:** ನಗರದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ನವೆಂಬರ್ 24 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯದವರ ಕುಂದುಕೊರತೆ ಸಭೆಯನ್ನು ಏರ್ಪಡಿಸಲಾಗಿದ್ದು, ಜಿಲ್ಲೆಯ ಎಲ್ಲಾ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮುಖಂಡರುಗಳು ಹೆಚ್ಚಿನ ಸಂಖ್ಯೆಯ.ಲ್ಲಿ ಭಾಗವಹಿಸುವಂತೆ ಜಿಲ್ಲಾ ಪೊಲೀಸ್ ಇಲಾಖೆಯ ಕಚೇರಿ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಶಬರಿಮಲೆ ಯಾತ್ರಿಕರೇ ಎಚ್ಚರ ವಹಿಸಿ ಮಿದುಳು ತಿನ್ನುವ ಅಮೀಬಾ ಕುರಿತು ಆರೋಗ್ಯ ಸಚಿವಾಲಯದಿಂದ ಸಲಹೆ

**ಚಿಕ್ಕಮಗಳೂರು, ನ.19:** ಕೇರಳ ರಾಜ್ಯದಲ್ಲಿ ನೇಗ್ಲೇರಿಯಾ ಫೌಲೇರಿಯಿಂದ ಉಂಟಾಗುವ ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ ಪ್ರಕರಣಗಳು ಕಂಡು ಬಂದಿರುವ ಹಿನ್ನೆಲೆಯಲ್ಲಿ ರಾಜ್ಯದಿಂದ ಶಬರಿಮಲೆಗೆ ಹೊರಡುವ ಯಾತ್ರಿಕರು ತಮ್ಮ ಆರೋಗ್ಯದ ಬಗ್ಗೆ, ಜಾಗರೂಕರಾಗಿರಲು ಮತ್ತು ಸೋಂಕು ತಡೆಯಲು ಅಗತ್ಯ ಮುನ್ನೆಚ್ಚರಿಕೆ ಮತ್ತು ಸುರಕ್ಷಿತಾ ಕ್ರಮ ಪಾಲಿಸುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯವು ಸಲಹೆ ನೀಡಿದೆ.

ನೇಗ್ಲೇರಿಯಾ ಫೌಲೇರಿ ಎಂಬುದು ಒಂದು ಸ್ವತಂತ್ರವಾಗಿ ಬದುಕುವ ಅಮೀಬಾ ಆಗಿದ್ದು, ಇದು ಮುಖ್ಯವಾಗಿ ಬೆಚ್ಚಗಿನ ಸಿಹಿನೀರು ಹಾಗೂ ಮಣ್ಣಿನಲ್ಲಿ ಕಂಡು ಬರುತ್ತದೆ. ಉದಾಹರಣೆಗೆ ನಿಂತ ನೀರು, ಕೊಳ, ಈಜು ಕೊಳಗಳು ಹಾಗೂ ಕೆರೆಗಳು. ಈ ಸೋಂಕು ವ್ಯಕ್ತಿಯಿಂದ ವ್ಯಕ್ತಿಗೆ ಅಥವಾ ಕಲುಷಿತಗೊಂಡ ನೀರನ್ನು ಕುಡಿಯುವುದರಿಂದ ಹರಡುವುದಿಲ್ಲ. ನೇಗ್ಲೇರಿಯಾ ಫೌಲರಿ ಅತ್ಯಂತ ವಿಷಕಾರಿ ಸೂಕ್ಷ್ಮಾಣುಜೀವಿಯಾಗಿದ್ದು, ನೀರಿನಿಂದ ಮೂಗಿಗೆ ಪ್ರವೇಶಿಸಿದಾಗ ಅದು ಮೆದುಳನ್ನು ತಲುಪಿ, ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ ಎನ್ನುವ ಅಪರೂಪದ ಗಂಭೀರ ಮತ್ತು ಮಾರಣಾಂತಿಕ ಖಾಯಿಲೆಯನ್ನು ಉಂಟು ಮಾಡುತ್ತದೆ. ಯಾತ್ರೆಯ ಸಂದರ್ಭದಲ್ಲಿ ನಿಂತ ನೀರಿನಲ್ಲಿ ಸ್ನಾನ ಮಾಡುವಾಗ ನೀರು ಪ್ರವೇಶಿಸದಂತೆ ಮೂಗಿನ ಕ್ಲಿಪ್‌ಗಳನ್ನು ಬಳಸಿ ಅಥವಾ ನಿಮ್ಮ ಮೂಗನ್ನು ಬಿಗಿಯಾಗಿ ಮುಚ್ಚಿ ಹಿಡಿದು ಮುನ್ನೆಚ್ಚರಿಕೆ ವಹಿಸುವುದು ಸೂಕ್ತ. ನೀರಿನ ಸಂಪರ್ಕದ ಏಳು ದಿನಗಳ ಒಳಗೆ ಜ್ವರ, ತೀವ್ರ ತಲೆನೋವು. ವಾಕರಿಕೆ, ವಾಂತಿ, ಕುತ್ತಿಗೆ ಬಿಗಿತ, ಗೊಂದಲ, ಮಾನಸಿಕ ಸ್ಥಿತಿಗಳಲ್ಲಿ ಬದಲಾವಣೆಗಳು ಹಾಗೂ ವ್ಯಕ್ತಿಯ ವರ್ತನೆಯಲ್ಲಿ ಅಸ್ವಸ್ಥತೆಯ ಲಕ್ಷಣಗಳು ಕಾಣಿಸಿಕೊಂಡರೆ ನಿರ್ಲಕ್ಷಿಸದೆ ತುರ್ತು ಆರೈಕೆಯನ್ನು ಪಡೆಯಲು ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ವೈದ್ಯರನ್ನು ಸಂಪರ್ಕಿಸುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಚಿಕ್ಕಮಗಳೂರು, ನ.19:** ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ. ರೇವಣ್ಣ ಅವರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಸಂಜೆ ನಗರಕ್ಕೆ ಆಗಮಿಸಿದ್ದು, ನವೆಂಬರ್ 20 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಕಚೇರಿಯಲ್ಲಿ ಚಿಕ್ಕಮಗಳೂರು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇರಳದಲ್ಲಿ ಮೆದುಳು ತಿನ್ನುವ ಅಮೀಬಾ ಆತಂಕ

## ಅಯ್ಯಪ್ಪ ಭಕ್ತರಿಗೆ ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಬಿಡುಗಡೆ



**ಬೆಂಗಳೂರು:** ಕೇರಳದಲ್ಲಿ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಸ್ಥಾನವನ್ನು ಭಕ್ತರ ದರ್ಶನಕ್ಕಾಗಿ ತೆರೆಯಲಾಗಿದೆ. ಆದರೆ ಇದೇ ಸಂದರ್ಭದಲ್ಲಿ ಕೇರಳದಲ್ಲಿ ಮೆದುಳು ತಿನ್ನುವ ಅಮೀಬಾ ರೋಗದ ಹಾವಳಿಯೂ ಜೋರಾಗಿದೆ. ಈ ವೈರಸ್ ಕರ್ನಾಟಕಕ್ಕೂ ಟೆನ್ಷನ್ ಹೆಚ್ಚಿಸಿದ್ದು, ಸದ್ಯ ಆರೋಗ್ಯ ಇಲಾಖೆ ಅಲರ್ಟ್ ಆಗಿದೆ. ಇದೀಗ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಶಬರಿಮಲೆ ಅಯ್ಯಪ್ಪ ಭಕ್ತರಿಗಾಗಿ ಮಾರ್ಗಸೂಚಿ ಬಿಡುಗಡೆ ಮಾಡಿದೆ.

ಈಗಾಗಲೇ ಕೇರಳದಲ್ಲಿ ನೂರಾರು ಜನರಿಗೆ ಬಾಧಿಸುತ್ತಿರುವ ಈ ವೈರಸ್, ರಾಜ್ಯದಿಂದ ಶಬರಿ ಮಲೆಗೆ ಹೋಗುವ ಭಕ್ತರ ಟೆನ್ಷನ್‌ಗೆ ಕಾರಣವಾಗಿದೆ. ಹೀಗಾಗಿ ಭಕ್ತರ ಆರೋಗ್ಯ ರಕ್ಷಣೆಗೆ ಮುಂದಾಗಿರುವ ಆರೋಗ್ಯ ಇಲಾಖೆ ಹೊಸ ಮಾರ್ಗಸೂಚಿ ಬಿಡುಗಡೆಗೆ ಮಾಡಿದೆ.

### ಆರೋಗ್ಯ ಇಲಾಖೆಯ ಮಾರ್ಗಸೂಚಿಯಲ್ಲಿ ಏನಿದೆ?

ನೇಗ್ಲೇರಿಯಾ ಫೌಲೇರಿ ಎಂಬುದು ಒಂದು ಸ್ವತಂತ್ರವಾಗಿ ಬದುಕುವ ಅಮೀಬಾ ಆಗಿದ್ದು, ಇದು ಮುಖ್ಯವಾಗಿ ಬೆಚ್ಚಗಿನ ಸಿಹಿನೀರು ಹಾಗೂ ಮಣ್ಣಿನಲ್ಲಿ ಕಂಡುಬರುತ್ತದೆ. ಉದಾಹರಣೆಗೆ ನಿಂತ ನೀರು, ಕೊಳ, ಈಜು ಕೊಳಗಳು ಹಾಗೂ ಕೆರೆ.

ಈ ಸೋಂಕು ವ್ಯಕ್ತಿಯಿಂದ ವ್ಯಕ್ತಿಗೆ ಅಥವಾ ಕಲುಷಿತಗೊಂಡ ನೀರನ್ನು ಕುಡಿಯುವುದರಿಂದ ಹರಡುವುದಿಲ್ಲ.

ನೇಗ್ಲೇರಿಯಾ ಫೌಲೇರಿ ಅತ್ಯಂತ ವಿಷಕಾರಿ ಸೂಕ್ಷ್ಮಜೀವಿಯಾಗಿದ್ದು, ನೀರಿನಿಂದ ಮೂಗಿಗೆ ಪ್ರವೇಶಿಸಿದಾಗ ಅದು ಮೆದುಳನ್ನು ತಲುಪಿ, ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ ಎನ್ನುವ ಅಪರೂಪದ ಗಂಭೀರ, ಮಾರಣಾಂತಿಕ ಖಾಯಿಲೆಯನ್ನು ಉಂಟುಮಾಡುತ್ತದೆ. ಯಾತ್ರೆಯ ಸಂದರ್ಭದಲ್ಲಿ ನಿಂತ ನೀರಿನಲ್ಲಿ ಸ್ನಾನ ಮಾಡುವಾಗ ನೀರು ಪ್ರವೇಶಿಸದಂತೆ ಮೂಗಿನ ಕ್ಲಿಪ್ ಗಳನ್ನು ಬಳಸಿ ಅಥವಾ ನಿಮ್ಮ ಮೂಗನ್ನು ಬಿಗಿಯಾಗಿ ಮುಚ್ಚಿ ಹಿಡಿದು ಮುನ್ನೆಚ್ಚರಿಕೆ ವಹಿಸಿ.

ನೀರಿನ ಸಂಪರ್ಕದ ಏಳು ದಿನಗಳ ಒಳಗೆ ಜ್ವರ, ತೀವ್ರ ತಲೆನೋವು, ವಾಕರಿಕೆ, ವಾಂತಿ, ಕುತ್ತಿಗೆ ಬಿಗಿತ, ಗೊಂದಲ, ಮಾನಸಿಕ ಸ್ಥಿತಿಗಳಲ್ಲಿ ಬದಲಾವಣೆಗಳು ಹಾಗೂ ವ್ಯಕ್ತಿಯ ವರ್ತನೆಯಲ್ಲಿ ಅಸ್ವಸ್ಥತೆ ಲಕ್ಷಣಗಳು ಕಾಣಿಸಿಕೊಂಡರೆ ನಿರ್ಲಕ್ಷಿಸದೆ ತುರ್ತು ಆರೈಕೆಯನ್ನು ಪಡೆಯಲು ಹತ್ತಿರದ ಸರ್ಕಾರಿ ಆಸ್ಪತ್ರೆ,ವೈದ್ಯರನ್ನು ಸಂಪರ್ಕಿಸಿ.

ಸಾಮಾನ್ಯವಾಗಿ ನಿಂತ ನೀರು, ಕೊಳಗಳು ಮತ್ತು ಸರೋವರಗಳಲ್ಲಿ ಈ ಅಮೀಬಾ ಬೆಳೆಯುತ್ತೆ. ಒಂದು ವೇಳೆ ಅಂತಹ ನೀರಿನಲ್ಲಿ ಈಜಾಡಿದರೆ, ಆ ಅಮೀಬಾವು ಮೂಗಿನ ಮೂಲಕ ನಮ್ಮ ಮೆದುಳನ್ನ ಹೊಕ್ಕು ನೇರವಾಗಿ ಕೇಂದ್ರ ನರವ್ಯೂಹಕ್ಕೆ ಹಾನಿಯುಂಟು ಮಾಡುತ್ತದೆ. ಕೆಲವೊಮ್ಮೆ ಸೋಂಕಿನ ಪ್ರಮಾಣ ಹೆಚ್ಚಾದರೆ ಸಾವು ಕೂಡ ಸಂಭವಿಸಬಹುದು.

## ಸಾಲಭಾದೆ ರೈತ ಆತ್ಮಹತ್ಯೆ

**ಔರಾದ್:** ಕೃಷಿ ಚಟುವಟಿಕೆಗೆ ಮಾಡಿದ ಸಾಲ ತೀರಿಸಲಾಗದೆ ಮನನೊಂದು ರೈತನೋರ್ವ ವಿಷ ಕುಡಿದು ಮೃತ ಪಟ್ಟಿರುವ ಘಟನೆ ಮಂಗಳವಾರ ತಾಲೂಕಿನ ಪಾಷಾಪುರ ಗ್ರಾಮದಲ್ಲಿ ನಡೆದಿದೆ.

ಪವನ ಮಾರುತಿ ಆಲೂರೆ (25) ವಿಷಯ ಕುಡಿದು ಮೃತಪಟ್ಟ ಯುವ ರೈತನಾಗಿದ್ದಾನೆ. ಕೌಠಾ (ಬಿ) ಕೆನರಾ ಬ್ಯಾಂಕಿನಲ್ಲಿ ಬಂಗಾರದ ಆಭರಣಗಳು ಅಡವಿಟ್ಟು ಕೃಷಿ ಚಟುವಟಿಕೆಯ ಪ್ರಯುಕ್ತ ಸಾಲ ಪಡೆದುಕೊಂಡಿ-ದ್ದು, ಈ ವರ್ಷ ಅತಿವೃಷ್ಟಿಯಿಂದ ಬೆಳೆ ಹಾನಿಯಾದ ಕಾರಣ ಮಾಡಿದ ಸಾಲವನ್ನು ಹೇಗೆ ತೀರಿಸಬೇಕು ಅಂತ ಹೇಳಿ ಮನಸ್ಸಿನ ಮೇಲೆ ಪರಿಣಾಮ ಮಾಡಿಕೊಂಡು ತನ್ನ ಹೊಲದಲ್ಲಿ ಹುಲ್ಲಿಗೆ ಹೊಡೆಯುವ ಔಷಧಿಯನ್ನು ಸೇವನೆ ಮಾಡಿದ್ದು, ಚಿಕಿತ್ಸೆ ಫಲಕಾರಿಯಾಗದೆ ಬೀದರ್ ಬ್ರೀಮ್ಸ್ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾನೆ

# ರಾಷ್ಟ್ರ ಕಂಡ ಅಪರೂಪದ ಜನನಾಯಕಿ ಇಂದಿರಾಗಾಂಧಿ : ತಮ್ಮಯ್ಯ



**ಚಿಕ್ಕಮಗಳೂರು:** ದೇಶಕ ಆರ್ಥಿಕತೆ ಗಟ್ಟಿಗೊಳಿಸಿ, ಉಳುವವನಿಗೆ ಭೂ ಒಡೆಯನೆಂಬ ಕಾನೂನು ಜಾರಿಗೊಳಿಸಿ, ರೈತರ ಬೆನ್ನೆಲುಬಾಗಿ ನಿಂತ ಮಾಜಿ ಪ್ರಧಾನಿ ಇಂದಿರಾಗಾಂಧಿಯವರು ರಾಷ್ಟ್ರಕಂಡ ಅಪರೂಪ ಜನನಾಯಕಿ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಇಂದಿರಾಗಾಂಧಿ ಬಡಾವಣೆಯಲ್ಲಿ ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದಿಂದ ಇಂದು ಆಯೋಜಿಸಿದ್ದ ಮಾಜಿ ಪ್ರಧಾನಿ ದಿ. ಇಂದಿರಾಗಾಂಧಿಯವರ 108ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ದೇಶ ಹಾಗೂ ನಾಡಿನಲ್ಲಿ ಕಾಂಗ್ರೆಸ್ ಆಡಳಿತವು ಬಡವರು, ಶೋಷಿತರು ಹಾಗೂ ಹಿಂದುಳಿದವರ ಶ್ರೇಯೋಭಿವದ್ಧಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿದೆ. ರಾಷ್ಟ್ರದಲ್ಲಿ ಸುಮಾರು 16 ವರ್ಷಗಳ ಕಾಲ ಆಡಳಿತ ನಡೆಸಿದ ಇಂದಿರಾಗಾಂಧಿಯವರು ಉಕ್ಕಿನ ಮಹಿಳೆಯೆಂದೇ ಪ್ರಸಿದ್ಧಿ ಪಡೆದುಕೊಂಡವರು ಎಂದರು.

ಅಂದು ಪ್ರಧಾನಿಯಾಗಿದ್ದ ಇಂದಿರಾಗಾಂಧಿ ಪಾಕಿಸ್ತಾದ ವಿರುದ್ಧ ಯುದ್ದಸಾರಿ ವಿಜಯ ಸಾಧಿಸಿದಲ್ಲದೇ, ಚೀನಾ ವಿರುದ್ಧ ಧೃಢನಿರ್ಧಾರ ಕೈಗೊಂಡು ಗಟ್ಟಿತನ ಮೆರೆದವರು. ಅಲ್ಲಿಂದ ಇಲ್ಲಿಯತನಕ ಕಾಂಗ್ರೆಸ್ ಸರ್ಕಾರ ಆ ನಿಲುವಿನಲ್ಲೇ ಅಧಿಕಾರ ನಡೆಸಿದೆ. ಇಂದು ನಿವೇಶನರಹಿತ ಗ್ರಾಮಾಂತರ ನಿವಾಸಿಗಳಿಗೆ ಹಕ್ಕುಪತ್ರ ವಿತರಿಸಿ ಹಿರಿಯರ ಮಾರ್ಗದಲ್ಲಿ ಆಡಳಿತ ನಡೆಸುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲೂ ಸಹ ರೈಲ್ವೆ, ಬಸ್ ನಿಲ್ದಾಣ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಜನತೆಯ ಮೂಲ ಸೌಕರ್ಯಕ್ಕೆ ಕಾಂಗ್ರೆಸ್ ಕೊಡುಗೆ ಅಪಾರವಿದೆ. ದೇಶದ ಏಳಿಗೆಗೆ ಇಂದಿರಾಗಾಂಧಿಯವರು ಭವಿಷ್ಯದ ಹಾದಿ ಸುಗಮಗೊಳಿಸಲು ತಮ್ಮ ಸಂಪೂರ್ಣ ಜೀವನವನ್ನು ದೇಶಕ್ಕಾಗಿ ಮುಡಿಪಿಟ್ಟವರು ಎಂದರೆ ತಪ್ಪಾಗುವುದಿಲ್ಲ ಎಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯ-ಕ್ಷೆ ಶಬಾನ ಸುಲ್ತಾನ ಮಾತನಾಡಿ, ಚಿಕ್ಕಮಗಳೂರು ಇಂದಿರಾಗಾಂಧಿ ಅವರಿಗೆ ಮರುಜನ್ಮವಿತ್ತ ಕ್ಷೇತ್ರ. ಈ ಭಾಗದಲ್ಲಿ ನೆಚ್ಚಿನ ಶಾಸಕರ ನೇತೃತ್ವದಲ್ಲಿ ಬಡವರ ಮೂಲನಿವಾಸಿಗಳಿಗೆ ಹಕ್ಕುಪತ್ರ ವಿತರಿಸುವ ಕಾರ್ಯ ಪ್ರಗತಿಯಲ್ಲಿದೆ. ಅಲ್ಲದೇ ನೆಮ್ಮದಿ ಬದುಕಿಗೆ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆ ಜಾರಿಗೊಳಿಸಿ ಸ್ಪಂದಿಸುತ್ತಿದೆ ಎಂದು ಹೇಳಿದರು.

ಇದೇ ವೇಳೆ ಇಂದಿರಾಗಾಂಧಿ ಜನ್ಮದಿನದ ಪ್ರಯುಕ್ತ ಬಡಾವಣೆಯ ನಿವಾಸಿಗಳಿಗೆ ಹಣ್ಣು, ಸಿಹಿ ವಿತರಿಸಲಾಯಿತು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯ ಎ.ವಿ.ಗಾಯತ್ರಿ ಶಾಂತೇಗೌಡ, ನಗರಸಭೆ ಸದಸ್ಯರಾದ ಮುನೀರ್ ಅಹ್ಮದ್, ಖಲಂಧರ್, ಮಾಜಿ ಸದಸ್ಯೆ ಸುರೇಖಾ ಸಂಪತ್, ಜಿಲ್ಲಾ ಮಹಿಳಾ ಘಟಕ ಉಪಾಧ್ಯಕ್ಷರಾದ ಮಲ್ಲಿಕಾದೇವಿ, ನೇತ್ರಾವತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ.ಮಂಜೇಗೌಡ, ಮುಖಂಡರುಗಳಾದ ಕುಸುಮ, ರಾಮಚಂದ್ರ, ಅನ್ಸರ್‌ಆಲಿ, ಪ್ರಸಾದ್ ಅಮೀನ್, ಜಯಂತಿ, ಹಿರೇಗೌಜ ಶಿವು ಮತ್ತಿತರರು ಹಾಜರಿದ್ದರು.

# 'ಸಣ್ಣ ಕೈಗಾರಿಕೆಗಳಿಂದ ಆರ್ಥಿಕ ಅಭಿವೃದ್ಧಿ ಜೊತೆಗೆ ಉದ್ಯೋಗ ಸೃಷ್ಟಿ' : ಸಿ.ಎಂ.ಮಹೇಶ್ ಕುಮಾರ್



**ಚಿಕ್ಕಮಗಳೂರು, ನ,19:** ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ಆರ್ಥಿಕ ಅಭಿವೃದ್ಧಿಯ ಜೊತೆಗೆ ಉದ್ಯೋಗ ಸೃಷ್ಟಿಗೂ ನೆರವಾಗುತ್ತದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಪ್ರಭಾರ ಜಂಟಿ ನಿರ್ದೇಶಕ ಸಿ.ಎಂ. ಮಹೇಶ್ ಕುಮಾರ್ ಹೇಳಿದರು.

ಇಂದು ನಗರದ ಆದ್ರಿಕಾ ಹೋಟೆಲ್‌ನಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ ಎಂ.ಎಸ್. ಎಂ.ಇ..ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವ ಯೋಜನೆಯಡಿ ಲೀನ್ ಯೋಜನೆ ಮತ್ತು ಝಡ್.ಇ.ಡಿ. ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರ ಪ್ರೋತ್ಸಾಹ ನೀಡುತ್ತಿದ್ದು, ಕಾಸಿಯಾ ಸೇರಿದಂತೆ ವಿವಿಧ ಕೈಗಾರಿಕಾ ಸಂಸ್ಥೆಗಳ ಸಮಸ್ಯೆಗಳನ್ನು ಸರ್ಕಾರದ ಇತಿಮಿತಿಯಲ್ಲಿ ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಉದ್ದಿಮೆದಾರರಿಗೆ ರಫ್ತು ಕುರಿತು ತರಬೇತಿ ಸಹ ನೀಡಿ ಪ್ರೋತ್ಸಾಹಿಸಲಾಗುತ್ತಿದೆ ಎಂದು ಹೇಳಿದರು.

ಲೀನ್ ಯೋಜನೆ ಮತ್ತು ಝಡ್.ಇ.ಡಿ. ಹಾಗೂ ರಫ್ತು ಯೋಜನೆಗಳಿಂದ ವಿವಿಧ ಸೌಲಭ್ಯಗಳನ್ನು ಪಡೆದು ವ್ಯಾಪಾರ ಮತ್ತು ಸಂಘ–ಸಂಸ್ಥೆಗಳ ಜೊತೆ ಸೇರಿ ಯುವಕರು ನವ ಉದ್ಯಮವನ್ನು ಆರಂಭಿಸಿ ಉದ್ಯಮಶೀಲತೆ ಬೆಳೆಸಿಕೊಳ್ಳಬೇಕು ಎಂದ ಅವರು, ಸರ್ಕಾರ ಕೈಗಾರಿಕೆಗೆ ಸಂಬಂಧಿಸಿದ ವಿವಿಧ ಚಟುವಟಿಕೆ ಕೈಗೊಳ್ಳುವುದರಿಂದ ಯುವಕರು ಉದ್ಯಮ ಸ್ಥಾಪಿಸಲು ಒಂದು ಉತ್ತಮ ಅವಕಾಶವಾಗುತ್ತದೆ. ರೈತರು, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉದ್ಯಮಶೀಲತೆಯನ್ನು ಬೆಳೆಸಿಕೊಳ್ಳಬೇಕು. ಸರ್ಕಾರದಿಂದ ಸಣ್ಣ ಗುಡಿ ಕೈಗಾರಿಕೆ ಸ್ಥಾಪಿಸಲು ಸಬ್ಸಿಡಿ ವ್ಯವಸ್ಥೆ ಇದ್ದು, ಇದರ ಸೌಲಭ್ಯ ಪಡೆದು ನಿರುದ್ಯೋಗಿಗಳಿಗೆ ಕೆಲಸವನ್ನು ನೀಡಬೇಕು ಎಂದು ಹೇಳಿದರು.ಕಾಸಿಯ ಅಧ್ಯಕ್ಷ ಬಿ.ಆರ್.ಗಣೇಶ್‌ರಾವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

# ಚಳಿಗಾಲದ ಅಧಿವೇಶನಕ್ಕೆ ಸಕಲ ಸಿದ್ಧತೆ: ಹೊರಟ್ಟಿ



**ಹಾವೇರಿ:** ದಕ್ಷಿಣ ಕರ್ನಾಟಕದ ಶಾಸಕರು ಉತ್ತರ ಕರ್ನಾಟಕದ ಜನರ ಸಮಸ್ಯೆ ಚರ್ಚಿಸುತ್ತಾರೆ. ಆದರೆ ಉತ್ತರ ಕರ್ನಾಟಕದ ಶಾಸಕರು ಇಲ್ಲಿಯ ಸಮಸ್ಯೆ ಬಗ್ಗೆ ಚರ್ಚಿಸುವುದಿಲ್ಲ ಎಂದು ಬಸವರಾಜ್ ಹೊರಟ್ಟಿ ಹೇಳಿದರು.

ಹಾವೇರಿ: ಬೆಳಗಾವಿ ಸುವರ್ಣ ಸೌಧದಲ್ಲಿ ಚಳಿಗಾಲ ಅಧಿವೇಶನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ತಿಳಿಸಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಬೆಳಗಾವಿ ಚಳಿಗಾಲದ ಅಧಿವೇಶನ ಎಂದರೆ ಪ್ರತಿಭಟನೆಗೆ ಸೀಮಿತ ಎನ್ನುವ ಮಾತು ಇದೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ಈ ಆರೋಪದಿಂದ ಅದನ್ನು ದೂರ ಮಾಡಬೇಕು. ಶಿಕ್ಷಣ, ಉದ್ಯೋಗ ಸೇರಿದಂತೆ ಅಭಿವೃದ್ಧಿ ವಿಷಯ ಚರ್ಚೆಯಾಗಬೇಕು ಎಂದು ತಿಳಿಸಿದರು.

ಕಬ್ಬು ಬೆಳೆಗಾರರ ಅನೇಕ ಸಮಸ್ಯೆಗಳು ಇವೆ. ಸದನದಲ್ಲಿ ಗದ್ದಲ ಗಲಾಟೆ ಆಗದಂತೆ ನೋಡಿಕೊಳ್ಳುವುದು. ಸದನವನ್ನು ಮುಂದೂಡದೆ ಚರ್ಚೆ ಮಾಡಬೇಕು. ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡುತ್ತೇವೆ. ದಕ್ಷಿಣ ಕರ್ನಾಟಕದ ಶಾಸಕರು ಉತ್ತರ ಕರ್ನಾಟಕದ ಜನರ ಸಮಸ್ಯೆ ಚರ್ಚಿಸುತ್ತಾರೆ. ಆದರೆ, ಉತ್ತರ ಕರ್ನಾಟಕದ ಶಾಸಕರು ಇಲ್ಲಿಯ ಸಮಸ್ಯೆ ಬಗ್ಗೆ ಚರ್ಚಿಸುವುದಿಲ್ಲ ಎಂದು ತಿಳಿಸಿದರು.

ಪ್ರಶ್ನೋತ್ತರ ಮುಗಿದ ಬಳಿಕ ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು ಚರ್ಚೆ ಮಾಡುತ್ತೇವೆ. ಕಳೆದ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಉತ್ತರ ಕರ್ನಾಟಕದ ಶಾಸಕರು ಮಾತನಾಡಲಿಲ್ಲ. ದಕ್ಷಿಣ ಕರ್ನಾಟಕದ ಶಾಸಕರು ಮಾತನಾಡಿದ್ದಾರೆ. ಅದನ್ನು ಬರೆದು ಇಟ್ಟಿದ್ದೇನೆ. ಫೋನ್ ಮಾಡಿ ಎಲ್ಲಾ ಶಾಸಕರಿಗೂ ಹೇಳುತ್ತಿದ್ದೇನೆ ಎಂದು ಹೇಳಿದರು.ಶಾಸಕ ರಾಜು ಕಾಗೆ ಪ್ರತ್ಯೇಕ ರಾಜ್ಯದ ಕೂಗಿನ ಬಗ್ಗೆ ಮಾತನಾಡಿದ ಬಸವರಾಜ ಹೊರಟ್ಟಿ ಅವರು, ಪ್ರತ್ಯೇಕ ರಾಜ್ಯ ಮಾಡುವುದರಿಂದ ಸಮಸ್ಯೆ ಬಗೆಹರಿಯುವುದಿಲ್ಲ. ಕರ್ನಾಟಕದ ಏಕೀಕರಣಕ್ಕಾಗಿ ಬಹಳಷ್ಟು ಜನರು ಹೋರಾಟ ಮಾಡಿದ್ದಾರೆ. ಅಖಂಡ ಕರ್ನಾಟಕ ಇರಬೇಕು. ಪ್ರತ್ಯೇಕತೆಗೆ ನನ್ನ ಸಹಮತ ಇಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸದನದಲ್ಲಿ ಭಾಗವಹಿಸುವಂತೆ ಈಗಾಗಲೇ 38 ಜನರಿಗೆ ಮಾತನಾಡಿದ್ದೇನೆ. ಉಳಿದವರ ಜೊತೆಯೂ ಮಾತನಾಡುತ್ತೇನೆ. ಎಲ್ಲರೂ ಅಧಿವೇಶನದಲ್ಲಿ ಭಾಗವಹಿಸಿ ಸದನದ ಗೌರವ ಹೆಚ್ಚಿಸಬೇಕು ಎಂದು ಹೊರಟ್ಟಿ ಮನವಿ ಮಾಡಿದರು.

ಸಭಾಪತಿ ಹುದ್ದೆಯಿಂದ ಕೆಳಗಡೆ ಇಳಿಸುವ ವಿಚಾರದ ಕುರಿತು ಮಾತನಾಡಿದ ಅವರು, ನಾನು ಒಂದು ಸಲ ಪರಿಷತ್ ಸಭಾಪತಿ ಆಗಿದ್ದೇನೆ. ಎಷ್ಟು ವರ್ಷ ಆಗಿದ್ದರೂ ಮಾಜಿ ಆಗಲೇಬೇಕು. ವಿಧಾನ ಪರಿಷತ್ ಸಭಾಪತಿ ಹುದ್ದೆ ಬಗ್ಗೆ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ. ಸರ್ಕಾರ ಮತ್ತು ಶಾಸಕರು ತೆಗೆದುಕೊಳ್ಳುವ ತೀರ್ಮಾನಕ್ಕೆ ನಾನು ಬದ್ಧ ಎಂದು ತಿಳಿಸಿದರು.


## ಕಾರು ಡಿಕ್ಕಿ ಹೊಡೆದು ಬೈಕ್ ಸವಾರ ಸಾವು: ಆರೋಪಿಗೆ ಶಿಕ್ಷೆ

**ಕಲಬುರಗಿ:** ಅತಿ ವೇಗವಾಗಿ ಮತ್ತು ನಿರ್ಲಕ್ಷ ತನದಿಂದ ಕಾರು ಚಲಾಯಿಸಿಕೊಂಡು ಬಂದು ಬೈಕ್ ಡಿಕ್ಕಿ ಹೊಡೆದು ಬೈಕ್ ಸವಾರನ ಸಾವಿಗೆ ಕಾರಣನಾದ ಆರೋಪಿಗೆ ಅಫಜಲಪುರದ ಜೆಎಂಎಫ್‌ಸಿ ನ್ಯಾಯಾಲಯ ಎರಡು ತಿಂಗಳ ಸಾದಾ ಕಾರಾವಾಸ ಶಿಕ್ಷೆ ಮತ್ತು 10 ಸಾವಿರ ರೂ.ದಂಡ ವಿಧಿಸಿದೆ. ಅಫಜಲಪುರದ ಲಿಂಬಿತೋಟದ ಸಂತೋಷ ತಂದೆ ಲಕ್ಷ್ಮಣ ದರ್ಗಾಶಿರೂರ ಶಿಕ್ಷೆಗೆ ಗುರಿಯಾದ ಆರೋಪಿ.

2021ರಲ್ಲಿ ಬಸವರಾಜ ತಂದೆ ಉಮಲು ಚವ್ಹಾಣ್ ಎಂಬಾತ ಬೈಕ್ ಮೇಲೆ ಚವಡಾಪೂರದಿಂದ–ದೇವಲಗಾಣಗಾಪೂರ ಮಾರ್ಗವಾಗಿ ಅಂಕಲಗಾ ತಾಂಡಾಕ್ಕೆ ಹೋಗುತ್ತಿದ್ದಾಗ ಚೌಡಾಪುರ ಸೀಮಾಂತರದದಲ್ಲಿ ಕಾರು ಡಿಕ್ಕಿ ಹೊಡೆದು ಸ್ಥಳದಲ್ಲಿಯೇ ಮೃತಪಟ್ಟಿದ್ದರು.

ಈ ಬಗ್ಗೆ ದೇವಲಗಾಣಗಾಪೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪಿಎಸ್‌ಐ ಭೀಮರತ್ನ ಮತ್ತು ಸಿಪಿಐ ಜಗದೇವಪ್ಪಾ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಅಫಜಲಪುರ ಜೆಎಂಎಫ್‌ಸಿ ನ್ಯಾಯಾಲದ ದಿವಾಣಿ ಸಿವಿಲ್ ನ್ಯಾಯಾಧೀಶ ಅನೀಲ ಅಮಾಟೆ ಅವರು ಆರೋಪಿಗೆ ಎರಡು ತಿಂಗಳ ಸಾದಾ ಕಾರಾವಾಸ ಶಿಕ್ಷೆ ಮತ್ತು 10 ಸಾವಿರ ರೂ.ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

# ಐಪಿಎಲ್ ವಿಜಯೋತ್ಸವ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ ಕಾಲ್ತುಳಿತಕ್ಕೆ ಆರ್‌ಸಿಬಿ ಹೊಣೆ ಉಲ್ಲೇಖ



**ಬೆಂಗಳೂರು:** ಐಪಿಎಲ್ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಆರ್‌ಸಿಬಿಯೇ ನೇರ ಹೊಣೆ ಎನ್ನುವುದನ್ನು ಉಲ್ಲೇಖಿಸಿ ಆರೋಪಪಟ್ಟಿ (ಚಾರ್ಜ್ ಶೀಟ್) ಸಲ್ಲಿಕೆಗೆ ಸಿಐಡಿ ಸಿದ್ಧತೆ ಕೈಗೊಂಡಿ-ದೆ.

ಕಾಲ್ತುಳಿತ ದುರಂತದಲ್ಲಿ 11 ಮಂದಿ ಪ್ರಾಣ ಕಳೆದುಕೊಂಡ ಘಟನೆ ಇಡೀ ದೇಶವನ್ನೇ ಬೆಚ್ಚಿಬೀಳಿಸಿ ರಾಜ್ಯ ಸರ್ಕಾರ, ಪೊಲೀಸ್ ಇಲಾಖೆಯ ವಿರುದ್ಧವೂ ಹಲವು ಗಂಭೀರ ಪ್ರಶ್ನೆಗಳು ಕೇಳಿಬಂದಿತ್ತು. ಪ್ರಕರಣದ ತನಿಖೆಯನ್ನು ಕೈಗೆತ್ತಿ-ಕೊಂಡಿದ್ದ ಸಿಐಡಿ ಅಧಿಕಾರಿಗಳು ತನಿಖೆಯನ್ನು ಬಹುತೇಕ ಪೂರ್ಣಗೊಳಿಸಿ 2,200ಕ್ಕೂ ಹೆಚ್ಚು ಪುಟಗಳ ಚಾರ್ಜ್ ಶೀಟ್ ನ್ನು ಸಿದ್ಧಪಡಿಸಿದ್ದಾರೆ.

ತನಿಖೆ ವೇಳೆ ಆರ್‌ಸಿಬಿ, ಡಿಎನ್‌ಎ, ಕೆಎಸ್‌ಸಿಎ ವಿರುದ್ಧ ಹಲವು ಸಾಕ್ಷ್ಯಗಳನ್ನು ಉಲ್ಲೇಖಿಸಿ ನ್ಯಾಯಾಲಯಕ್ಕೆ 2,200 ಕ್ಕೂ ಪುಟಗಳ ಚಾರ್ಜ್‌ಶೀಟ್ ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ

ಆರ್‌ಸಿಬಿ ಜೊತೆ ಕೆಎಸ್‌ಸಿಎ,ಡಿಎನ್‌ಎ ಕಾಲ್ತುಳಿತಕ್ಕೆ ನೇರ ಹೊಣೆಯಾಗಿದ್ದು, ಚಾರ್ಜ್‌ಶೀಟ್‌ನಲ್ಲಿ ಮೂರು ಸಂಸ್ಥೆಗಳನ್ನು ಸಿಐಡಿ ನೇರ ಹೊಣೆ ಮಾಡಿ ಸರಿಯಾದ ಪ್ಲಾನ್ ಇಲ್ಲದೆಯೇ ಕಾರ್ಯಕ್ರಮ ಆಯೋಜಿಸಲಾಗಿತ್ತು. ಠರಾವೋ ಸರಿಯಾಗಿ ಮಾಡಿಲ್ಲ ಎನ್ನುವುದು ತನಿಖೆ ವೇಳೆ ಪತ್ತೆಯಾಗಿದೆ.

ಠರಾವೋ ಎಂದರೆ ಕಾರ್ಯಕ್ರಮ ಆಯೋಜನೆಗೂ ಮುನ್ನ ನಡೆದ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದ ಬಗ್ಗೆ ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಆದರೆ, ಸಭೆ ನಡೆಸಿ ಸರಿಯಾದ ಯೋಜನೆ ಇಲ್ಲದೆ ನಿರ್ಧಾರ ತೆಗೆದು-ಕೊಂಡಿರೋದು ಮತ್ತು ಟಿಕೆಟ್ ಬಗ್ಗೆ ಗೊಂದಲ, ಟ್ವೀಟ್, ಸುಳ್ಳು ವದಂತಿಯಿಂದ ಜನ ಸೇರಿ ಘಟನೆ ಸಂಭವಿಸಿದೆ.

ಆರ್‌ಸಿಬಿ ಟಿಕೆಟ್ ಬಗ್ಗೆ ಗೊಂದಲ ಹುಟ್ಟಿಸಿತ್ತು. ಇದು ಘಟನೆಗೆ ಮೊದಲ ಕಾರಣ ಎಂಬ ಅಂಶ ಬಯಲಾಗಿದೆ. ಅಲ್ಲದೇ ಡಿಎನ್‌ಎ ಕಡೆಯಿಂದ ಯಾವುದೇ ಭದ್ರತೆಯ ಯೋಜನೆಯ ಇರಲಿಲ್ಲ. ಖಾಸಗಿ ಸೆಕ್ಯುರಿಟಿ ಏಜೆನ್ಸಿ ಬಳಕೆಯಲ್ಲಿ ವಿಫಲವಾಗಿದೆ. ಪೊಲೀಸರ ಜೊತೆ ಕೂಡ ಸರಿಯಾದ ಮಾತುಕತೆ ನಡೆಸದೆ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**